23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 344 | ನವದೆಹಲಿ | ಬೆಲೆ ₹10 | ಜೂನ್ 19 2026, ಶುಕ್ರವಾರ




# Birthday Greetings to
# Shri Rahul Gandhi Ji





## Birthday Greetings to Shri Rahul Gandhi Ji,

On the occasion of the birthday of Shri Rahul Gandhi ji, Honourable Leader of the Opposition in the Lok Sabha I convey my heartfelt greetings and warm wishes.

Over the years, I have had the opportunity to closely observe Rahul ji's commitment to public life, his deep concern for the welfare of ordinary citizens, and his unwavering faith in the democratic values that define our nation. Our association spans many years of shared commitment to the Congress Party and its ideals. His encouragement, trust, and support have been a source of strength to many colleagues, including myself.

As Chief Minister of Karnataka, I deeply value his continued guidance and vision as we work towards building a more equitable, progressive, and compassionate society.

On this special day, I join the people of Karnataka, Congress workers, and countless well-wishers across the country in wishing Rahul Gandhi ji good health, happiness, and many more years of dedicated service to the nation.

**Happy Birthday, Rahul Ji.**



**D.K. Shivakumar**

Chief Minister of Karnataka

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಜೂನ್ 19 2026, ಶುಕ್ರವಾರ

## ಒಳಪುಟಗಳಲ್ಲಿ

ನೀಟ್ ಮರು ಪರೀಕ್ಷೆ ಹಿನ್ನೆಲೆ: ಟೆಲಿಗ್ರಾಂ ನಿಷೇಧ ಆದೇಶ ಕಾಯ್ದಿರಿಸಿದ ದೆಹಲಿ ಹೈಕೋರ್ಟ್- ಪು.4

# ಮೇಲ್ಮನೆ ಚುನಾವಣೆ: ಕಾಂಗ್ರೆಸ್‌ಗೆ 5- ಬಿಜೆಪಿಗೆ 2 ಗೆಲುವಿನ ಮಾಲೆ

## ಬಿಜೆಪಿಯ ಮೂವರು, ಜೆಡಿಎಸ್‌ನ ಏಳು ಶಾಸಕರ ಅಡ್ಡ ಮತದಾನ, ಬಿಜೆಪಿಯ 1 ಮತ ತಿರಸ್ಕೃತ

**ಬೆಂಗಳೂರು, ಜೂ.18:** ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್ತಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ನಿಂದ ಐವರು, ಬಿಜೆಪಿಯ ಇಬ್ಬರು ಗೆಲುವು ಸಾಧಿಸಿದ್ದು, ಕಾಂಗ್ರೆಸ್ ತನ್ನ ಐದನೇ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳುವಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಯಶಸ್ವಿಯಾಗಿದ್ದಾರೆ. ಈ ಗೆಲುವಿನ ಮೂಲಕ ಬಿಜೆಪಿ ಮತ್ತು ಜೆಡಿಎಸ್‌ಗೆ ಡಿ.ಕೆ.ಶಿ ಸ್ಪಷ್ಟ ಸಂದೇಶ ರವಾನಿಸಿದ್ದಾರೆ.



| ಕಾಂಗ್ರೆಸ್ ಅಭ್ಯರ್ಥಿಗಳು | | | | | ಬಿಜೆಪಿ ಅಭ್ಯರ್ಥಿಗಳು | |
|---|---|---|---|---|---|---|
| ಬಿ.ಕೆ. ಹರಿಪ್ರಸಾದ್ | ಪಿ.ವಿ. ಮೋಹನ್ | ಬಿ.ಎಸ್ ಶಿವಣ್ಣ | ತಿಪ್ಪಣ್ಣಪ್ಪ ಕಮಕನೂರ | ವಿನಯ್ ಕಾರ್ತಿಕ್ | ರಘು ಕೌಟಿಲ್ಯ | ಲಿಂಗರಾಜ ಪಾಟೀಲ್ |
| 30 | 29 | 30 | 30 | 32 | 29 | 27 |

ಇಡೀ ದೇಶದಲ್ಲಿ ಎದುರಾಳಿ ಪಕ್ಷಗಳನ್ನು ಧೂಳೀಪಟ ಮಾಡುತ್ತಿರುವ ಬಿಜೆಪಿಗೆ ಈ ಸೋಲು ಭಾರೀ ಹಿನ್ನಡೆಯುಂಟು ಮಾಡಿದ್ದು, ಬಿಜೆಪಿ ಹೈಕಮಾಂಡ್‌ಗೆ ತೀವ್ರ ಹಿನ್ನಡೆಯುಂಟು ಮಾಡಿದೆ. ರಾಜ್ಯ ಬಿಜೆಪಿ ನಾಯಕತ್ವ ಬದಲಾವಣೆ ವಿಷಯ ಮತ್ತೆ ಮುನ್ನೆಲೆಗೆ ಬರಲು ಈ ಫಲಿತಾಂಶ ನಾಂದಿಯಾಗುವ ನಿರೀಕ್ಷೆ ಇದೆ.

ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್, ಪಿ.ವಿ.ಮೋಹನ್, ತಿಪ್ಪಣ್ಣಪ್ಪ ಕಮಕನೂರು, ಮಾಳವಳ್ಳಿ ಶಿವಣ್ಣ ಹಾಗೂ 5ನೇ ಅಭ್ಯರ್ಥಿಯಾಗಿ ಡಿ.ಕೆ.ಶಿವಕುಮಾರ್ ಅವರ ಆಪ್ತ ವಿನಯ್ ಕಾರ್ತಿಕ್ ಗೆದ್ದಿದ್ದಾರೆ. ಬಿಜೆಪಿಯ ರಘುಕೌಟಿಲ್ಯ ಗೆದ್ದಿದ್ದು, ಲಿಂಗರಾಜ್ ಪಾಟೀಲ್‌ಗೆ ಪ್ರಯಾಸದ ಗೆಲುವು ಪ್ರಾಪ್ತವಾಗಿದೆ. ಜೆಡಿಎಸ್‌ನ ಗೋವಿಂದರಾಜ್ ಪರಾಭವ ಗೊಂಡಿದ್ದಾರೆ. ವಿನಯ್ ಕಾರ್ತಿಕ್ ಅತ್ಯಧಿಕ 32 ಮತಗಳನ್ನು ಪಡೆದು ಅಚ್ಚರಿ ಮೂಡಿಸಿದ್ದಾರೆ.

ಬಿಜೆಪಿ ಮತ್ತು ಜೆಡಿಎಸ್‌ನಿಂದಲೂ ಅಡ್ಡ ಮತದಾನವಾಗಿದೆ. ಬಿಜೆಪಿಯಿಂದ 3 ಮತ್ತು ಜೆಡಿಎಸ್‌ನಿಂದ 7 ಮತಗಳು ಕಾಂಗ್ರೆಸ್‌ನ ಐದನೇ ಅಭ್ಯರ್ಥಿ ವಿನಯ್ ಕಾರ್ತಿಕ್ ಅವರಿಗೆ ದೊರೆತಿದೆ. ವಿನಯ್ ಕಾರ್ತಿಕ ಗರಿಷ್ಠ 28 ಮತಗಳನ್ನು ಪಡೆಯುವ ನಿರೀಕ್ಷೆ ಹೊಂದಿದ್ದರು. ಆದರೆ ನಿರೀಕ್ಷೆಗೂ ಮೀರಿ ಗೆಲುವು ಸಾಧಿಸಿದ್ದಾರೆ. ಬಿಜೆಪಿಯ ಒಂದು ಮತ ಅಸಿಂಧುವಾಗಿದೆ. ಬಿಜೆಪಿಯ ಲಿಂಗರಾಜ್ ಪಾಟೀಲ್ ಕೇವಲ 27 ಮತಗಳನ್ನು ಪಡೆದಿದ್ದು, ಅವರಿಗೆ ಮೂರು ಮತಗಳು ಕಡಿಮೆಯಾಗಿವೆ. ಇದು ಬಿಜೆಪಿಯ ನಾಯಕತ್ವಕ್ಕೆ ತೀವ್ರ ಆತಂಕ ಮೂಡಿಸಿದೆ.

> “ಜೆಡಿಎಸ್, ಬಿಜೆಪಿ ಎರಡೂ ಪಕ್ಷದ ಶಾಸಕರು ಅಡ್ಡ ಮತದಾನ ಮಾಡಿದ್ದಾರೆ. ವಿಭಿನ್ನ ಪಕ್ಷ ಎಂದು ಕರೆಸಿಕೊಳ್ಳುವ ಬಿಜೆಪಿಯಿಂದಲೂ ಅಡ್ಡ ಮತದಾನ ಆಗಿದೆ. ಕಾಂಗ್ರೆಸ್ ಪಕ್ಷದ ಸಾಧನೆ ನೋಡಿ ನಮಗೆ ಮತಹಾಕಿದ್ದಾರೆ.
> ಬಿ.ಕೆ. ಹರಿಪ್ರಸಾದ್, ಅಧಕ್ಷರು, ಕೆಪಿಸಿಸಿ

ಆಡಳಿತರೂಢ ಕಾಂಗ್ರೆಸ್ ಪಕ್ಷವು ನಿರೀಕ್ಷೆಗೂ ಮೀರಿ ಪ್ರದರ್ಶನ ನೀಡಿದ್ದು, ತನ್ನ ಐವರು ಅಭ್ಯರ್ಥಿಗಳನ್ನು ಅಧಿಕೃತವಾಗಿ ಗೆಲ್ಲಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ಕೊನೆಯ ಕ್ಷಣದವರೆಗೂ ತೀವ್ರ ಪೈಪೋಟಿಯಿಂದ ಕೂಡಿದ್ದ ಈ ಹೈವೋಲ್ಟೇಜ್ ಕಣದಲ್ಲಿ, ಮೈತ್ರಿಕೂಟದ ಬೆಂಬಲಿತ ಜೆಡಿಎಸ್ ಅಭ್ಯರ್ಥಿ ಗೋವಿಂದರಾಜು ಅವರು ತೀವ್ರ ಮುಖಭಂಗ ಅನುಭವಿಸಿ ಸೋಲೊಪ್ಪಿಕೊಂಡಿದ್ದಾರೆ. ಈ ಫಲಿತಾಂಶವು ರಾಜ್ಯ ರಾಜಕಾರಣದಲ್ಲಿ ಹೊಸ ಸಂಚಲನ ಮೂಡಿಸಿದೆ.

ಈ ಅಚ್ಚರಿಯ ಫಲಿತಾಂಶಕ್ಕೆ ಪ್ರಮುಖ ಕಾರಣ ವಿರೋಧ ಪಕ್ಷಗಳ ಪಾಳಯದಲ್ಲಿ ನಡೆದಿರುವ ಭಾರೀ ಪ್ರಮಾಣದ ಅಡ್ಡಮತದಾನ. ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಕೂಟದ ಹಲವು ಶಾಸಕರು ತಮ್ಮ ಪಕ್ಷದ ಅಧಿಕೃತ ಸೂಚನೆಯನ್ನು ಧಿಕ್ಕರಿಸಿ, ಕಾಂಗ್ರೆಸ್ ಅಭ್ಯರ್ಥಿಯ ಪರವಾಗಿ ಅಡ್ಡಮತದಾನ ಮಾಡಿದ್ದಾರೆ. ಚುನಾವಣಾ ಕಣದಲ್ಲಿ ತಮ್ಮ ಅಭ್ಯರ್ಥಿಯನ್ನು ಸುಲಭವಾಗಿ ಗೆಲ್ಲಿಸಿಕೊಳ್ಳುವ ವಿಶ್ವಾಸದಲ್ಲಿದ್ದ ಉಭಯ ಪಕ್ಷಗಳ ನಾಯಕರಿಗೆ ಈ ಅಡ್ಡಮತದಾನದ ಬೆಳವಣಿಗೆಯು ಅಕ್ಷರಶಃ ನುಂಗಲಾರದ ತುತ್ತಾಗಿ ಪರಿಣಮಿಸಿದೆ.

ಜೆಡಿಎಸ್‌ನ ಗೋವಿಂದರಾಜ್ ತಮ್ಮ ಪಕ್ಷದ 19 ಸೇರಿ ಕನಿಷ್ಠ 20 ಮತಗಳು ದೊರೆಯುವ ನಿರೀಕ್ಷೆ ಹೊಂದಿದರು. ಆದರೆ ಗೋವಿಂದರಾಜ್ ಕೇವಲ 14 ಮತಗಳನ್ನು ಪಡೆದಿದ್ದಾರೆ. ಕಾಂಗ್ರೆಸ್ ತಾಂತ್ರಿಕ ಮತ್ತು ವ್ಯೂಹಾತ್ಮಕ ಹೆಜ್ಜೆ ಇಟ್ಟು ಬಿಜೆಪಿ ಮತ್ತು ಜೆಡಿಎಸ್‌ಗೆ ತೀವ್ರ ಹಿನ್ನಡೆಯುಂಟು ಮಾಡಿದೆ. ಇದು ಎರಡೂ ಪಕ್ಷಗಳಿಗೂ ಕರೆಗಂಟೆಯಾಗಿ ಪರಿಣಮಿಸಿದೆ.

ತಮ್ಮ ಅಭ್ಯರ್ಥಿಯನ್ನು ಕಣಕ್ಕಿಳಿಸಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸೆಡ್ಡು ಹೊಡೆದಿದ್ದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಮುಖಭಂಗವಾಗಿದೆ. ಈ ಮೂಲಕ ರಣತಂತ್ರ ರೂಪಿಸುವ ನಿಟ್ಟಿನಲ್ಲಿ ಎಚ್.ಡಿ.ಕೆ.ಗೆ ತೀವ್ರ ಹಿನ್ನಡೆಯಾಗಿದೆ.

ಜೆಡಿಎಸ್ ಅಭ್ಯರ್ಥಿ ಗೋವಿಂದರಾಜು ಅವರ ಪರಾಭವವು ಮೈತ್ರಿಕೂಟದ ಲೆಕ್ಕಾಚಾರಗಳನ್ನು ಸಂಪೂರ್ಣವಾಗಿ ತಲೆಕೆಳಗಾಗಿಸಿದೆ. ಬಿಜೆಪಿ ಜೊತೆಗಿನ ಭದ್ರ ಮೈತ್ರಿಯ ಹೊರತಾಗಿಯೂ, ತಮ್ಮದೇ ಶಾಸಕರನ್ನು ಹಿಡಿದಿಟ್ಟು ಕೊಳ್ಳುವಲ್ಲಿ ಉಭಯ ಪಕ್ಷಗಳ ವರಿಷ್ಠರು ವಿಫಲರಾಗಿದ್ದಾರೆ. ಶಾಸಕರ ಅಸಮಾಧಾನ ಹಾಗೂ ಪಕ್ಷದ ಆಂತರಿಕ ಭಿನ್ನಮತವು ಈ ಚುನಾವಣೆಯಲ್ಲಿ ಸ್ಫೋಟಗೊಂಡಿದ್ದು, ಮೈತ್ರಿಕೂಟದ ಒಗ್ಗಟ್ಟಿನ ಕೊರತೆಯನ್ನು ಎತ್ತಿ ತೋರಿಸಿದೆ. ಗೋವಿಂದರಾಜು ಅವರಿಗೆ ತಮ್ಮವರೇ ಕೈಕೊಟ್ಟ ಹಿನ್ನೆಲೆಯಲ್ಲಿ ಈ ಅನಿರೀಕ್ಷಿತ ಸೋಲು ಎದುರಾಗಿದೆ.

ಬಿಜೆಪಿಯ ರಘು ಕೌಟಿಲ್ಯ ಅವರಿಗೆ ನಿಗದಿಪಡಿಸಿದ್ದ 30 ಮತಗಳಲ್ಲಿ ಒಂದು ಮತ ಅಸಿಂಧುವಾಗಿದ್ದು, ಅವರು 29 ಮತಗಳನ್ನು ಪಡೆದು ಕೊಂಡಿದ್ದಾರೆ. ಬಿಜೆಪಿಯಲ್ಲಿನ ಅಸಮಾಧಾನ, ಜೆಡಿಎಸ್‌ನ ಅಪಸ್ವರವನ್ನು ಡಿ.ಕೆ. ಶಿವಕುಮಾರ್ ಸಮರ್ಥವಾಗಿ ಬಳಸಿಕೊಂಡಿದ್ದಾರೆ. ರಾಜಕೀಯವಾಗಿ ಇದು ಕಾಂಗ್ರೆಸ್ ನತ್ತ ಧ್ರುವೀಕರಣದ ಮುನ್ಸೂಚನೆಯಾಗಿದೆ.

ವಿಧಾನಪರಿಷತ್ ಚುನಾವಣೆಯಲ್ಲಿ ಐದನೇ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ವಿನಯ್ ಕಾರ್ತಿಕ್ ಅವರು ಜಯ ಸಾಧಿಸಿದ್ದು, ಇದು ಪ್ರಮುಖ ಬೆಳವಣಿಗೆಯಾಗಿ ಪರಿಣಮಿಸಿದೆ. ವಿನಯ್ ಕಾರ್ತಿಕ್ ಅವರ ಗೆಲುವು ರಾಜಕೀಯ ವಲಯದಲ್ಲಿ ಸಾಕಷ್ಟು ಚರ್ಚೆಗೆ ಕಾರಣವಾಗಿದ್ದು, ಕೊನೆಯ ಹಂತದ ಮತಗಳ ಲೆಕ್ಕಾಚಾರದಲ್ಲಿ ತೀವ್ರ ಕುತೂಹಲ ಮೂಡಿಸಿತ್ತು. ವಿವಿಧ ಪಕ್ಷಗಳ ಶಾಸಕರ ಮೊದಲ ಹಾಗೂ ನಂತರದ ಆದ್ಯತೆಯ ಮತಗಳ ಲೆಕ್ಕಾಚಾರದ ಬಳಿಕ ಅವರು ಗೆಲುವಿನ ಗುರಿ ತಲುಪಿದರು.

> “ತಮಗೆ ಮತಗಳು ಕಡಿಮೆಯಾಗಿರುವ ಬಗ್ಗೆ ಪಕ್ಷದ ವರಿಷ್ಠರು ಈ ಬಗ್ಗೆ ಚರ್ಚೆ ನಡೆಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳುತ್ತಾರೆ. ಅಂತಿಮವಾಗಿ ನಾನು ಗೆಲುವು ಸಾಧಿಸಿದ್ದೇನೆ.
> -ಲಿಂಗರಾಜ್ ಪಾಟೀಲ್ ಬಿಜೆಪಿ ಅಭ್ಯರ್ಥಿ

ಗೆಲುವಿನ ಬಳಿಕ ಮಾತನಾಡಿದ ವಿನಯ್ ಕಾರ್ತಿಕ್, ತಮ್ಮ ನಿರೀಕ್ಷೆಗಿಂತ ಹೆಚ್ಚು ಮತಗಳನ್ನು ಪಡೆದಿದ್ದೇನೆ. 28 ಮತಗಳು ದೊರೆಯುವ ನಿರೀಕ್ಷೆ ಇತ್ತು. ಆದರೆ ಬಿಜೆಪಿ ಮತ್ತು ಜೆಡಿಎಸ್ ನಿಂದಲೂ ತಮಗೆ ಬೆಂಬಲ ದೊರೆತಿದೆ. ತಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸಿದ ಎಲ್ಲಾ ಜನಪ್ರತಿನಿಧಿಗಳಿಗೆ ಹಾಗೂ ಬೆಂಬಲಿಗರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ವಿಧಾನ ಪರಿಷತ್ ಸದಸ್ಯರಾಗಿ ರಾಜ್ಯದ ಅಭಿವೃದ್ಧಿ, ಜನಪರ ಆಡಳಿತ ಹಾಗೂ ಸಾರ್ವಜನಿಕ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡುವುದಾಗಿ ಅವರು ತಿಳಿಸಿದರು. ಚುನಾವಣಾ ಫಲಿತಾಂಶದ ಹಿನ್ನೆಲೆಯಲ್ಲಿ ವಿನಯ್ ಕಾರ್ತಿಕ್ ಬೆಂಬಲಿಗರು ಸಂಭ್ರಮಾಚರಣೆ ನಡೆಸಿ, ಪರಸ್ಪರ ಸಿಹಿ ಹಂಚಿ ಶುಭಾಶಯ ಕೋರಿದರು.

ರಾಜಕೀಯ ಮುಖಂಡರು ಕೂಡ ವಿನಯ್ ಕಾರ್ತಿಕ್ ಅವರಿಗೆ ಅಭಿನಂದನೆ ಸಲ್ಲಿಸಿ, ಹೊಸ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸುವಂತೆ ಹಾರೈಸಿದರು. ಈ ಚುನಾವಣಾ ಫಲಿತಾಂಶವು ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿ ವಿಧಾನಪರಿಷತ್‌ನ ಕಾರ್ಯಚಟುವಟಿಕೆಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

## ಮಹಿಳಾ ಮೀಸಲಾತಿ, ಕ್ಷೇತ್ರ ಪುನರ್ ವಿಂಗಡನೆ ಮಸೂದೆ ಮಂಡನೆಗೆ ಕೇಂದ್ರ ಸರ್ಕಾರ ಸಿದ್ಧ

**ನವದೆಹಲಿ, ಜೂ.18:** ಈ ಬಾರಿಯ ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್ ವಿಗಂಡನೆ ಮಸೂದೆಗಳನ್ನು ಮಂಡಿಸಲು ಕೇಂದ್ರ ಸರ್ಕಾರ ತೀವ್ರ ಸಿದ್ಧತೆ ನಡೆಸುತ್ತಿದೆ. ಬಹುಮತಕ್ಕೆ ಅಗತ್ಯವಾದ ಸಂಸದರ ಬೆಂಬಲ ಸಂಖ್ಯೆಯನ್ನು ತಲುಪಲು ರಾಜಕೀಯ ಲೆಕ್ಕಾಚಾರಗಳನ್ನು ಹಾಕುತ್ತಿರುವ ಸರ್ಕಾರ, ಬದಲಾದ ರಾಜಕೀಯ ಸನ್ನಿವೇಶಗಳ ಲಾಭ ಪಡೆಯುವ ತಂತ್ರ ರೂಪಿಸುತ್ತಿದೆ.

ಶಿವಸೇನೆಯ ಯುಬಿಟಿ (ಉದ್ಧವ್ ಬಾಳಾಸಾಹೇಬ್ ಠಾಕ್ರೆ) ಗುಂಪಿನಲ್ಲಿ ವಿಭಜನೆಯಾದಲ್ಲಿ ಸರ್ಕಾರಕ್ಕೆ ಬೆಂಬಲಿಸುವ ಸಂಸದರ ಸಂಖ್ಯೆ 324ಕ್ಕೆ ಏರಿಕೆಯಾಗುವ ಸಾಧ್ಯತೆ ಇದೆ. ಆದರೆ ಇದು ಸಂವಿಧಾನ ತಿದ್ದುಪಡಿಗೆ ಅಗತ್ಯವಾದ ಮೂರನೇ ಎರಡರಷ್ಟು ಬಹುಮತ (360)ಕ್ಕಿಂತ 36 ಕಡಿಮೆಯಾಗುತ್ತದೆ.

ಈ ಪರಿಸ್ಥಿತಿಯಲ್ಲಿ 22 ಸಂಸದರನ್ನು ಹೊಂದಿರುವ ಡಿಎಂಕೆ ಪಾತ್ರ ನಿರ್ಣಾಯಕವಾಗುವ ಸಾಧ್ಯತೆಯಿದೆ. ಡಿಎಂಕೆ ಬೆಂಬಲ ಸಿಕ್ಕರೆ ಸರ್ಕಾರದ ಬೆಂಬಲ ಸಂಖ್ಯೆ 346 ತಲುಪುತ್ತದೆ. ಇನ್ನೂ 14 ಸಂಸದರ ಬೆಂಬಲ ಅಗತ್ಯವಿರುವುದರಿಂದ ಸರ್ಕಾರವು ಎನ್ಸಿಪಿ (ಶರದ್ ಪವಾರ್ ಗುಂಪು-7), ವೈಎಸ್‌ಆರ್‌ಸಿಪಿ (4) ಮತ್ತು ಜೆಎಂಎಂ (3) ನಂತಹ ಕಾಂಗ್ರೆಸ್-ಸಹಯೋಗಿ ಪಕ್ಷಗಳೊಂದಿಗೆ ಸಂಪರ್ಕ ಸಾಧಿಸುತ್ತಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಡಿಎಂಕೆ ಸೇರಿದಂತೆ ಇತರ ಪಕ್ಷಗಳ ನಾಯಕರೊಂದಿಗೆ ತೆರೆಮರೆಯಲ್ಲಿ ಮಾತುಕತೆ ನಡೆಸುತ್ತಿದ್ದಾರೆ. ಮೂರನೇ ಎರಡರಷ್ಟು ಬಹುಮತ ದೊರಕಿಸುವ ನಿಟ್ಟಿನಲ್ಲಿ ಭಾರಿ ರಾಜಕೀಯ ಕಸರತ್ತು ನಡೆಯುತ್ತಿದೆ. ಸಂಸದೀಯ ಕಾರ್ಯಕ್ರಮಗಳಿಗೆ ಅನುಗುಣವಾಗಿ ಮುಂಗಾರು ಅಧಿವೇಶನದಲ್ಲಿ ಈ ಮಸೂದೆಗಳನ್ನು ಮಂಡಿಸಿ, ಚರ್ಚೆ ನಡೆಸಿ ಅಂತಿಮಗೊಳಿಸುವ ಸರ್ಕಾರದ ಯೋಜನೆಯಿದೆ.

## ನಾವು ನಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ ಮತ ಚಲಾಯಿಸಿದ್ದೇವೆ: ಎಸ್‌ಟಿಎಸ್-ಹೆಬ್ಬಾರ್-ಜಿ.ಟಿ.ಡಿ.



**ಬೆಂಗಳೂರು, ಜೂ.18:** ರಾಜಧಾನಿಯ ವಿಧಾನಸೌಧದಲ್ಲಿ ಇಂದು ನಡೆದ ವಿಧಾನ ಪರಿಷತ್ ಚುನಾವಣೆಯು ತೀವ್ರ ರಾಜಕೀಯ ಜಿದ್ದಾಜಿದ್ದಿಗೆ ಸಾಕ್ಷಿಯಾಗಿದೆ. ಮತದಾನದ ಪ್ರಕ್ರಿಯೆ ಆರಂಭವಾಗುತ್ತಿದ್ದಂತೆ ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೆ ಮೂವರು ಪ್ರಮುಖ ಶಾಸಕರು ಬಹಿರಂಗ ಬೆಂಬಲ ಘೋಷಿಸಿದ್ದು ಬಿಜೆಪಿಗೆ ದೊಡ್ಡ ಹಿನ್ನಡೆಯಾಗಿದೆ. ಬಿಜೆಪಿಯಿಂದ ಉಚ್ಚಾಟನೆಗೊಂಡಿರುವ ಶಾಸಕರಾದ ಎಸ್.ಟಿ. ಸೋಮಶೇಖರ್ ಮತ್ತು ಶಿವರಾಮ ಹೆಬ್ಬಾರ್, ಹಾಗೂ ಜೆಡಿಎಸ್‌ನ ಹಿರಿಯ ಶಾಸಕ ಜಿ.ಟಿ. ದೇವೇಗೌಡ ಅವರು "ನಾವು ನಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ ಮತ ಚಲಾಯಿಸುತ್ತೇವೆ" ಎಂದು ಪ್ರಕಟಿಸಿ, ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ಹಾಕಿದ್ದಾರೆ. ಇದೇ ಹೊತ್ತಿನಲ್ಲಿ ಬಿಜೆಪಿಯ ಮತ್ತೊಬ್ಬ ಅಸಮಾಧಾನಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರ ನಡೆ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಪಕ್ಷದ ವಿರುದ್ಧ ಹಲವು ದಿನಗಳಿಂದ ಅಸಮಾಧಾನ ಹೊಂದಿದ್ದರೂ, ಯತ್ನಾಳ್ ಅವರು ತಾವು ಬಿಜೆಪಿಗೆ ಮತ ಹಾಕುತ್ತಿರುವುದಾಗಿ ಪಕ್ಷದ ರಾಷ್ಟ್ರೀಯ ನಾಯಕರಿಗೆ ಅಧಿಕೃತವಾಗಿ ಪತ್ರ ಬರೆದು ಸ್ಪಷ್ಟಪಡಿಸಿದ್ದಾರೆ. ಆದರೆ, ಈ ಪತ್ರದ ರಾಜಕೀಯವೇ ಈಗ ಹೊಸ ವಿವಾದಕ್ಕೆ ಕಾರಣವಾಗಿದೆ.ಶಾಸಕ ಯತ್ನಾಳ್ ಅವರ ಈ ಬಹಿರಂಗ ನಡೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಕಾಂಗ್ರೆಸ್ ನಾಯಕರು, ತಕ್ಷಣವೇ ಚುನಾವಣಾ ಅಧಿಕಾರಿಗೆ ದೂರು ನೀಡಿದ್ದಾರೆ. ಹಿರಿಯನಾಯಕ ಬಸವರಾಜ್ ರಾಯರೆಡ್ಡಿ ನೇತೃತ್ವದ ಕಾಂಗ್ರೆಸ್ ನಿಯೋಗವು ಚುನಾವಣಾ ಅಧಿಕಾರಿಯನ್ನು ಭೇಟಿ ಮಾಡಿ, ನಿಯಮಗಳ ಉಲ್ಲಂಘನೆಯಾಗಿದೆ ಎಂದು ಆರೋಪಿಸಿದೆ. ಬಸನಗೌಡ ಪಾಟೀಲ್ ಯತ್ನಾಳ್ ಅವರ ಮತವನ್ನು ತಕ್ಷಣವೇ ಅಸಿಂಧುಗೊಳಿಸಬೇಕು ಎಂದು ಕಾಂಗ್ರೆಸ್ ನಾಯಕರು ಅಧಿಕೃತವಾಗಿ ಆಗ್ರಹಿಸಿದ್ದಾರೆ. ಕಾಂಗ್ರೆಸ್ ತನ್ನ ದೂರಿನಲ್ಲಿ, ವಿಧಾನ ಪರಿಷತ್ ಚುನಾವಣೆಯ ನಿಯಮಾವಳಿಯನ್ನು ಪ್ರಮುಖವಾಗಿ ಪ್ರಸ್ತಾಪಿಸಿದೆ. "ಪರಿಷತ್ ಚುನಾವಣೆಯಲ್ಲಿ ರಹಸ್ಯ ಮತದಾನದ ಪದ್ಧತಿ ಜಾರಿಯಲ್ಲಿದೆ. ಮತದಾನ ಪ್ರಕ್ರಿಯೆ ಮುಗಿಯುವ ಮುನ್ನ ತಾವು ಯಾರಿಗೆ ಮತ ಹಾಕುತ್ತೇವೆ ಎಂಬುದನ್ನು ಯಾರೂ ಬಹಿರಂಗ ಪಡಿಸುವಂತಿಲ್ಲ. ಆದರೆ ಶಾಸಕ ಯತ್ನಾಳ್ ಅವರು ಬಹಿರಂಗವಾಗಿ ಪತ್ರ ಬರೆದು ತಾವು ಬಿಜೆಪಿಗೆ ಮತ ಹಾಕುತ್ತಿರುವುದಾಗಿ ಹೇಳಿಕೊಂಡಿದ್ದಾರೆ. ಇದು ರಹಸ್ಯ ಮತದಾನದ ನಿಯಮದ ಸ್ಪಷ್ಟ ಉಲ್ಲಂಘನೆಯಾಗಿದೆ" ಎಂದು ಕಾಂಗ್ರೆಸ್ ವಾದಿಸಿದೆ. ಹೀಗಾಗಿ ನಿಯಮಬಾಹಿರವಾಗಿ ನಡೆದುಕೊಂಡಿರುವ ಶಾಸಕ ಯತ್ನಾಳ್ ಮತವನ್ನು ಪರಿಗಣಿಸಬಾರದು ಮತ್ತು ಅದನ್ನು ಅಸಿಂಧು ಎಂದು ಘೋಷಿಸಬೇಕು ಎಂದು ಕಾಂಗ್ರೆಸ್ ಪಟ್ಟು ಹಿಡಿದಿದೆ. ಸದ್ಯ ಅಡ್ಡಮತದಾನ ಸದ್ದು ಮತ್ತು ಕಾಂಗ್ರೆಸ್ ನೀಡಿರುವ ದೂರನ್ನು ಕೂಲಂಕಷವಾಗಿ ಪರಿಶೀಲಿಸಿದ ಚುನಾವಣಾಧಿಕಾರಿ ಎಂ.ಕೆ. ವಿಶಾಲಾಕ್ಷಿ ಅವರು ದೂರನ್ನು ವಜಾಗೊಳಿಸಿದ್ದಾರೆ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಮತದಾನದ ನಿಗದಿತ ಪ್ರದೇಶದಲ್ಲಿ ತಮ್ಮ ಮತವನ್ನು ಬಹಿರಂಗಪಡಿಸುವ ಯಾವುದೇ ಹೇಳಿಕೆ ಅಥವಾ ನಡವಳಿಕೆ ತೋರಿಲ್ಲ. ಹಾಗಾಗಿ ನಿಯಮ ಉಲ್ಲಂಘನೆಯಾಗಿಲ್ಲ" ಎಂದು ಸ್ಪಷ್ಟಪಡಿಸಿರುವ ಅಧಿಕಾರಿ, ಯತ್ನಾಳ್ ಅವರ ಮತ ಸಿಂಧುವಾಗಿದೆ ಎಂದು ಪ್ರಕಟಿಸಿದ್ದಾರೆ.

## 2028ಕ್ಕೂ ಕಾಂಗ್ರೆಸ್ ಗ್ಯಾರಂಟಿ ಅಲೆ

### ಕರ್ನಾಟಕ ವಿಧಾನ ಪರಿಷತ್ ಚುನಾವಣಾ ಗೆಲುವು ಮುಂದಿನ ಚುನಾವಣಾ ದಿಕ್ಸೂಚಿ



**ಬೆಂಗಳೂರು, ಜೂ.18:** ಜನರನಾಡಿ ಮಿಡಿತ ಅರಿತ ರಾಜ್ಯದ ಜನಪ್ರತಿನಿಧಿಗಳು ತಮ್ಮ ಪಕ್ಷದ ಗಡಿ ಮೀರಿ ಕಾಂಗ್ರೆಸ್ ನೀತಿಗಳಿಗೆ ಜೈಕಾರ, ಇದು ಗ್ಯಾರಂಟಿ ಯೋಜನೆಗಳ ಪರವಾದ ಮತ, ಜನರ ಪರವಾದ ಮತ, ಕರ್ನಾಟಕ ವಿಧಾನ ಪರಿಷತ್ ಚುನಾವಣಾ ಫಲಿತಾಂಶ ಐತಿಹಾಸಿಕವಾಗಿದ್ದು, ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರು ಪ್ರತಿಪಾದಿಸಿರುವ ಜನ ಕಲ್ಯಾಣ ಮತ್ತು ನ್ಯಾಯ ರಾಜಕೀಯಕ್ಕೆ ನಿಸ್ಸಂಶಯ ಜಯ ಸಿಕ್ಕಿದ ಸಂದೇಶವನ್ನು ಸಾರಿವೆ.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ 135 ಶಾಸಕರನ್ನು ಹೊಂದಿದೆ ಮತ್ತು ಇನ್ನೂ 3 ಎಸ್‌ಕೆಪಿ + ಪಕ್ಷೇತರ ಶಾಸಕರ ಬೆಂಬಲದೊಂದಿಗೆ ಒಟ್ಟು 138 ಶಾಸಕರ ಬಲ ಹೊಂದಿದೆ. ಹೀಗಿದ್ದರೂ, ಕಾಂಗ್ರೆಸ್ ಅಭ್ಯರ್ಥಿಗಳಿಗೆ 151 ಪ್ರಥಮ ಪ್ರಾಶಸ್ತ್ಯದ ಮತಗಳು ಲಭಿಸಿವೆ.

**ಇದಕ್ಕೆ ಕಾರಣವೇನು?**

ಕರ್ನಾಟಕದ ರಾಜಕೀಯ ಇಂದು ಎರಡು ಧ್ರುವಗಳ ಸುತ್ತ ಸುತ್ತುತ್ತಿದೆ. ಒಂದು ಧ್ರುವವೆಂದರೆ ಕಾಂಗ್ರೆಸ್ ಪಕ್ಷದ 5 ಗ್ಯಾರಂಟಿ ಯೋಜನೆಗಳು. ಈ ಯೋಜನೆಗಳ ಮೂಲಕ ವರ್ಷಕ್ಕೆ 56,000 ಕೋಟಿಗೂ ಅಧಿಕ ಹಣವನ್ನು ಕನ್ನಡಿಗರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾಯಿಸಲಾಗಿದೆ.

ಇನ್ನೊಂದು ಧ್ರುವವೆಂದರೆ ಬಿಜೆಪಿ-ಜೆಡಿಎಸ್ ಮೈತ್ರಿ. ಕಾಂಗ್ರೆಸ್‌ನ 5 ಗ್ಯಾರಂಟಿಗಳಿಗೆ ಕಟು ವಿರೋಧ ವ್ಯಕ್ತಪಡಿಸುತ್ತಿರುವ ಅವರು, ಅವುಗಳನ್ನು ರದ್ದುಪಡಿಸಲು ಬಯಸುತ್ತಾರೆ. ಅವರ ರಾಜಕೀಯ ಜಾತಿ ವಿಭಜನೆ ಮತ್ತು ಧಾರ್ಮಿಕ ಧ್ರುವೀಕರಣದ ಸುತ್ತ ಕೇಂದ್ರೀಕೃತವಾಗಿದೆ. ಜನರನಾಡಿ ಮಿಡಿತ ಅರಿತ ಕರ್ನಾಟಕದ ಶಾಸಕರು ಇಂದು ತಮ್ಮ ಪಕ್ಷದ ಗಡಿಗಳನ್ನು ಮೀರಿ ಕಾಂಗ್ರೆಸ್ ಸರ್ಕಾರದ ನೀತಿಗಳು ಮತ್ತು ಕಾಂಗ್ರೆಸ್ ಗ್ಯಾರಂಟಿಗಳಿಗೆ ಮತ ಚಲಾಯಿಸುವ ಮೂಲಕ ತಮ್ಮ ಮುದ್ರೆ ಒತ್ತಿದ್ದಾರೆ. ಇದು 2028ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನ ಗ್ಯಾರಂಟಿ ಅಲೆಯ ದಿಕ್ಸೂಚಿ. ಇದು ಸಕಾರಾತ್ಮಕತೆಗೆ ನೀಡಿದ ಮತ, ಇದು ಕಲ್ಯಾಣ ರಾಜ್ಯದ ಪರವಾದ ಮತ, ಇದು ಒಗ್ಗಟ್ಟಿನ ಮತ್ತು ಒಳಗೊಳ್ಳುವಿಕೆಯ ರಾಜಕಾರಣಕ್ಕಾಗಿ ಬಿದ್ದ ಮತ, ಇದು ಗ್ಯಾರಂಟಿ ಯೋಜನೆಗಳ ಪರವಾದ ಮತ, ಇದು ಜನರ ಪರವಾದ ಮತ.

**-ರಣದೀಪ್ ಸುರ್ಜೇವಾಲ**
ಎಐಸಿಸಿ ಪ್ರಧಾನ ಕಾರ್ಯದರ್ಶಿ- ಕರ್ನಾಟಕ ರಾಜ್ಯದ ಉಸ್ತುವಾರಿ

## ನಮಗೆ ಸಿಗಬೇಕಾದ ನೀರನ್ನು ನೀಡುವ ಬದಲು ಹೆಚ್ಚುವರಿ ನೀರನ್ನು ಮಾತ್ರ ಹರಿಸಲಾಗುತ್ತಿದೆ: ತಮಿಳುನಾಡು ಮುಖ್ಯಮಂತ್ರಿ ವಿಜಯ್ ಆರೋಪ



**ಚೆನ್ನೈ, ಜೂ.18:** ಸುಪ್ರೀಂಕೋರ್ಟ್ ಆದೇಶದ ಅನ್ವಯ ಪ್ರತಿ ವರ್ಷ ನಿಗದಿತ ಪ್ರಮಾಣದಲ್ಲಿ ಕಾವೇರಿ ನೀರು ಹರಿಸಿದರೂ ಮುಖ್ಯಮಂತ್ರಿ ವಿಜಯ್ ನೇತೃತ್ವದ ತಮಿಳುನಾಡಿನ ಹೊಸ ಸರ್ಕಾರ ತಗಾದೆ ತೆಗೆದಿದೆ. ಕರ್ನಾಟಕ ತಮಿಳುನಾಡಿನ ನೀರಿನ ಪಾಲು ಹರಿಸುತ್ತಿಲ್ಲ ಬದಲಿಗೆ ಕೇವಲ ಹೆಚ್ಚುವರಿ ನೀರನ್ನು ಮಾತ್ರ ಹರಿಸಲಾಗುತ್ತಿದೆ ಎಂದು ಆರೋಪಿಸಿದೆ.

ತಮಿಳುನಾಡಿನಲ್ಲಿ ಗುರುವಾರ ವಿಧಾನಸಭೆ ಅಧಿವೇಶನ ಆರಂಭವಾಗಿದ್ದು ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲರು ಮಾತನಾಡಿದರು. ರಾಜ್ಯಪಾಲರ ಭಾಷಣದಲ್ಲಿ ಕರ್ನಾಟಕದ ವಿರುದ್ಧ ತಮಿಳುನಾಡು ಸರ್ಕಾರ ಈ ಆರೋಪ ಮಾಡಿದೆ. ತಮಿಳುನಾಡಿಗೆ ಅನಾದಿ ಕಾಲದಿಂದಲೂ ಕಾವೇರಿ ನೀರನ್ನು ಬಳಸುವ ಹಕ್ಕಿದೆ ಸುಪ್ರೀಂ ಕೋರ್ಟ್‌ನಲ್ಲಿ ನಮ್ಮ ಹಕ್ಕು ಎತ್ತಿಹಿಡಿಯಲ್ಪಟ್ಟ ನಂತರವೂ ಕಾವೇರಿ ನೀರನ್ನು ಪಡೆಯಲು ಪ್ರತಿವರ್ಷವೂ ಹೋರಾಟ ನಡೆಸುತ್ತಿದ್ದೇವೆ ಕರ್ನಾಟಕ ಸರ್ಕಾರವು ನಮಗೆ ಸಿಗಬೇಕಾದ ನೀರನ್ನು ನೀಡುವ ಬದಲು, ಹೆಚ್ಚುವರಿ ನೀರನ್ನು ಮಾತ್ರ ತಮಿಳುನಾಡಿಗೆ ಬಿಡುಗಡೆ ಮಾಡುತ್ತಿದೆ

ಈ ಪರಿಸ್ಥಿತಿಯಲ್ಲಿ, ಕರ್ನಾಟಕ ಸರ್ಕಾರವು ಮೇಕೆದಾಟು ಯೋಜನೆಯನ್ನು ಕಾರ್ಯಗತಗೊಳಿಸಲು ಪ್ರಯತ್ನಿಸುತ್ತಿದೆ ಈ ಯೋಜನೆ ಜಾರಿಗೆ ಬಂದರೆ, ಕೃಷಿ ಉತ್ಪಾದನೆಯ ಜೊತೆಗೆ ರೈತರ ಜೀವನೋಪಾಯದ ಮೇಲೂ ತೀವ್ರ ಪರಿಣಾಮ ಬೀರುತ್ತದೆ ಇದನ್ನು ನಿಲ್ಲಿಸಲು ಮತ್ತು ಸರಿಯಾದ ಸಮಯದಲ್ಲಿ ತಮಿಳುನಾಡಿಗೆ ನೀರು ಒದಗಿಸಲು ಸರ್ಕಾರ ಅಗತ್ಯ ಕಾನೂನು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಸರ್ಕಾರ ರಾಜ್ಯಪಾಲರ ಭಾಷಣದಲ್ಲಿ ಉಲ್ಲೇಖಿಸಿದೆ.

## ಮೇಕೆದಾಟು: ಒಂದು ಹನಿ ನೀರು ನೀರಾವರಿಗೆ ಬಳಕೆಯಾಗದು- ಸಿಎಂ



**ಬೆಂಗಳೂರು, ಜೂ.18:** "ಮೇಕೆದಾಟು ಯೋಜನೆ ದಕ್ಷಿಣ ಭಾರತದ ಹೃದಯದಂತ ಯೋಜನೆ. ಈ ಯೋಜನೆಯಲ್ಲಿ ಕರ್ನಾಟಕ ಹಾಗೂ ತಮಿಳುನಾಡಿನ ಹಿತ ಅಡಗಿದೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ವಿಧಾನಸೌಧದಲ್ಲಿ ವಿಧಾನ ಪರಿಷತ್ ಚುನಾವಣೆ ಮತದಾನದ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿದರು. ತಮಿಳುನಾಡು ಸರ್ಕಾರ ನಿಮ್ಮ ಹೃದಯಕ್ಕೆ ಹತ್ತಿರವಾದ ಮೇಕೆದಾಟು ಯೋಜನೆ ತಡೆಯಲು ಕಾನೂನು ಅವಕಾಶ ಹುಡುಕುತ್ತಿದೆ ಎಂದು ಕೇಳಿದಾಗ, "ಮೇಕೆದಾಟು ಕೇವಲ ನನ್ನ ಹೃದಯಕ್ಕೆ ಮಾತ್ರ ಹತ್ತಿರವಾಗಿಲ್ಲ. ಮೇಕೆದಾಟು ಯೋಜನೆ ಕರ್ನಾಟಕ ರಾಜ್ಯಕ್ಕಿಂತ ತಮಿಳುನಾಡಿಗೆ ಹೆಚ್ಚು ಅನುಕೂಲ ನೀಡಲಿದೆ. ತಮಿಳುನಾಡು ಪಾಲಿನ 177 ಟಿಎಂಸಿ ನೀರನ್ನು ಬಿಡಲು ನಾವು ಸಿದ್ಧವಾಗಿದ್ದೇವೆ. ಈ ಬಗ್ಗೆ ಸುಪ್ರೀಂ ಕೋರ್ಟ್ ಆದೇಶವೂ ಇದೆ. ಈ ಯೋಜನೆ ತೀರ್ಮಾನವನ್ನು ಕೇಂದ್ರ ಜಲ ಆಯೋಗ ಮಾಡಬೇಕು ಎಂದು ಕೋರ್ಟ್ ತಿಳಿಸಿದೆ" ಎಂದು ತಿಳಿಸಿದರು."ನಾವು ತಮಿಳುನಾಡಿನ ರೈತರ ಹಿತವನ್ನೂ ಕಾಪಾಡಬೇಕು. ಇದು ಸಮತೋಲಿತ ಜಲಾನಯನ. ಇಲ್ಲಿ ಒಂದೇ ಒಂದು ಬಕೆಟ್ ನೀರನ್ನೂ ನೀರಾವರಿಗೆ ಬಳಸುವುದಿಲ್ಲ. ಬೆಂಗಳೂರು ನಗರದ ಕುಡಿಯುವ ನೀರು ಪೂರೈಕೆಗೆ ಮಾತ್ರ ಬಳಸಲಾಗುವುದು. ಬೆಂಗಳೂರಿನಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದ್ದು, ನಾವು ಕೃಷ್ಣಾದಿಂದ ನೀರನ್ನು ತರಲು ಸಾಧ್ಯವಿಲ್ಲ. ಹೀಗಾಗಿ ಕಾವೇರಿ ನಮ್ಮ ಮುಂದಿರುವ ಏಕೈಕ ಆಯ್ಕೆ" ಎಂದು ತಿಳಿಸಿದರು. ಮೇಕೆದಾಟು ಯೋಜನೆ ರದ್ದುಗೊಳಿಸಲು ಪ್ರಧಾನಿ ಮೋದಿ ಅವರಿಗೆ ಮನವಿ ಮಾಡಿರುವ ಬಗ್ಗೆ ಕೇಳಿದಾಗ, "ತಮಿಳುನಾಡಿನವರು ಕಳೆದ 40 ವರ್ಷಗಳಿಂದ ರಾಜಕೀಯ ಅಜೆಂಡಾ ಇಟ್ಟುಕೊಂಡಿದ್ದಾರೆ. ಅವರ ರಾಜಕೀಯದಲ್ಲಿ ನಾನು ಹಸ್ತಕ್ಷೇಪ ಮಾಡುವುದಿಲ್ಲ. ಈ ವಿಚಾರದ ಬಗ್ಗೆ ನ್ಯಾಯಾಲಯ ನಿರ್ದೇಶನ ನೀಡಿದೆ. ಕಳೆದ ವರ್ಷ 400ಕ್ಕೂ ಹೆಚ್ಚು ಟಿಎಂಸಿ ಹೆಚ್ಚುವರಿ ನೀರು ಸಮುದ್ರ ಸೇರಿದೆ. ಅವರು ಕೆಳ ಹಂತದಲ್ಲಿ ಸಾಕಷ್ಟು ಅಣೆಕಟ್ಟು ನಿರ್ಮಾಣ ಮಾಡುತ್ತಿದ್ದು, ನಾವು ಯಾವುದಕ್ಕೂ ಆಕ್ಷೇಪ ವ್ಯಕ್ತಪಡಿಸಿಲ್ಲ. ಅವರ ನೆಲದಲ್ಲಿ ಅವರು ನಿರ್ಮಿಸಿಕೊಳ್ಳುತ್ತಿದ್ದಾರೆ. ಇದೇ ವಿಚಾರ ಸುಪ್ರೀಂ ಕೋರ್ಟ್ ನಲ್ಲೂ ಚರ್ಚೆಯಾಗಿದೆ. ಈ ಯೋಜನೆಗೆ ನಾವು ಯಾವುದೇ ಆರ್ಥಿಕ ನೆರವಾಗಲಿ ಇತರೆ ವಿಚಾರವನ್ನು ಕೇಳುತ್ತಿಲ್ಲ. ಈ ಯೋಜನೆಯಿಂದ 400 ಮೆ.ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವುದು ಇಂಧನ ಕ್ಷೇತ್ರದಲ್ಲಿ ನಮಗೆ ಅನುಕೂಲ ಮಾಡಿಕೊಡಲಿದೆ" ಎಂದರು.

ಈ ವಿಚಾರವಾಗಿ ತಮಿಳುನಾಡು ಜೊತೆ ಚರ್ಚೆ ಮಾಡುತ್ತೀರಾ ಎಂದು ಕೇಳಿದಾಗ, "ಯಾವಾಗ ಬೇಕಾದರೂ ಅವರ ಜೊತೆ ಮಾತನಾಡಲು ಸಿದ್ಧನಿದ್ದೇನೆ, ತಮಿಳುನಾಡು, ಕರ್ನಾಟಕದವರು ಭಾರತೀಯರು. ನಾವು ಕಾವೇರಿ ನೀರು ಕುಡಿಯಬೇಕು. ತಮಿಳುನಾಡಿನಿಂದ ಇಲ್ಲಿಗೆ ಬಂದು ವೃತ್ತಿ ಮಾಡುತ್ತಿರುವ ಅನೇಕ ಜನರಿದ್ದಾರೆ. ಇಲ್ಲಿಂದ ಹೋಗಿ ಅಲ್ಲಿ ಕೆಲಸ ಮಾಡುತ್ತಿರುವವರೂ ಇದ್ದಾರೆ. ನಾವು ಅವರನ್ನು ಪ್ರತ್ಯೇಕಿಸುವುದಿಲ್ಲ. ಸಮತೋಲಿತ ಜಲಾನಯನ ನಿರ್ಮಾಣದಿಂದ ಕಷ್ಟ ಕಾಲದಲ್ಲಿ ತಮಿಳುನಾಡಿನ ಪಾಲಿನ ನೀರನ್ನು ಹರಿಸಲು ನೆರವಾಗುತ್ತದೆ. ಅತಿ ಕಡಿಮೆ ವೆಚ್ಚದಲ್ಲಿ ಯೋಜನೆ ಆಗುವ ವಿಶ್ವಾಸವಿದೆ" ಎಂದು ತಿಳಿಸಿದರು. ತಮಿಳುನಾಡು ಅನಗತ್ಯ ಆಕ್ಷೇಪ ತೆಗೆಯುತ್ತಿಲ್ಲವೇ ಎಂದು ಕೇಳಿದಾಗ, "ಅವರು ರಾಜಕೀಯ ಉಳಿವಿಗಾಗಿ ಧ್ವನಿ ಎತ್ತುತ್ತಿದ್ದಾರೆ. ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ತೀರ್ಪು ಬಂದ ಬಳಿಕ ಮತ್ತೇನಿದೆ? ಕರ್ನಾಟಕ 177 ಟಿಎಂಸಿ ನೀರು ಬಿಡಬೇಕು ಎಂದು ನೀಡಿದ ನಿರ್ದೇಶನವನ್ನು ನಾವು ಒಪ್ಪಿಕೊಳ್ಳಲಿಲ್ಲವೇ" ಎಂದು ತಿಳಿಸಿದರು. ರಾಜ್ಯದ ಬಿಜೆಪಿ ಸಂಸದರು ಇದರ ಬಗ್ಗೆ ಹೋರಾಟ ಮಾಡಬೇಕಲ್ಲವೇ ಎಂದಾಗ, "ಅವರು ಹೋರಾಟ ಮಾಡುತ್ತಾರೆ. ನಮ್ಮ ರಾಜ್ಯದಿಂದ ಆಯ್ಕೆಯಾಗಿರುವ ಕಾಂಗ್ರೆಸ್, ಬಿಜೆಪಿ, ದಳ ಎಲ್ಲಾ ಸಂಸದರು ಒಗ್ಗಟ್ಟಾಗಿ ನಮ್ಮ ರಾಜ್ಯದ ಹಿತ ಕಾಪಾಡುತ್ತಾರೆ ಎಂಬ ವಿಶ್ವಾಸ ನಮಗಿದೆ" ಎಂದು ತಿಳಿಸಿದರು. ತಮಿಳುನಾಡಿನಲ್ಲಿ ನಿಮ್ಮ ಮೈತ್ರಿ ಇದೆ ಎಂದು ಕೇಳಿದಾಗ, "ನಾವು ಅವರಿಗೆ ಏನು ಮನವಿ ಮಾಡಬೇಕೋ ಮನವಿ ಮಾಡುತ್ತೇವೆ. ಇಲ್ಲಿ ರಾಜಕಾರಣ ಏನಿಲ್ಲ. ಎರಡು ರಾಜ್ಯಗಳ ಜನರ ಹಿತ ಕಾಪಾಡಿಕೊಂಡು ಹೋಗೋಣ" ಎಂದರು.

# ನೀಟ್ ಮರು ಪರೀಕ್ಷೆ ಹಿನ್ನೆಲೆ: ಟೆಲಿಗ್ರಾಂ ನಿಷೇಧ ಆದೇಶ ಕಾಯ್ದಿರಿಸಿದ ದೆಹಲಿ ಹೈಕೋರ್ಟ್

**ನವದೆಹಲಿ,ಜೂ.18:** ಜೂ.21 ರಂದು ನಡೆಯಲಿರುವ ನೀಟ್ ಮರು ಪರೀಕ್ಷೆಗೆ ಮುನ್ನ ಪತ್ರಿಕೆ ಸೋರಿಕೆಯನ್ನು ತಡೆಗಟ್ಟಲು ಜೂನ್ 22 ರವರೆಗೆ ಭಾರತದಲ್ಲಿ ಟೆಲಿಗ್ರಾಂ ಆ?ಯಪ್ ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್ ತೀರ್ಪನ್ನು ಕಾಯ್ದಿರಿಸಿದೆ.




ವಿಚಾರಣೆಯ ಸಮಯದಲ್ಲಿ, ನ್ಯಾಯಮೂರ್ತಿ ತೇಜಸ್ ಕರಿಯಾ ಅವರು, ನೀಟ್ ಆಕಾಂಕ್ಷಿಗಳು ಪರೀಕ್ಷೆಗೆ ಹಾಜರಾಗುತ್ತಿದ್ದಾರೆ ಎಂಬ ಕಾರಣಕ್ಕಾಗಿ 150 ದಶಲಕ್ಷ ಬಳಕೆದಾರರ ಹಕ್ಕುಗಳನ್ನು ನಿರ್ಬಂಧಿಸಬಹುದೇ ಎಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದರು. ಇದೇ ಸಮಯದಲ್ಲಿ ಆಪಾದಿತ ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಗಟ್ಟಲು ಟೆಲಿಗ್ರಾಮ್ ನೈಜ-ಸಮಯದ ಮೇಲ್ವಿಚಾರಣೆಯಂತಹ ಸಾಕಷ್ಟು ಕ್ರಮಗಳನ್ನು ತೆಗೆದುಕೊಂಡಿದೆಯೇ ಎಂದು ನ್ಯಾಯಾಧೀಶರು ಕೇಳಿದರು.

ಟೆಲಿಗ್ರಾಂನ ಪರವಾಗಿ ಹಿರಿಯ ವಕೀಲ ಧ್ರುವ ಮೆಹ್ತಾ ವಾದ ಮಂಡಿಸಿದರು. ಕೇಂದ್ರವು ಆಕ್ಷೇಪಾರ್ಹ ಹೇಳಿಕೆಗಳನ್ನು ತೆಗೆದುಹಾಕಲು ಪ್ರಯತ್ನಿಸಬಹುದು ಇಡೀ ಆ್ಯಪ್ ಮೇಲೆ ನಿಷೇಧ ಹೇರಲು ಸಾಧ್ಯವಿಲ್ಲ, ಇದರಿಂದ ಬಳಕೆದಾರರ ವಾಕ್ ಸ್ವಾತಂತ್ರಕ್ಕೆ ದಕ್ಕೆಯಾಗುತ್ತದೆ ಎಂದರು. ಈ ಹಂತದಲ್ಲಿ, ಪರಿಸ್ಥಿತಿಯನ್ನು ಎದುರಿಸಲು ತೆಗೆದುಕೊಂಡ ಕ್ರಮಗಳ ಕುರಿತು ಸರ್ಕಾರವನ್ನು ತೃಪ್ತಿಪಡಿಸಲು ಟೆಲಿಗ್ರಾಮ್‌ಗೆ ಸಾಧ್ಯವೇ ಎಂದು ನ್ಯಾಯಾಲಯವು ವಕೀಲರನ್ನು ಕೇಳಿತು. ಇದಕ್ಕೆ ಉತ್ತರಿಸಿದ ವಕೀಲರು, ಸೋರಿಕೆಯಾದ ಪತ್ರಿಕೆ ನಿಜವಲ್ಲ ಮತ್ತು ಪತ್ರಿಕೆ ಸೋರಿಕೆಯ ಬಗ್ಗೆ ತಪ್ಪು ಮಾಹಿತಿ ಹರಡಿದೆ ಎಂದು ಹೇಳಿದರು. ಇದಕ್ಕೆ ಒಪ್ಪದ ನ್ಯಾಯಾಲಯವು ಮೌಖಿಕವಾಗಿ, ಅದು ನಕಲಿ ಪ್ರಶ್ನೆ ಪತ್ರಿಕೆ ಎಂದು ನಿಮಗೆ ಹೇಗೆ ಗೊತ್ತು? ಸಮಸ್ಯೆ ಏನೆಂದರೆ ನಿಜವಾದ ಪ್ರಶ್ನೆ ಪತ್ರಿಕೆ ಇದೆ ಎಂದು ಹೇಳಿತು.

ಮತ್ತೊಂದೆಡೆ ಕೇಂದ್ರದ ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಟೆಲಿಗ್ರಾಮ್ ಅಪ್ಲಿಕೇಶನ್ನ ವಿನ್ಯಾಸ ವಿಭಿನ್ನವಾಗಿದ್ದು, ಕಾನೂನು ಜಾರಿ ಸಂಸ್ಥೆಗಳಿಗೆ ತನಿಖೆ ನಡೆಸುವುದು ಕಷ್ಟಕರವಾಗಿದೆ ಎಂದು ವಾದಿಸಿದರು.

ಒಂದು ಬಾಟ್ ನಿರ್ಬಂಧಿಸಿದ ನಂತರ, ಅದು ಚಾನಲ್ ಪ್ರತಿಬಿಂಬಿಸಬಹುದು, ಅಂದರೆ ಅದು ಸ್ವಯಂಚಾಲಿತವಾಗಿ ಮತ್ತೊಂದು ಬಾಟ್ಗೆ ಮರುನಿರ್ದೇಶಿಸಲ್ಪಡುತ್ತದೆ ಇದಕ್ಕೆ ಯಾವುದೇ ಮಾನವ ಹಸ್ತಕ್ಷೇಪದ ಅಗತ್ಯವಿಲ್ಲ ಇದರಿಂದಾಗಿ ಕಾನೂನುಬಾಹಿರ ಚಟುವಟಿಕೆ ಮತ್ತೆ ಹೊರಹೊಮ್ಮಲು ಮತ್ತು ಗಣನೀಯವಾಗಿ ಅದೇ ರೀತಿಯಲ್ಲಿ ಕಾರ್ಯನಿರ್ವಹಿಸುವುದನ್ನು ಮುಂದುವರಿಸಲು ಅನುವು ಮಾಡಿಕೊಡುತ್ತದೆ ಎಂದು ಆರೋಪಿಸಿದರು.

ಇನ್ನು ಕೇಂದ್ರ ಸರ್ಕಾರ ಸಲ್ಲಿಸಿದ ಅಫಿಡವಿಟ್ ನಲ್ಲಿ ಟೆಲಿಗ್ರಾಂ ವಿರುದ್ಧ ಗಂಭೀರ ಆರೋಪಗಳನ್ನು ಸರ್ಕಾರ ಮಾಡಿದೆ. ಟೆಲಿಗ್ರಾಂ ಭಾರತದ ಹೊಸ ಡಾರ್ಕ್ ವೆಬ್ ಆಗಿ ಪರಿವರ್ತನೆಯಾಗಿದೆ. ಸೈಬರ್ ಅಪರಾಧ, ಆರ್ಥಿಕ ವಂಚನೆ, ಉಗ್ರಗಾಮಿ ಚಟುವಟಿಕೆ ಇತರೆ ಕಾನೂನು ಬಾಹಿರ ಚಟುವಟಿಕೆಗಳು ನಿರಂತರವಾಗಿ ನಡೆಯುತ್ತಿದೆ ಎಂದು ಹೇಳಿದೆ.

**ಸಾಮಾಜಿಕ ಮಾಧ್ಯಮ, ಟೆಲಿಗ್ರಾಮ್ ಸಿಇಒ ಪಾವೆಲ್ ಡುರೊವ್ ನಿಷೇಧವನ್ನು "ತಪ್ಪು" ಎಂದು ಕರೆದಿದ್ದಾರೆ, ಸೋರಿಕೆಗೆ ಕಾರಣರಾದವರು ಈಗಾಗಲೇ ಇತರ ಅಪ್ಲಿಕೇಶನ್‌ಗಳಿಗೆ ಸ್ಥಳಾಂತರಗೊಂಡಿರುವುದರಿಂದ ಭಾರತೀಯ ಐಟಿ ಸಚಿವಾಲಯದ ಈ ಕ್ರಮವು "ಯಾವುದನ್ನೂ ನಿಲ್ಲಿಸುವುದಿಲ್ಲ" ಎಂದು ವಾದಿಸಿದ್ದಾರೆ. ಕಂಪನಿಯು ಬುಧವಾರ ಈ ನಿರ್ಧಾರವನ್ನು ಪ್ರಶ್ನಿಸಿ, ಭಾರತ ಸರ್ಕಾರವನ್ನು ನ್ಯಾಯಾಲಯಕ್ಕೆ ಕರೆದೊಯ್ಯಿತು. ನ್ಯಾಯಮೂರ್ತಿ ತೇಜಸ್ ಕರಿಯಾ ನ್ಯಾಯಾಲಯದಲ್ಲಿ ಈ ವಿಷಯವನ್ನು ಆಲಿಸಿದರು ಮತ್ತು ನಿಷೇಧವನ್ನು ಎತ್ತಿಹಿಡಿದು ಗುರುವಾರ ತಮ್ಮ ವಾದಗಳನ್ನು ಮಂಡಿಸಲು ಸರ್ಕಾರವನ್ನು ಕೇಳಿದರು.**

# ನೀಟ್-ಯುಜಿ ಮರು ಪರೀಕ್ಷೆ: ಬಿಗಿಭದ್ರತೆ, ನ್ಯಾಯ ಸಮ್ಮತ ಪರೀಕ್ಷೆಗೆ ಸಚಿವ ಧರ್ಮೇಂದ್ರ ಸೂಚನೆ



**ನವದೆಹಲಿ, ಜೂ.18:** ಜೂನ್ 21 ರಂದು ರಾಷ್ಟ್ರೀಯ ಅರ್ಹತಾ-ಪ್ರವೇಶ ಪರೀಕ್ಷೆ ಪದವಿಪೂರ್ವ (ನೀಟ್-ಯುಜಿ) ಮರುಪರೀಕ್ಷೆ ನಿಗದಿಯಾಗಿರುವುದರಿಂದ, ಕೇಂದ್ರವು ಹೆಚ್ಚಿನ ಜವಾಬ್ದಾರಿಯ ವೈದ್ಯಕೀಯ ಪ್ರವೇಶ ಪರೀಕ್ಷೆಗೆ ಸಿದ್ಧತೆಗಳನ್ನು ತೀವ್ರಗೊಳಿಸಿದೆ. ದೇಶಾದ್ಯಂತ ಲಕ್ಷಾಂತರ ಆಕಾಂಕ್ಷಿಗಳು ಪರೀಕ್ಷೆಯನ್ನು ನಡೆಸುವ ನಿರೀಕ್ಷೆಯಿರುವ ಈ ಪರೀಕ್ಷೆಯ ಮರುಪರೀಕ್ಷೆಗೆ ವ್ಯವಸ್ಥೆಗಳನ್ನು ನಿರ್ಣಯಿಸಲು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಗುರುವಾರ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಕಳೆದ ತಿಂಗಳು ಮೇ 3 ರಂದು ನಡೆದ ಪರೀಕ್ಷೆಯನ್ನು ಪತ್ರಿಕೆ ಸೋರಿಕೆ ಆರೋಪದ ಮೇಲೆ ರದ್ದುಗೊಳಿಸಿದ ನಂತರ ಶಿಕ್ಷಣ ಸಚಿವರು ಕಠಿಣ ಕ್ರಮಗಳನ್ನು ಘೋಷಿಸಿದರು. ಮರುಪರೀಕ್ಷೆಯ "ಮುಕ್ತ ಮತ್ತು ನ್ಯಾಯಯುತ" ನಡವಳಿಕೆಗೆ ಅಗತ್ಯ ಕ್ರಮಗಳು ಜಾರಿಯಲ್ಲಿವೆಯೇ ಎಂದು ಖಚಿತಪಡಿಸಿಕೊಳ್ಳಲು ಪ್ರಧಾನ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕೇಂದ್ರ ಮತ್ತು ರಾಜ್ಯ ಮಟ್ಟದ ಸಮನ್ವಯವನ್ನು ಬಲಪಡಿಸುವಂತೆ ಅವರು ಒತ್ತಾಯಿಸಿದರು, ವಿವಿಧ ರಾಜ್ಯಗಳಲ್ಲಿ ನೇಮಕಗೊಂಡ ಅಧಿಕಾರಿಗಳು ಮರುಪರೀಕ್ಷಾ ಪ್ರಕ್ರಿಯೆ ಯನ್ನು ನಿರ್ವಹಿಸಲು ನಿರ್ದೇಶಿಸಬೇಕು ಮತ್ತು ಭಾರತದಲ್ಲಿ ಪ್ರವೇಶ ಪರೀಕ್ಷೆಗಳನ್ನು ನಡೆಸುವ ಕೇಂದ್ರ ಸಂಸ್ಥೆಯಾದ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ಕಮಾಂಡ್ ಸೆಂಟರ್‌ಗೆ ವರದಿ ಮಾಡಬೇಕು. ಸಭೆಯಲ್ಲಿ, ಒಖಿಂ ಮಹಾನಿರ್ದೇಶಕ ಅಭಿಷೇಕ್ ಸಿಂಗ್, ಮರುಪರೀಕ್ಷೆಯನ್ನು ಸುಗಮವಾಗಿ ನಡೆಸುವುದನ್ನು ಖಚಿತಪಡಿಸಿಕೊಳ್ಳಲು ಆಒ ಗಳು, ರಾಜ್ಯ ಪೊಲೀಸ್ ಇಲಾಖೆಗಳು ಮತ್ತು ಗುಪ್ತಚರ ಸಂಸ್ಥೆಗಳ ನೇತೃತ್ವದ ಜಿಲ್ಲಾಮಟ್ಟದ ಸಮನ್ವಯ ಸಮಿತಿಗಳು ಸೇರಿದಂತೆ ಸಂಬಂಧಪಟ್ಟ ಎಲ್ಲಾ ಪಾಲುದಾರರೊಂದಿಗೆ ಒಖಿಂ ಕೆಲಸ ಮಾಡುತ್ತಿದೆ ಎಂದು ಹೇಳಿದರು ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.



**ನವದೆಹಲಿಯಲ್ಲಿ ಗುರುವಾರ ನಡೆದ ಸಭೆಯಲ್ಲಿ ಭಾರತದಲ್ಲಿರುವ ಅಮೆರಿಕದ ರಾಯಭಾರಿ ಸೆರ್ಗಿಯೊ ಗೋರ್ ಮತ್ತು ಗೃಹ ಸಚಿವ ಅಮಿತ್ ಶಾ ಮಾತುಕತೆ ನಡೆಸಿದರು.**

# ಇಸ್ಲಾಮಾಬಾದ್ ಎಂಓಯು ಬಗ್ಗೆ ಕಾಂಗ್ರೆಸ್ ಟೀಕೆ

**ನವದೆಹಲಿ, ಜೂ. 18:** ಅಮೆರಿಕ ಮತ್ತು ಇರಾನ್ ನಡುವಿನ 14 ಅಂಶಗಳ ಇಸ್ಲಾಮಾಬಾದ್ ಒಡಂಬಡಿಕೆ ಅಧಿಕೃತವಾಗಿ ಬಿಡುಗಡೆಯಾದ ನಂತರ, ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಗುರುವಾರ ನರೇಂದ್ರ ಮೋದಿ ಸರ್ಕಾರದ ವಿದೇಶಾಂಗ ನೀತಿಯ ಮೇಲೆ ತೀವ್ರ ದಾಳಿ ನಡೆಸಿದರು, ಈ ಒಪ್ಪಂದವು ಪಾಕಿಸ್ತಾನದ ಬೆಳೆಯುತ್ತಿರುವ ಪ್ರಾದೇಶಿಕ ಪ್ರಭಾವವನ್ನು ಒತ್ತಿಹೇಳುತ್ತದೆ ಮತ್ತು ಭಾರತಕ್ಕೆ ಗಮನಾರ್ಹ ಕಾರ್ಯತಂತ್ರದ ಸವಾಲುಗಳನ್ನು ಒಡ್ಡುತ್ತದೆ ಎಂದು ವಾದಿಸಿದರು.

ಒಪ್ಪಂದವನ್ನು ಇಸ್ಲಾಮಾಬಾದ್ ಎಂಒಯು ಎಂದು ಹೆಸರಿಸುವುದೇ ಪಾಕಿಸ್ತಾನದ ವರ್ಧಿತ ರಾಜತಾಂತ್ರಿಕ ನಿಲುವು ಮತ್ತು ಪ್ರಾದೇಶಿಕ ಮತ್ತು ಜಾಗತಿಕ ವ್ಯವಹಾರಗಳಲ್ಲಿ ಹೆಚ್ಚುತ್ತಿರುವ ಪ್ರಸ್ತುತತೆಯನ್ನು ಪ್ರತಿಬಿಂಬಿಸುತ್ತದೆ ಎಂದು ರಮೇಶ್ ಹೇಳಿದರು. ಇದನ್ನು ಇಸ್ಲಾಮಾಬಾದ್ ಎಂಒಯು ಎಂದು ಕರೆಯುವುದು ಪಾಕಿಸ್ತಾನದ ಹೊಸ ಪ್ರಾದೇಶಿಕ ನಿಲುವು ಮತ್ತು ಜಾಗತಿಕ ಪ್ರಭಾವವನ್ನು ತೋರಿಸುತ್ತದೆ, ಇದನ್ನು ನವೆಂಬರ್ 2008 ರಲ್ಲಿ ಮುಂಬೈ ಭಯೋತ್ಪಾದಕ ದಾಳಿಯ ನಂತರ ಡಾ. ಮನಮೋಹನ್‌ಸಿಂಗ್ ಅವರು ಜಾಗತಿಕ ವೇದಿಕೆಯಲ್ಲಿ ಒಮ್ಮೆ ಪ್ರತ್ಯೇಕಿಸಿದ್ದರು ಎಂದು ಅವರು ಹೇಳಿದರು.

ಈ ಬೆಳವಣಿಗೆಯನ್ನು ಪ್ರಧಾನಿ ನರೇಂದ್ರ ಮೋದಿಯವರ ವಿದೇಶಾಂಗ ನೀತಿಯ "ಸತ್ವ ಮತ್ತು ಶೈಲಿ ಎರಡಕ್ಕೂ ತೀವ್ರ ಹಿನ್ನಡೆ" ಎಂದು ಕಾಂಗ್ರೆಸ್ ನಾಯಕರು ಬಣ್ಣಿಸಿದ್ದಾರೆ, ಪಾಕಿಸ್ತಾನ ಪಶ್ಚಿಮ ಏಷ್ಯಾದ ಭೌಗೋಳಿಕ ಮತ್ತು ಭದ್ರತಾ ವಾಸ್ತುಶಿಲ್ಪದಲ್ಲಿ ಹೆಚ್ಚು ಆಳವಾಗಿ ಬೇರೂರಿದೆ ಎಂದು ವಾದಿಸಿದ್ದಾರೆ.

ಟ್ರಂಪ್ ಅವರೊಂದಿಗಿನ ಮೋದಿಯವರ ಸಂಬಂಧವನ್ನು ರಮೇಶ್ ಗುರಿಯಾಗಿಸಿಕೊಂಡರು, ಅಮೆರಿಕ ಅಧ್ಯಕ್ಷರ ಬಗ್ಗೆ ಪ್ರಧಾನಿಯವರ ಮನೋಭಾವವನ್ನು ಅತಿಯಾದ ಹೊಂದಾಣಿಕೆ ಎಂದು ಬಣ್ಣಿಸಿದರು. ಇತ್ತೀಚಿನ ಟ್ರಂಪ್-ಮೋದಿ ದ್ವಿಪಕ್ಷೀಯ ಸಭೆಯ ಬಗ್ಗೆ ವಿದೇಶಾಂಗ ಸಚಿವಾಲಯದ ವಿವರಣೆಯನ್ನು ಉಲ್ಲೇಖಿಸಿ, ಸರ್ಕಾರದ ನಿಲುವು "ನಾಚಿಕೆಗೇಡಿನ ಮತ್ತು ವಾಸ್ತವವಾಗಿ ರಾಷ್ಟ್ರವಿರೋಧಿ" ಎಂದು ಅವರು ಆರೋಪಿಸಿದರು.

ಮೋದಿ ಸರ್ಕಾರದ ವಿದೇಶಾಂಗ ನೀತಿಯನ್ನು ನಿರ್ವಹಿಸುವ ವಿಧಾನವನ್ನು, ವಿಶೇಷವಾಗಿ ನೆರೆಯ ರಾಷ್ಟ್ರಗಳು, ಪಶ್ಚಿಮ ಏಷ್ಯಾ ಮತ್ತು ಪ್ರಮುಖ ಜಾಗತಿಕ ಶಕ್ತಿಗಳೊಂದಿಗಿನ ಸಂಬಂಧಗಳ ಬಗೆಗಿನ ಅದರ ವಿಧಾನವನ್ನು ಕಾಂಗ್ರೆಸ್ ಪದೇ ಪದೇ ಟೀಕಿಸಿದೆ. ಮಧ್ಯಪ್ರಾಚ್ಯ ಮತ್ತು ಅದರಾಚೆ ವೇಗವಾಗಿ ವಿಕಸನಗೊಳ್ಳುತ್ತಿರುವ ಭೌಗೋಳಿಕ ರಾಜಕೀಯ ಬೆಳವಣಿಗೆಗಳ ನಡುವೆ ಭಾರತದ ಕಾರ್ಯತಂತ್ರದ ಹಿತಾಸಕ್ತಿಗಳಿಗೆ ಹೆಚ್ಚು ಸಮತೋಲಿತ ಮತ್ತು ಸ್ವತಂತ್ರ ರಾಜತಾಂತ್ರಿಕ ನಿಲುವು ಅಗತ್ಯವಿದೆ ಎಂಬ ವಿರೋಧ ಪಕ್ಷದ ವಿಶಾಲ ವಾದಕ್ಕೆ ರಮೇಶ್ ಅವರ ಇತ್ತೀಚಿನ ಕಾಮೆಂಟ್‌ಗಳು ಸೇರ್ಪಡೆಯಾಗಿವೆ.

# ಮಾಜಿ ಸಿಎಂ ಮಮತಾ ಬ್ಯಾನರ್ಜಿಗೆ ಹಿನ್ನಡೆ

**ಕೊಲ್ಕತ್ತಾ, ಜೂ.18:** ಟಿಎಂಸಿ ಬಂಡಾಯ ನಾಯಕ ಋತಬ್ರತ ಬ್ಯಾನರ್ಜಿ ಅವರನ್ನ ವಿರೋಧ ಪಕ್ಷದ ನಾಯಕನ್ನಾಗಿ ನೇಮಿಸಿದ ವಿಧಾನಸಭಾ ಸ್ಪೀಕರ್ ನಿರ್ಧಾರಕ್ಕೆ ತಡೆ ನೀಡಲು ಕೊಲ್ಕತ್ತಾ ಹೈಕೋರ್ಟ್ ನಿರಾಕರಿಸಿದೆ. ನ್ಯಾಯಲಯದ ಈ ಆದೇಶ ಮಾಜಿ ಸಿಎಂ ಮಮತಾ ಬ್ಯಾನರ್ಜಿ ಬಣಕ್ಕೆ ತೀವ್ರ ಹಿನ್ನಡೆ ಉಂಟು ಮಾಡಿದೆ. ಸ್ಪೀಕರ್ ಆದೇಶಕ್ಕೆ ತಡೆ ನೀಡುವಂತೆ ಕೋರಿ ಮಮತಾ ಬ್ಯಾನರ್ಜಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೃಷ್ಣ ರಾವ್, ತುರ್ತು ಮಧ್ಯಂತರ ಆದೇಶ ಹೊರಡಿಸಲು ನಿರಾಕರಿಸಿದ್ದಾರೆ. ಸ್ಪೀಕರ್ ನಿರ್ಧಾರದ ವಿರುದ್ಧ ಅರ್ಜಿ ಸಲ್ಲಿಸಿದವರು ಮೂರು ವಾರಗಳ ಅಫಿಡವಿಟ್ ಸಲ್ಲಿಸಲು ಸೂಚನೆ ನೀಡಿದ್ದಾರೆ.

ಅಲ್ಲದೇ ಅರ್ಜಿದಾರರು ಇದಕ್ಕೆ ಉತ್ತರ ಸಲ್ಲಿಸಲು ಎರಡು ವಾರಗಳ ಅವಕಾಶವಿದೆ. ಮುಂದಿನ ವಿಚಾರಣೆ ಜುಲೈ 28ರಂದು ನಡೆಯಲಿದೆ. ಮುಂದಿನ ಆದೇಶವರೆಗೂ ಸ್ಪೀಕರ್ ನಿರ್ಧಾರವು ಜಾರಿಯಲ್ಲಿಯೇ ಇರುತ್ತದೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಟಿಎಂಸಿ ಬಂಡಾಯ ಶಾಸಕರಾದ ಸಂದೀಪನ್ ಸಹಾ ಸೇರಿದಂತೆ 59 ಶಾಸಕರ ವಿಧಾನಸಭಾ ಸ್ಪೀಕರ್ ರತೀಂದ್ರ ಬೋಸ್ ಭೇಟಿ ಮಾಡಿ ಋತಬ್ರತ ಬ್ಯಾನರ್ಜಿ ವಿಪಕ್ಷ ನಾಯಕಿಯನ್ನಾಗಿ ನೇಮಿಸಲು ಮನವಿ ಮಾಡಿದ್ದರು ಮನವಿಯಂತೆ ಋತಬ್ರತ ಬ್ಯಾನರ್ಜಿ ಅವರನ್ನು ನೇಮಕ ಮಾಡಲಾಗಿತ್ತು.

# ಮಾವು ಬೆಳೆಗಾರರಿಗೆ ನೆರವು ಕಲ್ಪಿಸಿ ಕೃಷಿ ಸಚಿವರಿಗೆ ಪ್ರಲ್ಹಾದ ಜೋಶಿ ಪತ್ರ

**ನವದೆಹಲಿ,ಜೂ.18:** ಕರ್ನಾಟಕದ ಮಾವು ಬೆಳೆಗಾರರ ಹಿತರಕ್ಷಣೆಗಾಗಿ ಈ ವರ್ಷವೂ ಬೆಲೆ ಕೊರತೆ ಪಾವತಿ ಯೋಜನೆ (ಪಿಡಿಪಿಎಸ್) ಮೂಲಕ ನೆರವಾಗುವಂತೆ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಕೇಂದ್ರ ಕೃಷಿ ಸಚಿವರನ್ನು ಒತ್ತಾಯಿಸಿದ್ದಾರೆ.



ರಾಜ್ಯದ ಮಾವು ಬೆಳೆಗಾರರ ಬವಣೆ, ಸಂಕಷ್ಟ ಕುರಿತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಗುರುವಾರ (ಜೂ.18) ಪತ್ರ ಬರೆದಿರುವ ಸಚಿವ ಜೋಶಿ ಅವರು, ರಾಜ್ಯದ ಮಾವು ಬೆಳೆಗಾರರ ಸಮಸ್ಯೆಗಳಿಗೆ ಶೀಘ್ರವೇ ಸ್ಪಂದಿಸುವಂತೆ ಮನವಿ ಮಾಡಿದ್ದಾರೆ.

ಪಿಡಿಪಿಎಸ್ ಅಡಿ ನೆರವು ನೀಡಿ: ಕರ್ನಾಟಕದಲ್ಲಿ ಹವಾಮಾನ ವೈಪರೀತ್ಯ ಮತ್ತು ಮಾರುಕಟ್ಟೆಯಲ್ಲಿ ಬೆಲೆ ಕುಸಿತದಿಂದ ಮಾವು ಬೆಳೆಗಾರರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಹಾಗಾಗಿ ಕೂಡಲೇ 'ಬೆಲೆ ಕೊರತೆ ಪಾವತಿ ಯೋಜನೆ (ಪಿಡಿಪಿಎಸ್)' ಅಡಿ ನೆರವಾಗುವಂತೆ ಕೃಷಿ ಸಚಿವರನ್ನು ಒತ್ತಾಯಿಸಿದ್ದಾರೆ.

ಕರ್ನಾಟಕ ಮಾವು ಬೆಳೆಯುವ ಉತ್ತಮ ಪರಿಸರ ವ್ಯವಸ್ಥೆ ಹೊಂದಿದೆ. ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಹೆಚ್ಚಿನ ಸಂಖ್ಯೆಯ ರೈತರು ಆದಾಯ ಮತ್ತು ಜೀವನೋಪಾಯಕ್ಕಾಗಿ ಈ ಬೆಳೆಯನ್ನು ಅವಲಂಬಿಸಿದ್ದಾರೆ. ಆದರೆ, ಮಾರುಕಟ್ಟೆಯಲ್ಲಿ ಬೆಲೆ ಕುಸಿತದಿಂದಾಗಿ ವ್ಯತಿರಿಕ್ತ ಪರಿಣಾಮ ಎದುರಿಸುತ್ತಿದ್ದಾರೆ ಎಂದು ಸಚಿವರು ಮನವರಿಕೆ ಮಾಡಿಕೊಟ್ಟಿದ್ದಾರೆ.

ಕೋಲಾರ, ಚಿಕ್ಕಬಳ್ಳಾಪುರ ಮತ್ತು ರಾಮನಗರ, ಧಾರವಾಡ, ಬೆಳಗಾವಿ ಹೀಗೆ ರಾಜ್ಯದೆಲ್ಲೆಡೆ ಇರುವ ಪ್ರಮುಖ ಮಾರುಕಟ್ಟೆಗಳಲ್ಲಿ ತೋತಾಪುರಿ ಮಾವಿನ ಬೆಲೆ ಲಾಭದಾಯಕವಾಗಿಲ್ಲ. ಮಾದರಿ ದರಕ್ಕಿಂತ ಗಮನಾರ್ಹವಾಗಿ ಕನಿಷ್ಠ ಮಟ್ಟಕ್ಕೆ ಕುಸಿದಿದೆ. ಇದರಿಂದ ಬೆಳೆಗಾರರು ತೀವ್ರ ಸಂಕಷ್ಟಕ್ಕೀಡಾಗಿದ್ದಾರೆ. ಇದಲ್ಲದೆ, ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಿಂದಾಗಿ ಈ ಬಾರಿ ಮಾವಿನ ಉತ್ಪಾದನೆ ಸಹ ಕಡಿಮೆಯಾಗಿದೆ. ಇದೆಲ್ಲದರ ಪರಿಣಾಮ ರೈತರಿಗೆ ತೀವ್ರ ಆರ್ಥಿಕ ನಷ್ಟ ಉಂಟಾಗುತ್ತಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಅವರು ಕೃಷಿ ಸಚಿವರ ಗಮನ ಸೆಳೆದಿದ್ದಾರೆ.

ತೋತಾಪುರಿ ಮಾವು ಬೆಳೆಗಾರರ ಹಿತಾಸಕ್ತಿ ಕಾಪಾಡುವ ದೃಷ್ಟಿಯಿಂದ ಕಳೆದ ವರ್ಷದಂತೆ ಪ್ರಸಕ್ತ ವರ್ಷವೂ ಬೆಲೆ ಕೊರತೆ ಪಾವತಿ ಯೋಜನೆ (ಪಿಡಿಪಿಎಸ್) ಅಡಿಯಲ್ಲಿ ನೆರವು ಕಲ್ಪಿಸಿ ಬೆಂಬಲಕ್ಕೆ ನಿಲ್ಲುವ ಅವಶ್ಯಕತೆಯಿದೆ. ಶೀಘ್ರವೇ ಸಕಾರಾತ್ಮಕ ಕ್ರಮ ಕೈಗೊಳ್ಳುವಂತೆ ಜೋಶಿ ಒತ್ತಾಯಿಸಿದ್ದಾರೆ.

# ನಿರಂತರ ಇಂಧನ ಆಘಾತವು ಭಾರತದ ನಿಧಾನಗತಿಯ ಬೆಳವಣಿಗೆ ಕಾರಣವಾಗಲಿದೆ: ಕ್ರಿಸಿಲ್ ಎಚ್ಚರಿಕೆ

**ನವದೆಹಲಿ, ಜೂ.18:** ನಿರಂತರವಾಗಿ ಹೆಚ್ಚಿನ ಕಚ್ಚಾ ತೈಲ ಮತ್ತು ನೈಸರ್ಗಿಕ ಅನಿಲ ಬೆಲೆಗಳು ಕೈಗಾರಿಕೆಗಳಲ್ಲಿ ಅಲೆಯುತ್ತಿರುವುದರಿಂದ, ಉತ್ಪಾದನಾ ವೆಚ್ಚವನ್ನು ಹೆಚ್ಚಿಸುವುದರಿಂದ ಮತ್ತು ಕಾರ್ಪೊರೇಟ್ ಲಾಭಗಳನ್ನು ಹಿಂಡುವುದರಿಂದ ಭಾರತದ ಆರ್ಥಿಕತೆಯು ಈ ಆರ್ಥಿಕ ವರ್ಷದಲ್ಲಿ ಹೆಚ್ಚುತ್ತಿರುವ ಹಿನ್ನಡೆಗಳನ್ನು ಎದುರಿಸಬಹುದು. ಕ್ರಿಸಿಲ್‌ನ ಹೊಸ ವಿಶ್ಲೇಷಣೆಯು, ನಡೆಯುತ್ತಿರುವ ಇಂಧನ ಆಘಾತದ ಪರಿಣಾಮವು ಇಂಧನ-ತೀವ್ರ ವಲಯಗಳನ್ನು ಮೀರಿ ವಿಸ್ತರಿಸುವ ಸಾಧ್ಯತೆಯಿದೆ, ಇದು ವ್ಯಾಪಕ ಶ್ರೇಣಿಯ ಕೈಗಾರಿಕೆಗಳ ಮೇಲೆ ಪರಿಣಾಮ ಬೀರುತ್ತದೆ ಮತ್ತು ಆರ್ಥಿಕ ಬೆಳವಣಿಗೆಯನ್ನು ನಿಧಾನಗೊಳಿಸುತ್ತದೆ ಎಂದು ಸೂಚಿಸುತ್ತದೆ. ಪಶ್ಚಿಮ ಏಷ್ಯಾದಲ್ಲಿನ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಮತ್ತು ಇಂಧನ ಪೂರೈಕೆ ಸರಪಳಿಗಳಲ್ಲಿನ ಅಡಚಣೆಗಳಿಂದ ಪ್ರಚೋದಿಸಲ್ಪಟ್ಟ ಜಾಗತಿಕ ಇಂಧನ ಬೆಲೆಗಳ ಏರಿಕೆಯು ಈಗಾಗಲೇ ವ್ಯವಹಾರಗಳ ಮೇಲೆ ಒತ್ತಡ ಹೇರಲು ಪ್ರಾರಂಭಿಸಿದೆ. ಕಚಾತೈಲ ಬೆಲೆಗಳು ಇತ್ತೀಚಿನ ಗರಿಷ್ಠ ಮಟ್ಟಗಳಿಂದ ಕಡಿಮೆಯಾಗಿದ್ದರೂ, ಕಳೆದ ಹಣಕಾಸು ವರ್ಷದ ಸರಾಸರಿ ಮಟ್ಟಗಳಿಗೆ ಹೋಲಿಸಿದರೆ ಅವು ಹೆಚ್ಚುತ್ತಲೇ ಇವೆ, ಇದು ಆರ್ಥಿಕತೆಯಾದ್ಯಂತ ಉತ್ಪಾದನಾ ವೆಚ್ಚದ ಬಗ್ಗೆ ಕಳವಳಗಳನ್ನು ಜೀವಂತವಾಗಿರಿಸುತ್ತದೆ.

ಅಧ್ಯಯನದ ಪ್ರಕಾರ, ಇಂಧನ ಆಘಾತದ ಪರಿಣಾಮಗಳು ತೈಲ ಸಂಸ್ಕರಣಾಗಾರಗಳು ಅಥವಾ ಇಂಧನ ಉತ್ಪಾದಕರಿಗೆ ಸೀಮಿತವಾಗಿಲ್ಲ. ಸಾರಿಗೆ, ಗಣಿಗಾರಿಕೆ, ಕೃಷಿ, ರಾಸಾಯನಿಕಗಳು ಮತ್ತು ಉತ್ಪಾದನೆಗೆ ಇಂಧನವು ನಿರ್ಣಾಯಕ ಇನ್ಪುಟ್ ಆಗಿರುವುದರಿಂದ, ಹೆಚ್ಚಿನ ಇಂಧನ ಬೆಲೆಗಳು ಕ್ರಮೇಣ ಪೂರೈಕೆ ಸರಪಳಿಗಳ ಮೂಲಕ ಹರಡುತ್ತವೆ, ಇದು ವಲಯಗಳಾದ್ಯಂತ ಸರಕು ಮತ್ತು ಸೇವೆಗಳ ವೆಚ್ಚವನ್ನು ಹೆಚ್ಚಿಸುತ್ತದೆ.



ಕಳೆದ ವರ್ಷ ಶೇ.7 ರಷ್ಟಿದ್ದ ಭಾರತದ ಜಿಡಿಪಿ ಬೆಳವಣಿಗೆ ಈ ವರ್ಷ ಶೇ.6 ಕ್ಕೆ ಇಳಿಯುವ ನಿರೀಕ್ಷೆಯಿದೆ, ಹೆಚ್ಚುತ್ತಿರುವ ಇಂಧನ ವೆಚ್ಚಗಳು ಪ್ರಮುಖ ಅಪಾಯಗಳಲ್ಲಿ ಒಂದಾಗಿ ಹೊರಹೊಮ್ಮುತ್ತಿವೆ. ಪೆಟ್ರೋಲಿಯಂ ಉತ್ಪನ್ನಗಳು ದೇಶದ ಉತ್ಪಾದನಾ ಜಾಲದಲ್ಲಿ ಆಳವಾಗಿ ಹುದುಗಿರುವುದರಿಂದ ಮತ್ತು ಆರ್ಥಿಕತೆಯ ಪ್ರತಿಯೊಂದು ವಲಯದಲ್ಲೂ ವೆಚ್ಚದ ಮೇಲೆ ಪ್ರಭಾವ ಬೀರುವುದರಿಂದ ಕಚ್ಚಾ ತೈಲವು ನೈಸರ್ಗಿಕ ಅನಿಲಕ್ಕಿಂತ ಹೆಚ್ಚಿನ ಸವಾಲನ್ನು ಒಡ್ಡುತ್ತದೆ ಎಂದು ವರದಿ ಗಮನಿಸುತ್ತದೆ.

ನಿರ್ಮಾಣ ವಲಯವು ಗಣನೀಯ ಒತ್ತಡಕ್ಕೆ ಒಳಗಾಗುವ ನಿರೀಕ್ಷೆಯಿದೆ. ಸಿಮೆಂಟ್, ಸೆರಾಮಿಕ್ಸ್, ಬಣ್ಣಗಳು, ಕಬ್ಬಿಣ ಮತ್ತು ಉಕ್ಕು – ನಿರ್ಮಾಣ ಚಟುವಟಿಕೆಗೆ ಅಗತ್ಯವಾದ ವಸ್ತುಗಳು – ಇವೆಲ್ಲವೂ ಇಂಧನ ಬೆಲೆಗಳಿಗೆ ನಿಕಟ ಸಂಬಂಧ ಹೊಂದಿವೆ. ಇಂಧನ ವೆಚ್ಚದಲ್ಲಿನ ಯಾವುದೇ ನಿರಂತರ ಹೆಚ್ಚಳವು ಯೋಜನೆಯ ವೆಚ್ಚಗಳನ್ನು ಹೆಚ್ಚಿಸಬಹುದು ಮತ್ತು ವಲಯದಾದ್ಯಂತ ಲಾಭದಾಯಕತೆಯ ಮೇಲೆ ಪರಿಣಾಮ ಬೀರುತ್ತದೆ.

ಸರ್ಕಾರದ ಬೆಂಬಲ ಕ್ರಮಗಳ ಹೊರತಾಗಿಯೂ ಕೃಷಿ ಕೂಡ ಸವಾಲುಗಳನ್ನು ಎದುರಿಸುತ್ತಿದೆ. ಹೆಚ್ಚಿನ ಡೀಸೆಲ್ ಬೆಲೆಗಳು ಕೃಷಿ ವೆಚ್ಚವನ್ನು ಹೆಚ್ಚಿಸಬಹುದು, ವಿಶೇಷವಾಗಿ ಮಳೆ ಸಾಮಾನ್ಯಕ್ಕಿಂತ ಕಡಿಮೆಯಿದ್ದರೆ ಮತ್ತು ರೈತರು ನೀರಾವರಿ ಮತ್ತು ಯಾಂತ್ರೀಕೃತ ಉಪಕರಣಗಳ ಮೇಲೆ ಹೆಚ್ಚು ಅವಲಂಬಿತರಾಗುವಂತೆ ಒತ್ತಾಯಿಸಿದರೆ. ಹೆಚ್ಚುತ್ತಿರುವ ರಸಗೊಬ್ಬರ ಉತ್ಪಾದನೆ ಮತ್ತು ಆಮದು ವೆಚ್ಚಗಳು ಕೃಷಿ ಕ್ಷೇತ್ರದ ಮೇಲೆ ಒತ್ತಡವನ್ನು ಹೆಚ್ಚಿಸಬಹುದು.

ವ್ಯವಹಾರಗಳು ಹೆಚ್ಚಿನ ವೆಚ್ಚದ ಒಂದು ಭಾಗವನ್ನು ಗ್ರಾಹಕರಿಗೆ ವರ್ಗಾಯಿಸಲು ಪ್ರಯತ್ನಿಸಬಹುದು ಎಂದು ವರದಿ ಗಮನಸೆಳೆದಿದೆ. ಆದಾಗ್ಯೂ, ಕೆಲವು ವಲಯಗಳಲ್ಲಿನ ದುರ್ಬಲ ಬೇಡಿಕೆಯ ಪರಿಸ್ಥಿತಿಗಳು ಅವುಗಳ ಸಾಮರ್ಥ್ಯವನ್ನು ಮಿತಿಗೊಳಿಸಬಹುದು, ಇದರಿಂದಾಗಿ ಕಡಿಮೆ ಲಾಭದಾಯಕತೆಗೆ ಕಾರಣವಾಗಬಹುದು. ಬಲವಾದ ಬೆಲೆ ನಿಗದಿ ಶಕ್ತಿಯನ್ನು ಹೊಂದಿರುವ ಕೈಗಾರಿಕೆಗಳು ಬೆಲೆಗಳನ್ನು ಹೆಚ್ಚಿಸಲು ಸಾಧ್ಯವಾಗಬಹುದು, ಆದರೆ ಇತರರು ವೆಚ್ಚ ಹೆಚ್ಚಳದ ಗಮನಾರ್ಹ ಭಾಗವನ್ನು ಹೀರಿಕೊಳ್ಳಬೇಕಾಗಬಹುದು. ಒಟ್ಟಾರೆಯಾಗಿ, ಹೆಚ್ಚಿದ ಇಂಧನ ಬೆಲೆಗಳು ಕ್ರಮೇಣ ವಿಶಾಲ ಉತ್ಪಾದನಾ ವೆಚ್ಚಗಳಿಗೆ ಆಹಾರವನ್ನು ನೀಡುತ್ತಿರುವ ಆರ್ಥಿಕತೆಯ ಚಿತ್ರವನ್ನು ಅಧ್ಯಯನವು ಚಿತ್ರಿಸುತ್ತದೆ. ದೀರ್ಘಕಾಲದವರೆಗೆ ಇಂಧನ ಬೆಲೆಗಳು ಹೆಚ್ಚಿದ್ದರೆ, ಮುಂದಿನ ತಿಂಗಳುಗಳಲ್ಲಿ ವ್ಯವಹಾರಗಳು ಮತ್ತು ಬೆಳವಣಿಗೆಯ ಮೇಲಿನ ಒತ್ತಡವು ಮತ್ತಷ್ಟು ತೀವ್ರಗೊಳ್ಳಬಹುದು.



**ಜಾರ್ಖಂಡ್‌ನ ರಾಂಚಿಯಲ್ಲಿ ಗುರುವಾರ ನಡೆದ ರಾಜ್ಯಸಭಾ ಚುನಾವಣೆಯಲ್ಲಿ ಜಯಗಳಿಸಿದ ನಂತರ ರಾಜ್ಯ ಬಿಜೆಪಿ ಅಧ್ಯಕ್ಷ ಮತ್ತು ಸಂಸದ ಆದಿತ್ಯ ಸಾಹು, ಜಾರ್ಖಂಡ್ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಬಾಬುಲಾಲ್ ಮರಾಂಡಿ ಅವರನ್ನು ಹೊಸದಾಗಿ ಆಯ್ಕೆಯಾದ ರಾಜ್ಯಸಭಾ ಸದಸ್ಯ ಪರಿಮಳ್ ನಾಥ್ವಾನಿ ಸ್ವಾಗತಿಸಿದರು.**

# ಉದ್ಧವ್ ಠಾಕ್ರಗೆ ಹಿನ್ನಡೆ; ಸಂಸದೀಯ ಸಭೆಗೆ ಹಾಜರಾಗದ ಆರು ಸಂಸದರು: ಶಿವಸೇನೆ ಯುಬಿಟಿ ಇಬ್ಭಾಗ ಖಚಿತ

ನವದೆಹಲಿ : ಶಿವಸೇನೆ ( ಯುಬಿಟಿ ) ಬಣ ಮತ್ತೊಮ್ಮೆ ಒಡೆದು ಚೂರಾಗುವುದು ಖಚಿತವಾಗಿದೆ. ಇಂದು ಉದ್ಧವ್ ಠಾಕ್ರೆ ನೇತೃತ್ವದಲ್ಲಿ ದೆಹಲಿಯಲ್ಲಿ ನಡೆದ ಸಂಸದೀಯ ಸಭೆಗೆ ಒಂಭತ್ತು ಸಂಸದರ ಪೈಕಿ ಮೂವರು ಮಾತ್ರ ಹಾಜರಾಗಿದ್ದು ಆರು ಸಂಸದರು ಗೈರುಹಾಜರಾಗಿದ್ದಾರೆ.

ಅನಿಲ್ ದೇಸಾಯಿ, ಅರವಿಂದ್ ಸಾವಂತ್ ಮತ್ತು ರಾಜಭಾವು ಪರಾಗ್ ಪ್ರಕಾಶ್ ವಾಜೆ ಮಾತ್ರ ಸಭೆಯಲ್ಲಿ ಭಾಗಿಯಾಗಿದ್ದರು, ಸಂಜಯ್ ಜಾಧವ್, ಭೌಸಾಹೇಬ್ ವಾಕ್ಚೌರೆ, ಓಂರಾಜೆ ನಿಂಬಾಳ್ಕರ್, ಸಂಜಯ್ ದಿನ ಪಾಟೀಲ್, ಸಂಜಯ್ ದೇಶಮುಖ್ ಮತ್ತು ನಾಗೇಶ್ ಪಾಟೀಲ್ ಅಷ್ಟಿಕರ್ ಸಭೆಗೆ ಹಾಜರಾಗಲಿಲ್ಲ.

ಸಭೆಗೆ ಗೈರುಹಾಜರಾದ ಸಂಸದರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಪಕ್ಷ ಚಿಂತಿಸುತ್ತಿದ್ದು, ಅವರಿಗೆ ಶೋಕಾಸ್ ನೋಟಿಸ್ ಕಳುಹಿಸಲಾಗುವುದು ಎಂದು ಯುಬಿಟಿಯ ಮುಖ್ಯ ಸಚೇತಕ ದೇಸಾಯಿ ಹೇಳಿದ್ದಾರೆ. ವಿಪ್ ಜಾರಿಯಲ್ಲಿದ್ದರೂ ಅವರು ಸಭೆಗೆ ಏಕೆ ಹಾಜರಾಗಲಿಲ್ಲ ಎಂಬುದನ್ನು ಅವರು ವಿವರಿಸಬೇಕಾಗುತ್ತದೆ. ಹೆಚ್ಚುವರಿಯಾಗಿ, ಅವರು ಸಭೆಗೆ ಏಕೆ ಹಾಜರಾಗಲಿಲ್ಲ ಎಂಬುದಕ್ಕೆ ಯಾವುದೇ ವಿವರಗಳನ್ನು ನೀಡಿಲ್ಲ ಎಂದು ದೇಸಾಯಿ ತಿಳಿಸಿದರು.

ಈ ನಡುವೆ ಠಾಕ್ರೆ ಅವರ ಆಪ್ತ ಸಹಾಯಕರೆಂದು ಪರಿಗಣಿಸಲಾದ ಶಿವಸೇನಾ (ಯುಬಿಟಿ) ರಾಜ್ಯಸಭಾ ಸಂಸದ ಸಂಜಯ್ ರಾವತ್, ಸಂಸದರನ್ನು 'ದೇಶದ್ರೋಹಿಗಳು' ಎಂದು ಕರೆದಿದ್ದಾರೆ. "ಇತರ 6 ಸಂಸದರು ಸ್ಪೀಕರ್ ಅವರನ್ನು ಭೇಟಿಯಾದರೆ, ಅದೇ ಫೋಟೋವನ್ನು ನಮಗೆ ತೋರಿಸಿ ಇದನ್ನು ತಂತ್ರ ಎಂದು ಕರೆಯಲಾಗುವುದಿಲ್ಲ,



ಇದು ದ್ರೋಹ. ಅವರು ಇನ್ನೂ ನಮ್ಮ ಪಕ್ಷದ ಸದಸ್ಯರಾಗಿದ್ದಾರೆ ಮತ್ತು ನಮ್ಮ ಚಿಹ್ನೆಯ ಮೇಲೆ ಗೆದ್ದಿದ್ದಾರೆ. ಅವರು ಪಕ್ಷದ ವಿಪ್ ಅನ್ನು ಉಲ್ಲಂಘಿಸಿದ್ದರೆ, ಅವರು ಕಾನೂನು ಕ್ರಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಉದ್ಧವ್ ಸೇನೆಯು ಈಗಾಗಲೇ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಪತ್ರ ಸಲ್ಲಿಸಿ, ಬೇರೆ ಯಾವುದೇ ವಿಭಾಗವನ್ನು ಯುಬಿಟಿ ಎಂದು ಗುರುತಿಸದಂತೆ ಒತ್ತಾಯಿಸಿದೆ, ಆದರೆ ಶಿವಸೇನೆ (ಯುಬಿಟಿ) ನಿಜವಾದ ಶಿವಸೇನೆಯಾಗಿ ಉಳಿದಿದೆ ಎಂದು ಸಮರ್ಥಿಸಿಕೊಂಡಿದೆ ಎಂಬುದನ್ನು ಗಮನಿಸಬೇಕು.

ಶಿವಸೇನಾ ಎಂಎಲ್ಸಿ ಚಂದ್ರಕಾಂತ್ ರಘುವಂಶಿ ಅವರು ಆರು ಸಂಸದರು ಈಗಾಗಲೇ ಶಿಂಧೆ ಸೇನೆಗೆ ಸೇರಿದ್ದಾರೆ ಎಂದು ಹೇಳಿದ್ದಾರೆ,

ಆದರೆ ಈ ಬಗ್ಗೆ ಇನ್ನೂ ಅಧಿಕೃತ ದೃಢೀಕರಣವಿಲ್ಲ. ಮಹಾರಾಷ್ಟ್ರದಲ್ಲಿ ಆಪರೇಷನ್ ಟೈಗರ್ ನಡೆದಿದೆ. ಇಂದು, ಆರು ಸಂಸದರು ಏಕನಾಥ್ ಶಿಂಧೆ ಅವರ ಮೇಲೆ ವಿಶ್ವಾಸ ವ್ಯಕ್ತಪಡಿಸಿ ಶಿವಸೇನೆಗೆ ಸೇರಿದ್ದಾರೆ ಅವರು ನಮ್ಮೊಂದಿಗೆ ಸೇರಿದ್ದು ಒಳ್ಳೆಯದು. ನಾನು ಅವರನ್ನು ಸ್ವಾಗತಿಸುತ್ತೇನೆ ಎಂದು ಹೇಳಿದ್ದಾರೆ.

# ತ್ಯಾಜ್ಯ ವಿಲೇವಾರಿ ಸಮಸ್ಯೆಗೆ ಶಾಶ್ವತ ಪರಿಹಾರ: ಸಚಿವ ಕೃಷ್ಣ ಬೈರೇಗೌಡ ಸೂಚನೆ


**ಬೆಂಗಳೂರು, ಜೂ.18:** ವಿಧಾನ ಪರಿಷತ್ ಚುನಾವಣೆಯಲ್ಲಿ ಮತ ಚಲಾಯಿಸಿದ ತಕ್ಷಣವೇ ತಡಮಾಡದೆ ಕ್ರಿಯಾಶೀಲರಾಗಿ ಕೆಲಸಕ್ಕೆ ಮರಳಿರುವ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ರಾಜಧಾನಿಯ ತ್ಯಾಜ್ಯ ವಿಲೇವಾರಿ ಸಮಸ್ಯೆಗೆ ಶಾಶ್ವತ ಮುಕ್ತಿ ಹಾಡಲು ಅಧಿಕಾರಿಗಳಿಗೆ ಬಿಗಿ ನಿರ್ದೇಶನ ನೀಡಿದ್ದಾರೆ.

ಗುರುವಾರ ವಿಧಾನಸೌಧದಲ್ಲಿ ಮತ ಹಾಕಿದ ತಕ್ಷಣವೇ ಜಿಬಿಎ ಕೇಂದ್ರ ಕಚೇರಿಗೆ ಆಗಮಿಸಿದ ಸಚಿವರು, ಬೆಳಿಗ್ಗೆ 11.15ಕ್ಕೆ ನಿಗದಿಯಾಗಿದ್ದ ಮಹತ್ವದ ಸಭೆಯನ್ನು 15 ನಿಮಿಷ ಮುಂಚಿತವಾಗಿಯೇ ಆರಂಭಿಸುವ ಮೂಲಕ ತಮ್ಮ ಸಮಯಪ್ರಜ್ಞೆ ಹಾಗೂ ಕಾರ್ಯನಿಷ್ಠೆಯನ್ನು ಮತ್ತೊಮ್ಮೆ ಪ್ರದರ್ಶಿಸಿದರು.

ಕಸ ವಿಂಗಡನೆ ಮಾಡಲೇಬೇಕು ಎಂದ ಸಚಿವರು ನಗರದ ಕಸದ ಸಮಸ್ಯೆಗೆ ತೇಪೆ ಹಚ್ಚುವ ಕೆಲಸ ಬಿಟ್ಟು ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಸಭೆಯಲ್ಲಿ ಸಚಿವರು ಕಟ್ಟುನಿಟ್ಟಾಗಿ ಹೇಳಿದರು.

"ಹಸಿ ಮತ್ತು ಒಣತ್ಯಾಜ್ಯಗಳನ್ನು ಮನೆಗಳಲ್ಲೇ ಸಾರ್ವಜನಿಕರು ಕಡ್ಡಾಯವಾಗಿ ಬೇರ್ಪಡಿಸಿ ಕಸದ ಗಾಡಿಗೆ ನೀಡಬೇಕು.ಕಸ ಸಂಗ್ರಹಿಸುವ ಗಾಡಿಗಳೂ ಸಹ ಆ ತ್ಯಾಜ್ಯವನ್ನು ಪ್ರತ್ಯೇಕವಾಗಿಯೇ ಇಟ್ಟುಕೊಂಡು ಸಂಸ್ಕರಣಾ ಘಟಕಗಳಿಗೆ ತಲುಪಿಸಬೇಕು. ಇಂತಹ ಮೂಲಭೂತ ಮತ್ತು ದೂರದೃಷ್ಟಿಯ ಯೋಜನೆ ಇಲ್ಲದಿದ್ದರೆ ಬೆಂಗಳೂರಿನ ಕಸದ ಸಮಸ್ಯೆಗೆ ಎಂದಿಗೂ ಮುಕ್ತಿ ಸಿಗಲು ಸಾಧ್ಯವಿಲ್ಲ" ಎಂದು ಅವರು ಸ್ಪಷ್ಟಪಡಿಸಿದರು.

ನಗರದ ತ್ಯಾಜ್ಯ ನಿರ್ವಹಣೆಯ ಇತಿಹಾಸವನ್ನು ನೆನಪಿಸಿದ ಸಚಿವರು, "ಬೆಂಗಳೂರಿನಲ್ಲಿ 2017ರ ವರೆಗೂ ರಸ್ತೆಗಳಲ್ಲಿ ಎಲ್ಲೂ ಕಸದ ಬುಟ್ಟಿಗಳನ್ನು ಇಡುವ ಪದ್ಧತಿ ಇರಲಿಲ್ಲ. ಆದರೆ, ಯಾರದ್ದೋ ಜೇಬು ತುಂಬಿಸಲು (ದುಡ್ಡು ಮಾಡಿಕೊಡಲು) ಕೆಲವೆಡೆ ಮಾತ್ರ ಕಸದ ಬುಟ್ಟಿಗಳನ್ನು ಇಡಲಾಯಿತು. ಇದರ ಪರಿಣಾಮವಾಗಿ ಜನರು ಕಸದ ಬುಟ್ಟಿಗೆ ಮಾತ್ರವಲ್ಲದೆ, ರಸ್ತೆಯ ಕಂಡಕಂಡಲ್ಲಿ ಕಸ ಎಸೆಯಲು ಶುರುಮಾಡಿದರು. ಈಗಲೂ ನಗರದಲ್ಲಿ ಇದೇ ಕೆಟ್ಟ ಪದ್ಧತಿ ಮುಂದುವರಿದಿರುವುದೇ ಇಂದಿನ ಎಲ್ಲಾ



ಸಮಸ್ಯೆಗಳಿಗೂ ಮೂಲ ಕಾರಣ" ಎಂದು ತೀವ್ರ ಬೇಸರ ವ್ಯಕ್ತಪಡಿಸಿದರು.

ನಗರವನ್ನು ಸ್ವಚ್ಛವಾಗಿಡುವ ನಿಟ್ಟಿನಲ್ಲಿ ಸಚಿವ ಕೃಷ್ಣ ಬೈರೇಗೌಡರು ಅಧಿಕಾರಿಗಳಿಗೆ ಖಡಕ್ ಆಜ್ಞೆ ಹೊರಡಿಸಿದ್ದು, ತಕ್ಷಣದಿಂದಲೇ ಈ ಕೆಳಗಿನ ಕ್ರಮಗಳನ್ನು ಜಾರಿಗೆ ತರಲು ಆದೇಶಿಸಿದ್ದಾರೆ:

**ವಿಶೇಷ ಸ್ವಚ್ಛತಾ ಅಭಿಯಾನ:** ನಗರದ ಮುಖ್ಯ ರಸ್ತೆಗಳಲ್ಲಿ ಬಿದ್ದಿರುವ ಕಸ, ಕಟ್ಟಡದ ಅವಶೇಷಗಳು (ಡೆಬ್ರಿಸ್) ಹಾಗೂ ಬೆಳೆದಿರುವ ಕಳೆಗಳನ್ನು ವಿಶೇಷ ಅಭಿಯಾನದಡಿ ಒಂದು ಬಾರಿ ಸಂಪೂರ್ಣವಾಗಿ ಸ್ವಚ್ಛಗೊಳಿಸಲಾಗುವುದು.

**ಭಾರಿ ಪ್ರಮಾಣದ ದಂಡ:** ಇನ್ನು ಸಾರ್ವಜನಿಕ ಸ್ಥಳಗಳಲ್ಲಿ ಅಥವಾ ರಸ್ತೆ ಬದಿಗಳಲ್ಲಿ ಕಸ ಸುರಿಯುವವರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಹಾಗೂ ಭಾರಿ ದಂಡ ವಿಧಿಸಲಾಗುವುದು. ವಿನೂತನ ಶಿಕ್ಷೆ ಯಾರು ಸಾರ್ವಜನಿಕ ಸ್ಥಳದಲ್ಲಿ ಕಸ ಸುರಿಯುತ್ತಾರೋ, ಪತ್ತೆಯಾದ ತಕ್ಷಣ ಅವರ ಕೈಯಿಂದಲೇ ಆ ಕಸವನ್ನು ಕಡ್ಡಾಯವಾಗಿ ತೆರವುಗೊಳಿಸಲಾಗುವುದು.

**ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ:** "ಇಡೀ ದೇಶದಲ್ಲಿ ಬೆಂಗಳೂರು ಎಂದರೆ ಬರೀ ಗಾರ್ಬೇಜ್, ಗಾರ್ಬೇಜ್ ಎಂದೇ ದೊಡ್ಡಮಟ್ಟದ ಚರ್ಚೆಯಾಗುತ್ತಿದೆ. ಈ ಸಮಸ್ಯೆಯನ್ನು ನಾವು ತಕ್ಷಣವೇ ಪರಿಹರಿಸದಿದ್ದರೆ ಸಾರ್ವಜನಿಕರ ಮುಂದೆ ಹೋಗಿ ಮುಖ ತೋರಿಸುವುದೂ ಕಷ್ಟವಾಗುತ್ತದೆ" ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ ಸಚಿವರು, ಸ್ವಚ್ಛ ಬೆಂಗಳೂರು ನಿರ್ಮಾಣ ನಮ್ಮೆಲ್ಲರ ಜವಾಬ್ದಾರಿ ಎಂದು ನೆನಪಿಸಿದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಡಿಸಿಎಂ ಡಾ ಜಿ ಪರಮೇಶ್ವರ ಅವರ ಸದಾಶಿವನಗರ ನಿವಾಸಕ್ಕೆ ಗುರುವಾರ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಸಚಿವ ಪ್ರಿಯಾಂಕ್ ಖರ್ಗೆ ಜತೆಗಿದ್ದರು. ಪರಮೇಶ್ವರ ಅವರು ಸೋಂಕು ಜ್ವರ ಪೀಡಿತರಾಗಿದ್ದು, ವಾರದಿಂದ ಮನೆಯಲ್ಲೇ ಚಿಕಿತ್ಸೆ, ವಿಶ್ರಾಂತಿ ಪಡೆಯುತ್ತಿದ್ದಾರೆ.

# ಕರ್ತವ್ಯ ಆಪ್ ನೋಂದಣಿ ಶೇ. 70.6 ರಷ್ಟು ಪ್ರಗತಿ ಸಾಧನೆ

**ಬೆಂಗಳೂರು, ಜೂ.18:** "ಕರ್ತವ್ಯ ಆಪ್ನಲ್ಲಿ 2.13 ಲಕ್ಷ ಉದ್ಯೋಗಿಗಳು ನೋಂದಣಿಯಾಗಿಲ್ಲ" ಎಂಬ ವರದಿಗಳಿಗೆ ಸರ್ಕಾರ ಅಧಿಕೃತ ಸ್ಪಷ್ಟೀಕರಣವನ್ನು ನೀಡಿದೆ.

ಪ್ರಸ್ತುತ 'ಕರ್ತವ್ಯ' ಯೋಜನೆಯಡಿ ಉದ್ಯೋಗಿಗಳ ನೋಂದಣಿ ಪ್ರಕ್ರಿಯೆಯು ಅತ್ಯಂತ ವೇಗವಾಗಿ ನಡೆಯುತ್ತಿದ್ದು, ಈಗಾಗಲೇ ಶೇ.70.6 ಕ್ಕಿಂತ ಹೆಚ್ಚು ನೌಕರರು ಯಶಸ್ವಿಯಾಗಿ ನೋಂದಾಯಿಸಿ ಕೊಂಡಿದ್ದಾರೆ ಎಂದು ಸರ್ಕಾರ ತಿಳಿಸಿದೆ.

**ವೇಗದ ಪ್ರಗತಿ :** ಮಾಧ್ಯಮಗಳಲ್ಲಿ ಪ್ರಕಟವಾಗಿದ್ದ 2,13,925 ನೌಕರರ ಅಪೂರ್ಣ ನೋಂದಣಿಯ ಅಂಕಿ-ಅಂಶಗಳು ಜೂನ್ 12, 2026 ರವರೆಗಿನ ಮಾಹಿತಿಯಾಗಿದ್ದವು. ಆದರೆ ಕಳೆದ 4–5 ದಿನಗಳಲ್ಲಿ ನಡೆಸಲಾದ ವಿಶೇಷ ಆಂದೋಲನ ದಿಂದಾಗಿ ಈ ಸಂಖ್ಯೆ 2026 ನೇ ಜೂನ್ 18 ರ ವೇಳೆಗೆ 1,40,433 ಕ್ಕೆ ಕುಸಿದಿದೆ. ಅಂದರೆ ಕೇವಲ ಒಂದು ವಾರದಲ್ಲಿ ನೋಂದಣಿಯಾಗದ ನೌಕರರ ಸಂಖ್ಯೆಯಲ್ಲಿ ಶೇ. 34.4 ರಷ್ಟು ಭಾರಿ ಇಳಿಕೆಯಾಗಿದೆ.

**ನೋಂದಣಿ ಸ್ಥಿತಿಗತಿ:** ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ ದತ್ತಾಂಶದ ಪ್ರಕಾರ, ಒಟ್ಟು 43 ಪ್ರಮುಖ ಇಲಾಖೆಗಳು ಹಾಗೂ 137 ಸರಣಿ ಇಲಾಖೆಗಳು/ಸಂಸ್ಥೆಗಳ ವ್ಯಾಪ್ತಿಯಲ್ಲಿರುವ 4,78,181 ನೌಕರರ ಪೈಕಿ 3,37,748 (ಶೇ. 70.6) ನೌಕರರು ಈಗಾಗಲೇ ಆಪ್‌ನಲ್ಲಿ ಯಶಸ್ವಿಯಾಗಿ ನೋಂದಾಯಿಸಿ ಕೊಂಡಿದ್ದಾರೆ.

**ದೈನಂದಿನ ಸಕ್ರಿಯ ಬಳಕೆ :** 2026 ನೇ ಜೂನ್ 18 ರ ಬೆಳಿಗ್ಗೆ 11:00 ಗಂಟೆಯ ಒಳಗೆ ಒಟ್ಟು ನೋಂದಾಯಿತ ಬಳಕೆದಾರರಲ್ಲಿ ಸುಮಾರು ಶೇ. 57 ರಷ್ಟು (1,92,605 ನೌಕರರು) ಉದ್ಯೋಗಿಗಳು ಆಪ್ ಮೂಲಕ ತಮ್ಮ ಹಾಜರಾತಿಯನ್ನು ದಾಖಲಿಸಿದ್ದಾರೆ. ಬಾಕಿ ಉಳಿದಿರುವ ಶೇ. 29.4 ರಷ್ಟು ನೌಕರರ ನೋಂದಣಿಗಾಗಿ ಇ–ಆಡಳಿತ ಕೇಂದ್ರವು (ಸಿಇಜಿ) ವಿಶೇಷ ತರಬೇತಿ ಮತ್ತು ನೋಂದಣಿ ಶಿಬಿರಗಳನ್ನು ಆಯೋಜಿಸಿದೆ.

ತಾಂತ್ರಿಕ ಸಮಸ್ಯೆಗಳ ಪರಿಹಾರಕ್ಕಾಗಿ ನೋಡಲ್ ಅಧಿಕಾರಿಗಳು, ಸಹಾಯವಾಣಿ ಮತ್ತು ಎಐ ಆಧಾರಿತ ವಾಯ್ಸ್ ಬಾಟ್ ಸೌಲಭ್ಯವನ್ನು ಕಲ್ಪಿಸಲಾಗಿದೆ.

ಎಲ್ಲಾ ಅಧಿಕಾರಿಗಳು ಮತ್ತು ನೌಕರರು ನಿಗದಿತ ಸಮಯದೊಳಗೆ ಶೇ.100ರಷ್ಟು ನೋಂದಣಿ ಪೂರ್ಣ ಗೊಳಿಸುವಂತೆ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

'ಕರ್ತವ್ಯ' ತಂತ್ರಾಂಶವು ಸರ್ಕಾರಿ ನೌಕರರ ಹಾಜರಾತಿಯಲ್ಲಿ ಪಾರ ದರ್ಶಕತೆ ಮತ್ತು ಹೊಣೆಗಾರಿಕೆಯನ್ನು ತರಲು ರೂಪಿಸಲಾದ ಕ್ರಾಂತಿಕಾರಿ ಹೆಜ್ಜೆಯಾಗಿದೆ ಎಂದು ಸರ್ಕಾರ ಪುನರುಚ್ಚರಿಸಿದೆ.

# ಗೋದಾಮು, ಅಂಗಡಿಗಳ ಮೇಲೆ ಜಿಬಿಎ ದಾಳಿ: 225 ಕೆಜಿ ಪ್ಲಾಸ್ಟಿಕ್ ಜಪ್ತಿ

**ಬೆಂಗಳೂರು,ಜೂ.18:**ದಕ್ಷಿಣ ಪಾಲಿಕೆಯ ಘನತ್ಯಾಜ್ಯ ನಿರ್ವಹಣಾ ವಿಭಾಗದ ಅಧಿಕಾರಿಗಳು ಬುಧವಾರ ಜಿಬಿಎ ವ್ಯಾಪ್ತಿಯ ವಿವಿಧೆಡೆ ಏಕ ಬಳಕೆ ಪ್ಲಾಸ್ಟಿಕ್ ಮಾರಾಟ ಮಾಡುವ ಗೋದಾಮು ಹಾಗೂ ಅಂಗಡಿಗಳ ಮೇಲೆ ಬುಧವಾರ ದಾಳಿ ನಡೆಸಿದ್ದು, 225 ಕೆಜಿ ಪ್ಲಾಸ್ಟಿಕ್ ಜಪ್ತಿ ಮಾಡಿದ್ದಾರೆ.



ಬಿಎಸ್‌ಡಬ್ಲ್ಯೂಎಂಎಲ್‌ನ ಮುಖ್ಯ ಕಾರ್ಯಾಚರಣೆ ಅಧಿಕಾರಿ ನಿರ್ದೇಶನದ ಮೇರೆಗೆ ಪಾಲಿಕೆಯ ಘನತ್ಯಾಜ್ಯ ವಿಭಾಗದ ಅಧಿಕಾರಿಗಳು ದಕ್ಷಿಣ, ಉತ್ತರ ಹಾಗೂ ಪಶ್ಚಿಮ ನಗರ ಪಾಲಿಕೆಯ ವ್ಯಾಪ್ತಿಯ ಪ್ರದೇಶಗಳಲ್ಲಿ ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ವಿರುದ್ಧ ನಡೆದ ಈ ಕಾರ್ಯಾಚರಣೆಯಲ್ಲಿ ನಿಯಮ ಉಲ್ಲಂಘಿಸಿದವರಿಂದ ಒಟ್ಟು 1.26 ಲಕ್ಷ ರೂ.ದಂಡವನ್ನು ವಸೂಲಿ ಮಾಡಿ, ಒಟ್ಟು 240 ಕೆಜಿಗೂ ಹೆಚ್ಚು ಪ್ಲಾಸ್ಟಿಕ್ ಅನ್ನು ಜಪ್ತಿ ಮಾಡಿದರು.

ದಕ್ಷಿಣ ನಗರ ಪಾಲಿಕೆಯ ವ್ಯಾಪ್ತಿಯ ಬಿಟಿಎಂ ಲೇಔಟ್‌ನಲ್ಲಿ ಕಾರ್ಯಾಚರಣೆಗೆ ಇಳಿದ ಅಧಿಕಾರಿಗಳು ನಿಯಮ ಉಲ್ಲಂ ಸಿ ಏಕಬಳಕೆ ಪ್ಲಾಸ್ಟಿಕ್ ಸಂಗ್ರಹಿಸಿಟ್ಟಿದ್ದ ಸುರೇಶ್ ಪ್ಯಾಕೇಜಿಂಗ್ ಸಂಸ್ಥೆಗೆ 10 ಸಾವಿರ ರೂ., ರಾಜಗುರು ಪ್ಯಾಕೇಜಿಂಗ್ ಸಂಸ್ಥೆಗೆ 10 ಸಾವಿರ ರೂ.ಗಳ ದಂಡ ವಿಧಿಸಿ, 15 ಕೆಜಿ ಏಕ ಬಳಕೆ ಪ್ಲಾಸ್ಟಿಕ್ ಅನ್ನು ವಶಕ್ಕೆ ಪಡೆದರು. ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಸರ್ವಜ್ಞನಗರದ ಕಮ್ಮನಹಳ್ಳಿಯಲ್ಲಿ ಘನತ್ಯಾಜ್ಯ ವಿಭಾಗದ ಅಧಿಕಾರಿಗಳು ಏಕ ಬಳಕೆಯ ಪ್ಲಾಸ್ಟಿಕ್ ವಿರುದ್ಧ ಇಂದು ನಡೆಸಿದ ಕಾರ್ಯಾಚರಣೆಯಲ್ಲಿ 9 ಪ್ರಕರಣಗಳನ್ನು ದಾಖಲಿಸಿಕೊಂಡು ಒಟ್ಟು 81 ಸಾವಿರ ರೂ.ಗಳ ದಂಡವನ್ನು ಸ್ಥಳದಲ್ಲೇ ವಸೂಲಿ ಮಾಡಿ, 210 ಕೆಜಿ ಪ್ಲಾಸ್ಟಿಕ್ ವಶಪಡಿಸಿಕೊಂಡರು. ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ದೀಪಾಂಜಲಿ ನಗರದ ಮುತ್ತುಚಾರಿ ಇಂಡಸ್ಟ್ರಿಯಲ್ ಎಸ್ಟೇಟ್‌ನಲ್ಲಿ ಕೈಗೊಂಡ ಕಾರ್ಯಾಚರಣೆಯಲ್ಲಿ ಒಟ್ಟು 3 ಪ್ರಕರಣಗಳನ್ನು ದಾಖಲಿಸಿಕೊಂಡ ಅಧಿಕಾರಿಗಳು, 25 ಸಾವಿರ ರೂ. ದಂಡ ವಸೂಲಿ ಮಾಡಿ, 15 ಕೆಜಿ ನಿಷೇಧಿತ ಪ್ಲಾಸ್ಟಿಕ್ ಅನ್ನು ವಶಕ್ಕೆ ಪಡೆದರು.

# ಬೇಕರಿ, ಕಾಂಡಿಮೆಂಟ್ಸ್ ಮಾಲೀಕರಿಗೆ ಕಿರುಕುಳ ತಪ್ಪಿಸಲು ಕ್ರಮ: ಆರೋಗ್ಯ ಸಚಿವ ಖಾದರ್

**ಬೆಂಗಳೂರು,ಜೂ.18:** ಬೇಕರಿ, ಕಾಂಡಿಮೆಂಟ್ಸ್ ಮತ್ತಿತರೆ ಅಂಗಡಿ ಮುಂಗಟ್ಟುಗಳಿಗೆ ಜಿಬಿಎ, ಆರೋಗ್ಯ ಮತ್ತು ಪೊಲೀಸ್ ಇಲಾಖೆಯಿಂದ ನೀಡುತ್ತಿರುವ ಕಿರುಕುಳ ತಪ್ಪಿಸಲು ಶೀಘ್ರದಲ್ಲೇ ಸಭೆ ಕರೆಯುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಕಿರುಕುಳ ಕುರಿತು ಸಭೆ ಕರೆದು ಚರ್ಚಿಸಿ ಸೂಕ್ತ ಪರಿಹಾರ ರೂಪಿಸುವುದಾಗಿ ಹೇಳಿದರು.

ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ಕಾರ್ಮಿಕ ಪರಿಷತ್ತಿನ ರಾಜ್ಯಾಧ್ಯಕ್ಷ ರವಿಶೆಟ್ಟಿ ಬೈಂದೂರ್, ಸಣ್ಣ ಉದ್ದಿಮೆದಾರರ 27 ನ್ಯಾಯಸಮ್ಮತ





ಭರವಸೆ ನೀಡಿದ್ದಾರೆ. ನಗರದ ಫ್ರೀಡಂ ಪಾರ್ಕ್ ನಲ್ಲಿ ಪ್ರತಿನಿತ್ಯ ಕಿರುಕುಳ ನೀಡುತ್ತಿರುವುದನ್ನು ಖಂಡಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಬೃಹತ್ ಪ್ರತಿಭಟನೆಯಲ್ಲಿ ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿ ಮಾತನಾಡಿದ ಸಚಿವರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಆರೋಗ್ಯ ಮತ್ತು ಪೊಲೀಸ್ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಗುತ್ತಿದೆ. ಕಿರುಕುಳ ಮುಂದುವರೆದರೆ ಹೋರಾಟ ತೀವ್ರಗೊಳಿಸುತ್ತೇವೆ. ನಮ್ಮ ಸಮಸ್ಯೆಗಳಿಗೆ ಸರ್ಕಾರ ಕೂಡಲೇ ಸ್ಪಂದಿಸಬೇಕು ಎಂದರು.

ಸಣ್ಣ ವ್ಯಾಪಾರಿಗಳ ಮೇಲೆ ನಡೆಯುತ್ತಿರುವ ದಂಡದ ಹಾವಳಿ, ಅಧಿಕಾರಿಗಳ ಕಿರುಕುಳ, ಪರವಾನಗಿ ಸಮಸ್ಯೆಗಳು ಹಾಗೂ ಜೀವನೋಪಾಯಕ್ಕೆ ಧಕ್ಕೆಯಾಗುತ್ತಿದೆ. ವ್ಯಾಪಾರಿಗಳು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಸಾಮಾಜಿಕ ಕಾರ್ಯಕರ್ತ ಗಂಡಸಿ ಸದಾನಂದ ಸ್ವಾಮಿ, ಮಹಿಳಾ ಅಧ್ಯಕ್ಷೆ ಪೂಜಾ ಶೆಟ್ಟಿ, ಬೇಕರಿ ಮಾಲೀಕರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಹಾಜರಿದ್ದರು.

# ಶಾಸನಬದ್ಧ ನಿಯಮಗಳ ಮೂಲಕ ಚಿತ್ರರಂಗದ ಬೆಳವಣಿಗೆಗೆ ಪ್ರಯತ್ನಿಸಿ: ಟಿ.ಎಸ್.ನಾಗಾಭರಣ

**ಬೆಂಗಳೂರು, ಜೂ.18** ಸಿನಿಮಾಟೋಗ್ರಾಫ್ ಆ್ಯಕ್ಟ್ ಸಾಕಷ್ಟು ಬದಲಾವಣೆಗಳೊಂದಿಗೆ ಈಗ ಜಾರಿಗೊಂಡಿದೆ.ಶಾಸನಬದ್ಧವಾಗಿ ಜಾರಿಗೊಂಡಿರುವ ಎಲ್ಲ ಕಾನೂನುಗಳನ್ನು ಪಾಲಿಸುವುದರೊಂದಿಗೆ ಕನ್ನಡ ಚಿತ್ರರಂಗದ ಉತ್ತೇಜನಕ್ಕೆ ಬೇಕಾದ ಸದ್ಯದ ತುರ್ತು ಕ್ರಮಗಳೇನು ಎಂಬುದನ್ನು ಅವಲೋಕನ ಮಾಡಿಕೊಳ್ಳಬೇಕಾಗಿದೆ ಎಂದು ಸಿಬಿಎಫ್‌ಸಿ ಸದಸ್ಯ, ಹಿರಿಯ ಚಿತ್ರ ನಿರ್ದೇಶಕ ಟಿ.ಎಸ್.ನಾಗಾಭರಣ ಅಭಿಪ್ರಾಯ ಪಟ್ಟರು.

ಮಲ್ಲೇಶ್ವರಂನ ಎಸ್‌ಆರ್‌ವಿ ಥೇಟರಿನಲ್ಲಿ ಗುರುವಾರ ಆಯೋಜಿಸಿದ್ದ ಕನ್ನಡ ಚಿತ್ರೋದ್ಯಮಿಗಳೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ, ಸಾಮಾಜಿಕ ಜಾಲತಾಣಗಳು, ಮಾಧ್ಯಮಗಳ ಸವಾಲನ್ನು ಚಿತ್ರರಂಗ ಹೇಗೆ ಎದುರಿಸಬೇಕು.ಈ ಎಲ್ಲ ಸವಾಲುಗಳ ಮಧ್ಯೆ ಸಾರ್ವಜನಿಕವಾಗಿ ಪ್ರದರ್ಶನಗೊಳ್ಳುವ ಚಲನಚಿತ್ರಗಳಿಗೆ ಇರುವ ಜವಾಬ್ದಾರಿಗಳನ್ನು ಸೃಜನಶೀಲ ಸಿನಿಮಾ ನಿರ್ಮಾತೃಗಳು ಅರಿಯಬೇಕು. ಮೂಕ ಮತ್ತು ಕಿವುಡರಿಗೆ ಅನೇಕ ಸೌಕರ್ಯಗಳನ್ನು ಸಿನಿಮಾ ಹಾಗೂ ಸಿನೆಮಾ ಮಂದಿರಗಳು ಅಳವಡಿಸಿಕೊಳ್ಳಬೇಕು. ದೃಷ್ಟಿ ವಿಕಲಚೇತನರಿಗಾಗಿ ಬ್ರೈಲ್ ಬಳಕೆ ಬಗ್ಗೆ ನ್ಯಾಯಾಲಯದ



ನಿರ್ದೇಶನಗಳು ಬಂದಿವೆ.ಅಂತಹ ಸಮುದಾಯಗಳನ್ನು ಒಳಗೊಳ್ಳಲು ನಾವೆಲ್ಲ ಒಟ್ಟಾಗಿ ಹೆಜ್ಜೆ ಇರಿಸಬೇಕು ಎಂದರು.ಕೇಂದ್ರ ಚಲನಚಿತ್ರ ಪ್ರಮಾಣೀಕರಣ ಮಂಡಳಿ(ಸಿಬಿಎಫ್ಸಿ) ಅಧ್ಯಕ್ಷ ಶಶೀಶೇಖರ್ ವೇಂಪಾಟಿ ಅವರು ಮಾತನಾಡಿ,ಕನ್ನಡ ಚಿತ್ರರಂಗದ ಸಮಸ್ಯೆಗಳನ್ನು ಅರಿಯಲು ಇಂದು ಸಂವಾದ ಕಾರ್ಯಕ್ರಮ ಆಯೋಜಿಸಲಾಗಿದೆ.

ಚಿತ್ರೋದ್ಯಮದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ನಿರ್ಮಾಪಕರು, ನಿರ್ದೇಶಕರು, ಕಲಾವಿದರು, ತಂತ್ರಜ್ಞರಿಂದ ಅರ್ಥಪೂರ್ಣ ಸಲಹೆಗಳನ್ನು ಪಡೆದು ಉನ್ನತ ಮಟ್ಟದಲ್ಲಿ ಚರ್ಚಿಸಲಾಗುವುದು ಎಂದರು.

ಚಿತ್ರೋದ್ಯಮದ ಸಂಕಷ್ಟಗಳ ಕುರಿತು ನಿರ್ಮಾಪಕ ಕೃಷ್ಣೇಗೌಡ, ಹಿರಿಯ ನಟ ಎಂ.ಕೆ.ಸುಂದರರಾಜ್, ಚಿತ್ರ ನಿರ್ದೇಶಕ ಪಿ.ಶೇಷಾದ್ರಿ, ನಟ, ನಿರ್ಮಾಪಕ ಡಾಲಿ ಧನಂಜಯ, ತರುಣ್ ಸುಧೀರ್ , ಪ್ರಮೀಳಾ ಕುಲಕರ್ಣಿ, ವಿಶ್ವನಾಥ ಎನ್‌ಆರ್‌ಕೆ ಮತ್ತಿತರರು ಸಂವಾದದಲ್ಲಿ ಮಾತನಾಡಿ, ಗ್ರಾಮೀಣ ಪರಿಸರದ ಚಿತ್ರವೊಂದನ್ನು ಚಿತ್ರೀಕರಣ ಮಾಡುವಾಗ ದನ–ಕರುಗಳು, ಅವುಗಳ ಹಾಲು ಕರೆಯುವುದು ಸಹಜವಾಗಿ ದೃಶ್ಯಗಳಲ್ಲಿ ಬರುತ್ತದೆ.ಇಂತಹ ನೀತಿಗಳನ್ನು ಜಾರಿಗೊಳಿಸುವ ಮುನ್ನ ಸಂಬಂಧಿಸಿದ ಕ್ಷೇತ್ರದ ಜನರೊಂದಿಗೆ ಚರ್ಚಿಸಿ, ಸಲಹೆ ಪಡೆಯಬೇಕಾಗಿತ್ತು. ಪ್ರಾಣಿ, ಪಕ್ಷಿಗಳನ್ನು ಉದ್ದೇಶಪೂರ್ವಕವಾಗಿ ಬಳಸಿಕೊಳ್ಳದಿದ್ದರೆ ಕತೆಯಲ್ಲಿ ಮುಖ್ಯವಾಗಿ ಕಂಡು ಬರದಿದ್ದರೆ ಅಂತಹ ಚಿತ್ರಗಳಿಗೆ ಪ್ರಾಣಿ ಕಲ್ಯಾಣ ಮಂಡಳಿಯ ಅನುಮತಿ ಪಡೆಯುವುದರಿಂದ ವಿನಾಯಿತಿ ನೀಡಬೇಕು, ಎಲ್ಲ ಚಲನಚಿತ್ರಗಳಿಗೆ ಎಡಿಸಿಸಿ ಪಡೆಯುವುದನ್ನು ಕಡ್ಡಾಯಗೊಳಿಸಿರುವುದು ಚಿತ್ರ ನಿರ್ಮಾಪಕರಿಗೆ ಹೊರೆಯಾಗಿದೆ ಎಂದು ಹಲವರು ಒತ್ತಾಯಿಸಿದರು.

ಸಿನಿಮಾ ಪ್ರಮಾಣೀಕರಣಕ್ಕೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯು ಯಾವ ಹಂತದಲ್ಲಿ ತಿಳಿಯುವ ಸೌಕರ್ಯ ಒದಗಿಸಬೇಕು ಎಂಬ ಅಭಿಪ್ರಾಯಗಳನ್ನು ಸಿಬಿಎಫ್‌ಸಿ ಅಧ್ಯಕ್ಷರಿಗೆ ತಿಳಿಸಿದರು.

# ರಾಜ್ಯಸಭಾ ಟಿಕೆಟ್ ವಿಚಾರದಲ್ಲಿ ಬಿಜೆಪಿ ಮಾಜಿ ಸಂಸದೆ ಸುಮಲತಾಗೆ ಟೋಪಿ ಹಾಕಿದರು: ಶಾಸಕ ಎಚ್.ಡಿ.ರೇವಣ್ಣ

**ಬೆಂಗಳೂರು,ಜೂ.1** ರಾಜ್ಯಸಭಾ ಟಿಕೆಟ್ ವಿಚಾರದಲ್ಲಿ ಮಾಜಿ ಸಂಸದೆ ಸುಮಲತಾ ಅವರಿಗೆ ಬಿಜೆಪಿ ಮೋಸ ಮಾಡಿದೆ ಎಂದು ಎಚ್.ಡಿ. ರೇವಣ್ಣ ಪರೋಕ್ಷ ಹೇಳಿದ್ದಾರೆ.

ಪಾಪ ಮಂಡ್ಯ ಮೇಡಂಗೆ ಬಿಜೆಪಿ ಟೋಪಿ ಹಾಕಿದರು ಎಂದಿದ್ದಾರೆ. ಗುರುವಾರ ವಿಧಾನಸೌಧದಲ್ಲಿ ಕರ್ನಾಟಕ ವಿಧಾನ ಪರಿಷತ್ ಚುನಾವಣೆ ನಡೆಯಿತು. ಮತ ಚಲಾವಣೆಗೆ ಆಗಮಿಸಿದ್ದ ಎಚ್ಡಿ ರೇವಣ್ಣ ಅವರು ಮಾಧ್ಯಮಗಳಿಗೆ ರಾಜ್ಯಸಭೆ ಟಿಕೆಟ್ ವಿಚಾರದಲ್ಲಾದ ಗೊಂದಲದ ಬಗ್ಗೆಮಾತನಾಡಿದರು.ರಾಜ್ಯಸಭಾ ಬಿಜೆಪಿ ಟಿಕೆಟ್ ವಿಚಾರದಲ್ಲಿ ಮೊದಲಿಗೆ ದೇವೇಗೌಡರು, ಸದಾನಂದಗೌಡರ ಹೆಸರಿತ್ತು. ಆ ಮೇಲೆ ಮಂಡ್ಯ ಮೇಡಂ ಹೆಸರು ಹೇಳಿದರು. ಕೊನೆಗೆ ಅವರಿಗೆ ಟೂಪಿ ಹಾಕಿದ್ದಾರೆ. ಅವರಿಗೆ ಕೊಡಬೇಕಿತ್ತು. ನಮ್ಮ ಸಮಾಜದವರು ಇರುತ್ತಿದ್ದರು. ಈ ಹಿಂದಿನ ಎಲ್ಲಾ ಚುನಾವಣೆ ನೋಡಿದ್ದೇನೆ. ಮುಂದೇನು ಆಗುತ್ತದೆ ಕಾದು ನೋಡೋಣ ಎಂದರು.

ದೇವೇಗೌಡರು ಯಾವತ್ತೂ ಅಧಿಕಾರಕ್ಕಾಗಿ ಯಾರ ಮನೆ ಮುಂದೆ ಹೋಗಿಲ್ಲ. ಒಂದು ಪ್ರಧಾನ ಮಂತ್ರಿ ಹುದ್ದೆ ತ್ಯಾಗ ಮಾಡಿದ್ದಾರೆ. ಅಂದಿನ ಕಾಲಕ್ಕೆ ಒಂದು ಕ್ಷಮೆ ಕೇಳಿದ್ದರೆ 5 ವರ್ಷಪೂರ್ತಿ ಪ್ರಧಾನಿ ಹುದ್ದೆ ಮುಂದುವರೆಯುತ್ತಿತ್ತು. ವಾಜಪೇಯಿ ಅವರು ಕೂಡ ಬೆಂಬಲ ಕೊಡಲು ಸಿದ್ಧರಿದ್ದರು. ಆದರೆ, ದೇವೇಗೌಡರು ಬಿಟ್ಟು ಬಂದರು.



ಅಂತಹವರು, ರಾಜ್ಯಸಭಾ ಸ್ಥಾನಕ್ಕೆ ತಲೆ ಕೆಡಿಸಿ ಕೊಂಡಿಲ್ಲ ಎಂದು ಹೇಳಿದರು.

ಬಿಜೆಪಿಯಿಂದ ರಾಜ್ಯಸಭೆ ಚುನಾವಣೆಗೆ ಹಿರಿಯ ಮುಖಂಡ ಪ್ರೊ.ಎಂ.ನಾಗರಾಜ್ ಕಣಕ್ಕಿಳಿದಿದ್ದರು. ರಾಜ್ಯಸಭೆ ಟಿಕೆಟ್ ವಿಚಾರದಲ್ಲಿ ಕಾಂಗ್ರೆಸ್ ನಾಯಕರು ಅನಗತ್ಯವಾಗಿ ಮಾತನಾಡುತ್ತಿದ್ದಾರೆ. ಈ ಹಿಂದೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಬಗ್ಗೆ ಇಲ್ಲದ ಅನುಕಂಪ ಈಗ ಬಂದಿದೆ. ವಾಸ್ತವವಾಗಿ ರಾಜ್ಯಸಭೆ ಟಿಕೆಟ್‌ಗಾಗಿ ದೇವೇಗೌಡರು ಅರ್ಜಿಯನ್ನೇ ಹಾಕಿಲ್ಲ ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಈ ಹಿಂದೆ ಸ್ಪಷ್ಟಪಡಿಸಿದ್ದರು.

# ರಾಜ್ಯದೆಲ್ಲೆಡೆ 3ನೇ ವಾರವೂ ಮಳೆ ಕೊರತೆ ಶೇ.23ರಷ್ಟು ನೀರು ಸಂಗ್ರಹ

**ಬೆಂಗಳೂರು,ಜೂ.18** ಮೂರನೇ ವಾರದಲ್ಲೂ ಕರ್ನಾಟಕದ ಹೆಚ್ಚಿನ ಭಾಗದಲ್ಲಿ ಮಳೆ ಕೊರತೆ ಎದುರಾಗಿದ್ದು, ಜಲಾಶಯಗಳಿಗೆ ಒಳಹರಿವಿನ ಪ್ರಮಾಣ ಕಡಿಮೆಯಾಗಿದೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ ಪ್ರಮುಖ 14 ಜಲಾಶಯಗಳಲ್ಲಿ ನೀರಿನ ಮಟ್ಟ ಈ ಬಾರಿ ಕುಸಿದಿದ್ದು, ಶೇ.23ರಷ್ಟು ಮಾತ್ರ ನೀರು ಸಂಗ್ರಹವಾಗಿದೆ. ಹಿಂದಿನ ವರ್ಷ ಶೇ.42ರಷ್ಟು ನೀರು ಸಂಗ್ರಹವಿತ್ತು.

ಕರ್ನಾಟಕ ಜಲಸಂಪನ್ಮೂಲ ಇಲಾಖೆಯಲ್ಲಿ ಲಭ್ಯ ಇರುವ ಮಾಹಿತಿ ಪ್ರಕಾರ, ಉತ್ತರ ಕನ್ನಡ ಜಿಲ್ಲೆಯ ಸೂಪಾ ಜಲಾಶಯದಲ್ಲಿ ಅತಿ ಹೆಚ್ಚಿನ ನೀರು ಸಂಗ್ರಹವಿದೆ. ಕಡಿಮೆ ನೀರು ಇರುವುದು. ಕೊಡಗು ಜಿಲ್ಲೆಯ ಹಾರಂಗಿ ಜಲಾಶಯದಲ್ಲಿ ನೀರಿನ ಮಟ್ಟದ ಭಾರೀ ಕುಸಿದಿದೆ. ಆರು ಜಲಾಶಯಗಳಿಗೆ ಒಳಹರಿವು ಶೂನ್ಯ ಪ್ರಮಾಣಕ್ಕೆ ತಲುಪಿದೆ.14 ಜಲಾಶಯಗಳಲ್ಲಿ 896.64 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯವಿದೆ. ಸದ್ಯ 204.64 ಟಿಎಂಸಿ(ಶೇ 23) ನೀರು ಮಾತ್ರ ಸಂಗ್ರಹವಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 382.03 ಟಿಎಂಸಿ ನೀರು ಸಂಗ್ರಹವಿತ್ತು. ಸದ್ಯ ಎಲ್ಲಾ ಜಲಾಶಯಗಳಲ್ಲಿ 2199 ಕ್ಯುಸೆಕ್ ನೀರು ಒಳಹರಿವು ಇದ್ದು, 8264 ಕ್ಯುಸೆಕ್ ನೀರು ಹೊರ ಬಿಡಲಾಗುತ್ತಿದೆ.ಶಿವಮೊಗ್ಗದ ಲಿಂಗನಮಕ್ಕಿ ಜಲಾಶಯದಲ್ಲಿ ಸದ್ಯ 16.38 ಟಿಸಿಎಂ( ಶೇ 11) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 40.99 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 151.75 ಟಿಎಂಸಿ. ಸದ್ಯ ಜಲಾಶಯಕ್ಕೆ ಒಳಹರಿವು ಇಲ್ಲ. 3876 ಕ್ಯುಸೆಕ್ ನೀರು ಹೊರ ಹರಿಸಲಾಗುತ್ತಿದೆ.

ಉತ್ತರ ಕನ್ನಡ ಜಿಲ್ಲೆಯ ಸೂಪಾ ಜಲಾಶಯದಲ್ಲಿ ಸದ್ಯ 31.03 ಟಿಸಿಎಂ( ಶೇ 21) ನೀರು ಲಭ್ಯವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 40.66 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 145.33 ಟಿಎಂಸಿ. ಈಗ ಜಲಾಶಯದ ನೀರಿನ ಒಳ ಹರಿವು 297 ಕ್ಯೂಸೆಕ್ . 3876 ಕ್ಯುಸೆಕ್ ನೀರು ಹೊರ ಬಿಡಲಾಗುತ್ತಿದೆ.ಶಿವಮೊಗ್ಗದ ಜಿಲ್ಲೆ ವರಾಹಿ ಜಲಾಶಯದಲ್ಲಿ ಸದ್ಯ 5.41 ಟಿಸಿಎಂ( ಶೇ 9,84) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 9.84 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 31.13 ಟಿಎಂಸಿ. ಸದ್ಯ ಜಲಾಶಯಕ್ಕೆ ನೀರಿನ ಒಳ ಹರಿವು ಇಲ್ಲ. 515 ಕ್ಯುಸೆಕ್ ನೀರು ಹೊರ ಹರಿಸಲಾಗುತ್ತಿದೆ.ಕೊಡಗು ಜಿಲ್ಲೆಯ ಹಾರಂಗಿ ಜಲಾಶಯದಲ್ಲಿ



ಸದ್ಯ 3.19 ಟಿಸಿಎಂ (ಶೇ 36) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 5,74 ಟಿಎಂಸಿ ನೀರು ಲಭ್ಯವಿತ್ತು. ಜಲಾಶಯದ ಗರಿಷ್ಠ ಮಟ್ಟ 8.50 ಟಿಎಂಸಿ. ಈಗ ಜಲಾಶಯಕ್ಕೆ ನೀರಿನ ಒಳ ಹರಿವು 273 ಕ್ಯುಸೆಕ್ ಇದೆ. 180 ಕ್ಯುಸೆಕ್ ನೀರು ಹೊರ ಹರಿಸಲಾಗುತ್ತಿದೆ.

ಹಾಸನ ಜಿಲ್ಲೆ ಹೇಮಾವತಿ ಜಲಾಶಯದಲ್ಲಿ ಸದ್ಯ 14.76 ಟಿಸಿಎಂ( ಶೇ 40) ನೀರು ಲಭ್ಯವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 27.71 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 37.10 ಟಿಎಂಸಿ. ಈಗ ಜಲಾಶಯದ ನೀರಿನ ಒಳ ಹರಿವು 886 ಕ್ಯುಸೆಕ್. 300 ಕ್ಯುಸೆಕ್ ನೀರು ಹೊರ ಬಿಡಲಾಗುತ್ತಿದೆ.ಮಂಡ್ಯ ಜಿಲ್ಲೆಯ ಜಲಾಶಯದಲ್ಲಿ ಈಗ 11.42 ಟಿಸಿಎಂ( ಶೇ 23) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 35.12 ಟಿಎಂಸಿ ನೀರು ಲಭ್ಯವಿತ್ತು.

ಜಲಾಶಯದ ಗರಿಷ್ಠ ಮಟ್ಟ 49.45 ಟಿಎಂಸಿ. ಈಗ ಜಲಾಶಯಕ್ಕೆ ನೀರಿನ ಒಳ ಹರಿವು 790 ಕ್ಯುಸೆಕ್ ಇದೆ. 437 ಕ್ಯುಸೆಕ್ ನೀರು ಹೊರಹರಿಸಲಾಗುತ್ತಿದೆ.ಮೈಸೂರು ಜಿಲ್ಲೆಯ ಕಬಿನಿ ಜಲಾಶಯದಲ್ಲಿ ಸದ್ಯ 5 ಟಿಸಿಎಂ( ಶೇ 26) ನೀರು ಲಭ್ಯವಿದೆ.

ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 17.35 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 19.52 ಟಿಎಂಸಿ. ಸದ್ಯ ಜಲಾಶಯಕ್ಕೆ ನೀರಿನ ಒಳ ಹರಿವು 433 ಕ್ಯುಸೆಕ್ ಇದೆ. ಹೊರ ಹರಿವು ಸ್ಥಗಿತಗೊಳಿಸಲಾಗಿದೆ.

'ಕೇರಳದ ವಯನಾಡು, ಕೊಡಗು, ಚಿಕ್ಕಮಗಳೂರು ಭಾಗದಲ್ಲಿ ಮಳೆಯಾದರೆ ಹಳೇ ಮೈಸೂರು, ಮಲೆನಾಡು ಭಾಗದ ಜಲಾಶಯಗಳಿಗೆ ನೀರು ಹರಿದು ಬರಲಿದೆ. ಅಲ್ಲದೇ ತುಂಗಭದ್ರಾ ಜಲಾಶಯಗಳಿಗೆ ಮಲೆನಾಡು ಮಳೆಯೇ ಆಸರೆ, ಈ ಬಾರಿ ಮಳೆ ಪ್ರಮಾಣ ತಗ್ಗಿ ಜಲಾಶಯ ಕಳೆಗುಂದಿವೆ' ಎಂದು ಜಲಸಂಪನ್ಮೂಲ ಇಲಾಖೆ ಇಂಜಿನಿಯರ್ ಒಬ್ಬರು ತಿಳಿಸಿದರು. ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಜಲಾಶಯದಲ್ಲಿ ಸದ್ಯ 24.62 ಟಿಸಿಎಂ( ಶೇ.34) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 31.38 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 71.54 ಟಿಎಂಸಿ. ಸದ್ಯ ಜಲಾಶಯಕ್ಕೆ ನೀರಿನ ಒಳಹರಿವು 211 ಕ್ಯುಸೆಕ್ ಇದೆ. ಅಷ್ಟೇ ಪ್ರಮಾಣದಲ್ಲಿ ನೀರು ಹೊರ ಹರಿಸಲಾಗುತ್ತಿದೆ.

ವಿಜಯನಗರ ಜಿಲ್ಲೆಯ ತುಂಗಭದ್ರಾ ಜಲಾಶಯದಲ್ಲಿ ಸದ್ಯ 9.88 ಟಿಸಿಎಂ( ಶೇ 9) ನೀರು ಮಾತ್ರ ಲಭ್ಯವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 30.49 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 105.79 ಟಿಎಂಸಿ. ಈಗ ಜಲಾಶಯಕ್ಕೆ ಒಳಹರಿವು 283 ಕ್ಯುಸೆಕ್ ಇದೆ. 434 ಕ್ಯುಸೆಕ್ ನೀರು ಹೊರ ಹರಿಸಲಾಗುತ್ತಿದೆ.

ಬೆಳಗಾವಿ ಜಿಲ್ಲೆಯ ಘಟಪ್ರಭಾ ಜಲಾಶಯದಲ್ಲಿ ಈಗ 7.32 ಟಿಸಿಎಂ( ಶೇ 14) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನದಂದು ಜಲಾಶಯದಲ್ಲಿ 13.78 ಟಿಎಂಸಿ ನೀರು ಲಭ್ಯವಿತ್ತು. ಜಲಾಶಯದ ಗರಿಷ್ಠ ಮಟ್ಟ 51 ಟಿಎಂಸಿ. ಸದ್ಯ ಜಲಾಶಯಕ್ಕೆ ನೀರಿನ ಒಳ ಹರಿವು ಇಲ್ಲ. 104 ಕ್ಯುಸೆಕ್ ನೀರು ಹೊರ ಬಿಡಲಾಗುತ್ತಿದೆ. ಬೆಳಗಾವಿ ಜಿಲ್ಲೆಯ ಮಲಪ್ರಭಾ ಜಲಾಶಯದಲ್ಲಿ ಸದ್ಯ 8.86 ಟಿಸಿಎಂ(ಶೇ 23) ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 11.53 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 37.73 ಟಿಎಂಸಿ.

ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 25.66 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 33.31 ಟಿಎಂಸಿ. ಸದ್ಯ ಜಲಾಶಯಕ್ಕೆ ಒಳಹರಿವು ಶೂನ್ಯ. 404 ಕ್ಯುಸೆಕ್ ನೀರು ಹೊರಬಿಡಲಾಗುತ್ತಿದೆ.ಚಿತ್ರದುರ್ಗ ವಾಣಿವಿಲಾಸ ಸಾಗರ ಜಲಾಶಯದಲ್ಲಿ ಸದ್ಯ 24.95 ಟಿಸಿಎಂ( ಶೇ 79) ನೀರು ಸಂಗ್ರಹವಿದೆ.

ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 25.28 ಟಿಎಂಸಿ ನೀರು ಸಂಗ್ರಹವಿತ್ತು. ಜಲಾಶಯದ ಗರಿಷ್ಠ ಮಟ್ಟ 39.42 ಟಿಎಂಸಿ. ಸದ್ಯ ಜಲಾಶಯಕ್ಕೆ ನೀರಿನ ಒಳಹರಿವು, ಹೊರಹರಿವು ಎರಡೂ ಇಲ್ಲ.

# ಸಹಕೈದಿ ರಶ್ಮಿ ವಿರುದ್ಧ ಪವಿತ್ರಗೌಡ ಪೊಲೀಸರಿಗೆ ದೂರು

**ಬೆಂಗಳೂರು,ಜೂ.18** ನಟ ದರ್ಶನ್ ಹಾಗೂ ಗ್ಯಾಂಗ್‌ನಿಂದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಜೈಲು ಪಾಲಾಗಿರುವ ಎ1 ಆರೋಪಿ ಪವಿತ್ರಾ ಗೌಡಾಗೆ ಪರಪ್ಪನ ಅಗ್ರಹಾರ ಜೈಲಿನಲ್ಲಿ ರಾಜಾತಿಥ್ಯ ನೀಡಲಾಗುತ್ತಿದೆ ಎಂಬ ಆರೋಪ ಕೇಳಿಬಂದಿತ್ತು.

ಈ ಹಿಂದೆ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದ ಸಂಧ್ಯಾ ನಾಗರಾಜ್ ಎಂಬುವವರು ಪವಿತ್ರಾ ಗೌಡ ಹಾಗೂ ಆಕೆಯ ಜೊತೆಗಿರುವ ಸಹಕೈದಿ ರಶ್ಮಿ ಎಂಬುವವರ ವಿರುದ್ಧ ರಾಜಾತಿಥ್ಯ ಆರೋಪ ಮಾಡಿದ್ದರು.

ಸಂಧ್ಯಾ ನಾಗರಾಜ್ ಜೈಲಿನಿಂದ ಬಿಡುಗಡೆಯಾಗಿ ಬಂದ ಬಳಿಕ ಮಾತನಾಡಿ, ಪವಿತ್ರಾ ಗೌಡಗೆ ಜೈಲಿನಲ್ಲಿ ಎಲ್ಲಾ ರೀತಿಯ ಸೌಲಭ್ಯಗಳು ಸಿಗುತ್ತಿವೆ ಎಂದಿದ್ದರು. ತನ್ನ ವಿರುದ್ಧ ಆರೋಪ ಮಾಡಿರುವ ವಿಚಾರ ತಿಳಿದ ಪವಿತ್ರಾ ಗೌಡ, ಜೈಲಿನಿಂದಲೇ ಪೊಲೀಸರಿಗೆ ದೂರು ನೀಡಿದ್ದಾಳೆ.



ಸಂಧ್ಯಾ ನಾಗರಾಜ್ ವಿರುದ್ಧ ಪವಿತ್ರಾ ಗೌಡ ಹಾಗೂ ರಶ್ಮಿ ಇಬ್ಬರೂ ಸೇರಿ ಪರಪ್ಪನ ಅಗ್ರಹಾರ ಠಾಣೆಯಲ್ಲಿ ದೂರು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಸಂಧ್ಯಾ ನಾಗರಾಜ್‌ಗೆ ಸಂಕಷ್ಟ ಎದುರಾಗಲಿದೆ.

# ಉದ್ಯಮಿ ಅಪಹರಿಸಿ 1.9 ಕೋಟಿ ರೂ. ದರೋಡೆ

**ಬೆಂಗಳೂರು,ಜೂ.18** ಉದ್ಯಮಿಯೊಬ್ಬರನ್ನು ಅಪಹರಿಸಿ 1.9 ಕೋಟಿ ಹಣ ದರೋಡೆ ಮಾಡಿ ಪರಾರಿಯಾಗಿರುವ ಏಳು ಮಂದಿ ಆರೋಪಿಗಳಿಗಾಗಿ ಮಾದನಾಯಕನಹಳ್ಳಿ ಠಾಣೆ ಪೊಲೀಸರು ಶೋಧ ನಡೆಸುತ್ತಿದ್ದಾರೆ.

ಪರಿಚಯಸ್ಥರೇ ಈ ದರೋಡೆ ಮಾಡಿರುವ ಶಂಕೆ ವ್ಯಕ್ತವಾಗಿದ್ದು, ಈ ಹಿನ್ನಲೆಯಲ್ಲಿ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಆರೋಪಿಗಳ ಬಂಧನಕ್ಕೆ ಎರಡು ವಿಶೇಷ ತಂಡಗಳನ್ನು ರಚಿಸಲಾಗಿದ್ದು, ಈ ತಂಡಗಳು ಈಗಾಗಲೇ ಕಾರ್ಯಾಚರಣೆ ಕೈಗೊಂಡಿವೆ.

ಮುನಿಸ್ವಾಮಿರೆಡ್ಡಿ ಲೇಔಟ್ ನಿವಾಸಿಯಾಗಿರುವ ಉದ್ಯಮಿ ಶಿವಶಂಕರ್ ಅವರು ತಮ್ಮ ಸ್ನೇಹಿತ ಚೇತನ್ ಜೊತೆ ಕಾರಿನಲ್ಲಿ ಹೋಗುತ್ತಿದ್ದಾಗ ಮಾರ್ಗಮಧ್ಯೆ ಕುದುರೆಗೆರೆ ಗಣೇಶ ದೇವಸ್ಥಾನದ ಬಳಿ ಕಾರನ್ನು ಅಡ್ಡಗಟ್ಟಿದ ದರೋಡೆಕೋರರು ಏಕಾಏಕಿ ಅವರ ಮೇಲೆ ಬಿಯರ್ ಬಾಟಲಿ ಹಾಗೂ ಚಾಕುವಿನಿಂದ ಹಲ್ಲೆ ನಡೆಸಿ ಅವರಿಬರನ್ನು ಅಪಹರಿಸಿದ್ದಾರೆ. ಕಾರಿನಲ್ಲಿದ್ದ 74 ಲಕ್ಷ ಹಣ ದೋಚಿದಲ್ಲದೇ ಅವರ ಮನೆಯಲ್ಲಿಟ್ಟಿದ್ದ 35 ಲಕ್ಷ ಹಣವನ್ನೂ ತರಿಸಿಕೊಂಡು ಒಟ್ಟು 1.9 ಕೋಟಿ ಹಣದೊಂದಿಗೆ ದರೋಡೆಕೋರರು ಪರಾರಿಯಾಗಿದ್ದಾರೆ. ಈ ಸಂಬಂಧ ಶಿವಶಂಕರ್ ವಿರುದ್ಧವೇ ಪ್ರಕರಣ ದಾಖಲಾಗಿತ್ತು. ಇದೀಗ ಹಣ ದರೋಡೆ ದೂರಿನ ಬಗ್ಗೆಯೂ ಪೊಲೀಸರು ಪರಿಶೀಲಿಸುತ್ತಿದ್ದಾರೆ.



ಹುಬ್ಬಳ್ಳಿ–ಧಾರವಾಡ ಪೂರ್ವ ಶಾಸಕ ಪ್ರಸಾದ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ಅವರ ಬೆಂಬಲಿಗರು ಹುಬ್ಬಳ್ಳಿಯಲ್ಲಿ ಗುರುವಾರ ಮೆರವಣಿಗೆ ನಡೆಸಿದರು.

# ಆರ್‌ಎಸ್‌ಎಸ್ ನೋಂದಣಿ ಎಲುಬಿಲ್ಲದ ನಾಲಿಗೆಯ ಉಡಾಫೆ ಪ್ರಶ್ನೆ: ಸಿ.ಟಿ.ರವಿ

**ಕಲಬುರಗಿ, ಜೂ. 18:** ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಅಧಿಕೃತ ನೊಂದಣಿ ಕುರಿತು ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆಯವರು ಎಲುಬಿಲ್ಲದ ನಾಲಿಗೆಯಿಂದ ಉಡಾಫೆ ಪ್ರಶ್ನೆ ಮಾಡುತ್ತಿದ್ದಾರೆ. ಸ್ವಾತಮತ್ರ್ಯಾ ನಂತರ 70 ವರ್ಷಗಳ ವರೆಗೆ ಅವರದೇ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿತ್ತು. ಅಂದು ನೆಹರು, ಇಂದಿರಾ, ರಾಜೀವ ಯರೂ ಈ ಪ್ರಶ್ನೆ ಕೇಳಿರಲಿಲ್ಲ. ಯಾಕೆಂದರೆ ಅವರಿಗೆ ವಿಷಯ ಗೊತ್ತಿತ್ತು. ಆದರೆ, ಇವರಿಗೆ ಗ್ರಾಮೀಣಾಭಿವೃದ್ಧಿ ಮತ್ತುಈಗ ಗೃಹ ಖಾತೆ ಹುದ್ದೆಗಳನ್ನು ನೀಡಿದ್ದರೂ ಖಾತೆಯ ಕೆಲಸಗಳನ್ನು ಬಿಟ್ಟು ಉಡಾಫೆ ಪ್ರಶ್ನೆಗಳನ್ನು ಕೇಳುತ್ತ ಕಾಲಹರಣ ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯ ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಸಿ.ಟಿ. ರವಿ ಕಿಡಿಕಾರಿದರು.

ಕೇಂದ್ರ ಸರ್ಕಾರದ ಹೆಮ್ಮೆಯ ಭಾರತ್ ಮಾಲಾ ರಸ್ತೆ ಯೋಜನೆಯನ್ನು, ಜಿಲ್ಲೆಯ ಜೇವರ್ಗಿ ಭಾಗದಲ್ಲಿ ಹಾದು ಹೋಗುವ ರಸ್ತೆ ಕಾಮಗಾರಿಯನ್ನು ವೀಕ್ಷಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಗೃಹ ಸಚಿವರಾಗಿ ಪ್ರಿಯಾಂಕ್ ಖರ್ಗೆ, ಗಂಭೀರ ವಿಷಯವನ್ನು ಇಂತಹ ಪ್ರಶ್ನೆಯಾಗಿ ಕೇಳುತ್ತಿದ್ದಾರೆ. ಆರ್‌ಎಸ್‌ಎಸ್‌ನ ಯಾವುದೇ ಚಟುವಟಿಕೆಗಳು ರಹಸ್ಯವಾಗಿ ನಡೆಯುವದಿಲ್ಲ. ಎಲ್ಲವೂ ಬಯಲಲ್ಲಿ ನಡೆಯುತ್ತವೆ. ಸಂಘವು ಯಾರಿಂದಲೂ ದೇಣಿಗೆ ಸರ್ಕಾರದ ಅನುದಾನ ಪಡೆಯುವದಿಲ್ಲ. ಅನುದಾನ ಪಡೆಯಬೇಕಾದರೆ ಲೆಕ್ಕಪತ್ರ ಕೊಡಬೇಕಾಗುತ್ತದೆ. ಅದಕ್ಕಾಗಿ ನೋಂದಣಿಯನ್ನೂ ಮಾಡಿಸಿ ಅನುದಾನ ಪಡೆಯಬೇಕಾಗುತ್ತದೆ. ಇದ್ಯಾವುದೂ ಇಲ್ಲವೆಂದು ತಿಳಿದಿದರೂ ಅನಗತ್ಯವಾಗಿ ಕಾಲಹರಣ ಮಾಡುವ ಮತ್ತು ಕಾಂಗ್ರೆಸ್ ಹೈಕಮಾಂಡ್ ಮುಖಂಡರಿಗೆ ಖುಷಿಪಡಿಸಲು ಮೇಲಿಂದ ಮೇಲೆ ಇಂಥ ಪ್ರಸ್ನೆಗಳನ್ನು ಕೇಳುವ ಮೂಲಕ ತಾವು ಬಹಳ ದೊಡ್ಡ ಮನುಷ್ಯ ಎಂದು



ತೋರಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ. ವಾಸ್ತವದಲ್ಲಿ ಇವರ ಇಂಥ ಪ್ರಶ್ನೆಗಳಿಂದ ರಾಜ್ಯದ ಜನರ ಮುಂದೆ ತೀರ ಸಣ್ಣವರಾಗಿ ಕಾಣುತ್ತಿದ್ದಾರೆ ಎಂಬುದು ಅವರಿಗೆ ಅರ್ಥವಾಗುತ್ತಿಲ್ಲ. ಆದ್ದರಿಂದಲೇ ರಾಜ್ಯದ ಯಾವುದೇ ಸಚಿವರು ಇವರನ್ನು ಹಿಂದೆ ಮತ್ತು ಇಂದು ಯಾರೊಬ್ಬರೂ ಬೆಂಬಲಿಸದಿರುವದೇ ಇವರ ಪ್ರಶ್ನೆಗಳು ಅನಗತ್ಯ ಎಂಬುದು ಸ್ಪಷ್ಟವಾಗುತ್ತದೆ. ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಉಡಾಫೆಯಾಗಿ ಉತ್ತರ ಕೊಡುತ್ತಿದ್ದಾರೆ ಎಂಬ ಪ್ರಿಯಾಂಕ್ ಖರ್ಗೆಯವರಿಗೆ ತಿರುಗೇಟು ನೀಡಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಸರ್ಕಾರದಿಂದ ಯಾವುದೇ ಅನುದಾನವನ್ನು ಮತ್ತು ಜಮೀನು ಪಡೆದಿಲ್ಲ. ಸ್ವಯಂ ಸೇವಕರಿಂದ ಕಾರ್ಯನಿರ್ವಹಿಸುತ್ತಿದೆ. ಹಾಗಾಗಿ ಅಧಿಕೃತ ನೊಂದಣಿ ಮಾಡುವ ಅಗತ್ಯವಿಲ್ಲ. ಎಲ್ಲ ಸಂಘಟನೆಗಳು, ಸಂಸ್ಥೆಗಳು ಅಧಿಕೃತವಾಗಿ ನೊಂದಣಿ ಮಾಡಿಕೊಳ್ಳಬೇಕು ಎಂದು ಸಂವಿಧಾನದಲ್ಲಿ ಇದ್ದರೆ ಆ ಕುರಿತು ಸಂವಿಧಾನದ ಬಗ್ಗೆ ಮಾತನಾಡುವ ಸಚಿವ ಪ್ರಿಯಾಂಕ್ ಖರ್ಗೆ ಅವರೇ ತೋರಿಸಲಿ ಎಂದು ಅವರು ಸವಾಲು ಹಾಕಿದರು.

ರಾಷ್ಟ್ರೀಯ ಸ್ವಯಂಸೇವಕ ಸಂಘದ ಪ್ರಧಾನ ಕಚೇರಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆಯವರು ಹೋಗುವ ಅಗತ್ಯವಿಲ್ಲ. ತಮ್ಮ ಹತ್ತಿರ ಇರುವ ಆರ್‌ಎಸ್‌ಎಸ್ ಶಾಖೆಗೆ ಹೋದರೆ ಎಲ್ಲ ಮಾಹಿತಿಯೂ ಗೊತ್ತಾಗುತ್ತದೆ. ಆ ಕುರಿತು ಪರಿವರ್ತನೆ ಆಗಬಹುದು ಎಂದು ತಿಳಿಸಿದ ಅವರು, ಭಾರತದ ಮೊದಲ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರೂ ಅವರು ತಮ್ಮ ಜೀವನದ ಕೊನೆಯ ಅವಧಿಯಲ್ಲಿ ಪರೇಡ್ ವಂದನೆಗೆ ರಾಷ್ಟ್ರೀಯ ಸ್ವಯಂ ಸೇವಕರನ್ನು ಕರೆಸಿದ್ದರು ಎಂಬುದನ್ನು ನೆನಪಿಸಿದರು.

ಆರ್‌ಎಸ್‌ಎಸ್ ನಿಷೇಧಿಸಲಾಗಿತ್ತು, ಕಾಲ ಹಿಡಿದು ಬೇಡಿಕೊಂಡರು ಎಂಬ ಪ್ರಿಯಾಂಕ್ ಖರ್ಗೆಯವರ ಟೀಕೆಗೆ ತಿರುಗೇಟು ನೀಡಿದ ಸಿ.ಟಿ.ರವಿ ಅವರು, 1975ರಲ್ಲಿ ಶ್ರೀಮತಿ ಇಂದಿರಾ ಗಾಂಧಿ ಅವರು ತುರ್ತು ಪರಿಸ್ಥಿತಿ ಹೇರಿದರು. ವಿರೋಧ ಪಕ್ಷದವರನ್ನು ಜೈಲಿನಲ್ಲಿ ಇಟ್ಟರು. ಮಾಧ್ಯಮಗಳ ಮೇಲೆ ನಿಬಂಧನೆ ಹೇರಿದರು. ಸಂಪಾದಕೀಯ ಬರೆಯುವುದಕ್ಕೆ ಪತ್ರಿಕೆಗಳ ಮೇಲೂ ನಿಷೇಧ ಹೇರಿದ್ದರು ಎಂದು ದೂರಿದ ಅವರು, ಇದೇ ಸಂದರ್ಭದಲ್ಲಿ ಸಂಘದ ಮೇಲೂನಿಷೇಧ ಹೇರಿ, ಸಂಘದ ಅನೇಕ ಕಾರ್ಯಕರ್ತರನ್ನು ಜೈಲಿಗೆ ಅಟ್ಟಿದರು. ಅನಮತರ ಏನಾಯ್ತು ಎಂಬುದು ಪ್ರಿಯಾಂಕ್ ಖರ್ಗೆ ಅವರ ತಂದೆಯಿಂದ ಕೇಳಿ ತಿಳಿದುಕೊಳ್ಳಲಿ ಎಂದರು.

ರಾಷ್ಟ್ರೀಯ ಸ್ವಯಂಸೇವಕ ಸಂಘದ ಲೆಕ್ಕಪತ್ರ ಗಳನ್ನು ಕೊಡಬೇಕು ಎಂಬ ಸಚಿವ ಖರ್ಗೆಯವರ ಹೇಳಿಕೆಗೆ ವಿರೋಧ ವ್ಯಕ್ತಪಡಿಸಿದ ಅವರು, ಸರ್ಕಾರದಿಂದ ಯಾವುದೇ ಅನುದಾನ ಪಡೆಯದ ಆರ್‌ಎಸ್‌ಎಸ್ ಲೆಕ್ಕ ಪತ್ರ ತೋರಿಸುವ ಅಗತ್ಯವಿಲ್ಲ. ನಿಮ್ಮ ಬುದ್ಧ ವಿಹಾರವು ಸರ್ಕಾರದಿಂದ ಅನುದಾನ ಮತ್ತು ಪಡೆದಿದೆ. ಹಾಗಾಗಿ ಬುದ್ಧ ಮಂದಿರದ ಆಡಳಿತ ಮಂಡಳಿ, ಅದರ ಲೆಕ್ಕಪತ್ರವನ್ನು ಕೇಳುವ ಹಕ್ಕು ಎಲ್ಲರಿಗೂ ಇದೆ ಎಂದು ಸಚಿವ ಖರ್ಗೆ ವಿರುದ್ಧ ಸಿ.ಟಿ. ರವಿ ಅವರು ಹರಿಹಾಯ್ದರು.

ಆರ್‌ಎಸ್‌ಎಸ್ ಭಾರತಕ್ಕೆ ಸ್ವಾತಂತ್ರ್ಯ ಬರುವ ಮೊದಲೇ 1925ರಲ್ಲಿ ಸ್ಥಾಪನೆಯಾಗಿತ್ತು. ಇತ್ತೀಚೆಗೆ ಶತಮಾನೋತ್ಸವ ಆಚರಿಸಿದೆ. ನೂರು ವರ್ಷಗಳ ಅವಧಿಯಲ್ಲಿ ಅದು ಸರ್ಕಾರದಿಂದ ಯಾವುದೇ ರೀತಿಯ ಪಂದೇ ಒಂದು ಪೈಸೆ ಅನುದಾನ ಪಡೆದಿಲ್ಲ ಅಥವಾ ಹಣ ಕೇಳಿಯೂ ಇಲ್ಲ. ಅಲ್ಲದೇ ಆರ್‌ಎಸ್‌ಎಸ್ ಪ್ರೇರಿತ ಸಂಸ್ಥೆಗಳು ಬಿಜೆಪಿ, ವಿಶ್ವ ಹಿಂದೂ ಪರಿಷತ್, ರಾಷ್ಟ್ರೋತ್ಥಾನ ಪರಿಷತ್ ಮುಂತಾದವರು ಅಧಿಕೃತ ನೊಂದಣಿಯಾಗಿವೆ ಎಂದು ಹೇಳಿದ ಅವರು, ಆರ್‌ಎಸ್‌ಎಸ್ ಪ್ರಮುಖ ಮೋಹನ್ ಭಾಗವತ್ ಅವರಿಗೆ ಝಡ್ ಪ್ಲಸ್ ಭದ್ರತೆಯನ್ನು ಒದಗಿಸಿರುವ ಕುರಿತು ಸಚಿವ ಖರ್ಗೆ ಕೇಳಿದ ಪ್ರಶ್ನೆ ಅತ್ಯಂತ ಬಾಲಿಶತನದಿಂದ ಕೂಡಿದೆ. ಯಾವ ವ್ಯಕ್ತಿಗೆ ಜೀವ ಬೆದರಿಕೆ ಇರುತ್ತದೆಯೋ ಅವರಿಗೆ ರಕ್ಷಣೆ ಕೊಡುವುದು ಸರ್ಕಾರದ ಆದ್ಯ ಕರ್ತವ್ಯ. ನನಗೆ ಜೀವ ಬೆದರಿಕೆ ಇದೆಯೆಂಬ ಕಾರಣಕ್ಕೆ ನನಗೆ ವೈ ಪ್ಲಸ್ ಭದ್ರತೆ ಒದಗಿಸಲಾಗಿದೆ. ಮೋಹನ್ ಭಾಗವತ್ ಅವರು ಭದ್ರತೆ ಕೊಡಿ ಎಂದು ಸರ್ಕಾರವನ್ನು ಕೇಳಿಲ್ಲ. ಬದಲಾಗಿ ಅವರಿಗೆ ಭಯೋತ್ಪಾದಕ ಸಂಘಟನೆಗಳಿಂದ ಜೀವ ಬೆದರಿಕೆ ಇರುವುದೆಂಬ ಕಾರಣಕ್ಕೆ ಸರ್ಕಾರವೇ ಅವರಿಗೆ ಝಡ್ ಪ್ಲಸ್ ಭದ್ರತೆಯನ್ನು ಒದಗಿಸಿದೆ. ಆ ಕುರಿತು ಕನಿಷ್ಠ ರಾಜ್ಯದ ಗೃಹ ಸಚಿವರಿಗೆ ತಿಳುವಳಿಕೆ ಇಲ್ಲ ಎಂದು ಅವರು ಮೂದಲಿಸಿದರು.

# ಕನ್ನಡನಾಡಿಗೆ ಲಲಿತ ಕಲೆಗಳ ಕೊಡುಗೆ ಅನನ್ಯ: ಬಸವರಾಜ ದೇಶಮುಖ



**ಕಲಬುರಗಿ, ಜೂ. 18:** ಕನ್ನಡ ನಾಡಿನ ಸಂಸ್ಕೃತಿ ಮತ್ತು ಕಲೆಯನ್ನು ಪ್ರೋತ್ಸಾಹಿಸಲು ಕರ್ನಾಟಕ ಸರ್ಕಾರವು ಅನೇಕ ರೀತಿಯ ಸಹಕಾರವನ್ನು ಸಾಂಸ್ಕೃತಿಕ ಸಂಘ ಸಂಸ್ಥೆಗಳಿಗೆ ನೀಡಿ ಪ್ರೋತ್ಸಾಹಿಸುತ್ತಿದೆ ಹಾಗೂ ಶಿವಶರಣರು ಬರೆದಂತಹ ಅನೇಕ ವಚನ ತತ್ವಪದಗಳಿಂದ ನಮ್ಮ ಸಮಾಜದಲ್ಲಿ ಮನಸ್ಸಿಗೆ ಶಾಂತಿ ಸಮಾಧಾನ ತಂದಿದೆ ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಅಭಿಪ್ರಾಯಪಟ್ಟರು.

ಕಲಬುರಗಿಯಲ್ಲಿ ಗಡಿನಾಡ ಸಂಗೀತ ಸೇವಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಲಲಿತ ಕಲೆಗಳ ಸಂಗಮ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಕರ್ನಾಟಕ ರಾಜ್ಯ ಸಹಕಾರಿ ಸಕ್ಕರೆ ಕಾರ್ಖಾನೆ ಮಹಾಮಂಡಳಿ ನಿರ್ದೇಶಕ ಧರ್ಮರಾಜ ಸಾಹು ಭೂಸನೂರ ಮಾತನಾಡಿ,ಲಲಿತ ಕಲೆಗಳಲ್ಲಿ ಬರುವಂತಹ ಶಿಲ್ಪ, ಚಿತ್ರಕಲೆ, ಸಾಹಿತ್ಯ, ಸಂಗೀತ ಕಲೆಗಳು ನಮ್ಮ ಭಾರತೀಯ ಪರಂಪರೆಯನ್ನು ಎತ್ತಿ ಹಿಡಿದಿವೆ. ಮಾನವನ ಜೀವನದಲ್ಲಿ ಹಾಗೂ ಸಕಲ ಜೀವಿಗಳಲ್ಲಿ ಕಲೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

## ನಿರೀಕ್ಷಣಾ ಜಾಮೀನು ರದ್ದತಿಗೆ ಹರಿಹರ ಪೊಲೀಸರ ಮನವಿ

# ಪೋಕ್ಸೋ ಪ್ರಕರಣ: ವಚನಾನಂದ ಸ್ವಾಮೀಜಿ ಜಾಮೀನು ರದ್ದುಮಾಡಿ

**ದಾವಣಗೆರೆ, ಜೂ.18:** ಹರಿಹರದ ವೀರಶೈವ ಪಂಚಮಸಾಲಿ ಗುರುಪೀಠದ ವಚನಾನಂದ ಸ್ವಾಮೀಜಿಗೆ ಪೋಕ್ಸೊ ಪ್ರಕರಣದಲ್ಲಿ ನೀಡಿರುವ ನಿರೀಕ್ಷಣಾ ಜಾಮೀನು ರದ್ದುಗೊಳಿಸುವಂತೆ ಕೋರಿ ಪೊಲೀಸರು ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದ ಜಿಲ್ಲಾ ವಿಶೇಷ ಪೋಕ್ಸೊ ನ್ಯಾಯಾಲಯ ಕಾಯ್ದಿರಿಸಿದ ಆದೇಶವನ್ನು 30ಕ್ಕೆ ಮುಂದೂಡಿದೆ.



ಜೂನ್ 11ರಂದು ವಾದ–ಪ್ರತಿವಾದ ಆಲಿಸಿದ್ದ ನ್ಯಾಯಾಲಯ ಆದೇಶವನ್ನು ಜೂನ್.18ಕ್ಕೆ ಕಾಯ್ದಿರಿಸಿತ್ತು.

ಈ ನಡುವೆ ನಿರೀಕ್ಷಣಾ ಜಾಮೀನು ರದ್ದು ಕೋರಿ ಸಂತ್ರಸ್ತ ಬಾಲಕನ ತಾಯಿ ಹೈಕೋರ್ಟ್ ಮೊರೆ ಹೋಗಿದ್ದಾರೆ. ಎಫ್‌ಐಆರ್ ದಾಖಲಾಗುವುದಕ್ಕೂ ಮುನ್ನವೇ ಸ್ವಾಮೀಜಿ ಪಡೆದಿರುವ ನಿರೀಕ್ಷಣಾ ಜಾಮೀನು ರದ್ದು ಮಾಡುವಂತೆ ಹರಿಹರ ಗ್ರಾಮಾಂತರ ಠಾಣೆಯ ಪೊಲೀಸರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಇದಕ್ಕೆ ಸ್ವಾಮೀಜಿ ಪರ ವಕೀಲ ಎಸ್.ವಿ. ಪಾಟೀಲ ತಕರಾರು ಸಲ್ಲಿಸಿದ್ದರು.

'ನಿರೀಕ್ಷಣಾ ಜಾಮೀನು ರದ್ದು ಕೋರಿ ಪೊಲೀಸರು ಸಲ್ಲಿಸಿದ ಅರ್ಜಿಯ ವಿಚಾರಣೆಯನ್ನು ಜಿಲ್ಲಾ ನ್ಯಾಯಾಲಯ ನಡೆಸುತ್ತಿರುವಾಗಲೇ ಸಂತ್ರಸ್ತ ಬಾಲಕನ ತಾಯಿ ಹೈಕೋರ್ಟ್ ಮೊರೆ ಹೋಗಿದ್ದಾರೆ. ಇದು ಇತ್ತೀಚೆಗೆ ವಿಚಾರಣಾ ನ್ಯಾಯಾಲಯದ ಗಮನಕ್ಕೆ ಬಂದಿದೆ. ಹೀಗಾಗಿ, ಅಂತಿಮ ಆದೇಶದ ದಿನಾಂಕವನ್ನು ನ್ಯಾಯಾಧೀಶರು ಮುಂದೂಡಿದರು' ಎಂದು ಸ್ವಾಮೀಜಿ ಪರ ವಕೀಲ ಎಸ್.ವಿ. ಪಾಟೀಲ ಸುದ್ದಿಗಾರರಿಗೆ

# ಫಲಾನುಭವಿಗಳ ಅರ್ಜಿ ಕಾಲಮಿತಿಯಲ್ಲಿ ಇತ್ಯರ್ಥ ಬ್ಯಾಂಕ್‌ಗೆ ವಿಜಯಪುರ ಡಿ.ಸಿ. ಸೂಚನೆ

**ವಿಜಯಪುರ, ಜೂ.18:** ಸರ್ಕಾರದಿಂದ ಅನುಷ್ಠಾನಗೊಳ್ಳುವ ಯೋಜನೆಗೆ ಸಂಬಂಧಿಸಿದಂತೆ ಬ್ಯಾಂಕಿನಲ್ಲಿ ಅರ್ಹ ಫಲಾನುಭವಿಗಳ ಅರ್ಜಿಗಳನ್ನು ಬಾಕಿ ಉಳಿಸಿಕೊಳ್ಳದೇ ನಿಗದಿತ ಅವಧಿಯಲ್ಲಿ ಇತ್ಯರ್ಥಪಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಜಿಲ್ಲಾ ಮಟ್ಟದ ದೌರ್ಜನ್ಯ ನಿಯಂತ್ರಣ 1989 ಪ್ರತಿಬಂಧ ಕಾಯ್ದೆಯಡಿ ರಚಿತವಾದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ಪ್ರತಿ ಮೂರು ತಿಂಗಳಿಗೊಮ್ಮೆ ಬ್ಯಾಂಕಿನ ಅಧಿಕಾರಿಗಳ ಸಭೆ ನಡೆಸಲಾಗುತ್ತಿದೆ. ಈ ಬಗ್ಗೆ ನಿರಂತರ ಪ್ರಗತಿ ವರದಿ ಅವಲೋಕಿಸಲಾಗುತ್ತಿದೆ. ಜಿಲ್ಲೆಯ ವಿವಿಧ ಬ್ಯಾಂಕಿನ ಶಾಖಾ ವ್ಯವಸ್ಥಾಪಕರೊಂದಿಗೆ ವಿವಿಧ ಸರ್ಕಾರದ ಯೋಜನೆಯಡಿ ಫಲಾನುಭವಿಗಳ ಬಾಕಿ ಅರ್ಜಿ ಸ್ಥಿತಿಗತಿ ಕುರಿತು ಲೀಡ್ ಬ್ಯಾಂಕಿನ ಅಧಿಕಾರಿಗಳು ಕಾಲ–ಕಾಲಕ್ಕೆ ಸಭೆ ನಡೆಸಬೇಕು. ಈ ವಿಷಯದಲ್ಲಿ ವಿನಾ ಕಾರಣ ವಿಳಂಬ ಆಗದಂತೆ ಕ್ರಮ ಕೈಗೊಳ್ಳಬೇಕು ಎಂದು ಅಗ್ರಣೀಯ ಬ್ಯಾಂಕ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಚರ್ಚೆಯಾದ ವಿಷಯದ ಸಮಸ್ಯೆಗಳನ್ನು ತಕ್ಷಣ ಇತ್ಯರ್ಥಪಡಿಸಬೇಕು ಎಂದು ಸಭೆಯಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು.

ದೌರ್ಜನ್ಯ ಪ್ರಕರಣಗಳಲ್ಲಿ ವಿಳಂಬ ಮಾಡದೇ ಪರಿಹಾರ ಒದಗಿಸಬೇಕು ಎಂದರು. ನೀರಾವರಿ




ಪಂಪಸೆಟ್ ಅರ್ಜಿ ಪರಿಶೀಲಿಸಿ ವಿದ್ಯುತ್ ಪರಿವರ್ತಕ ಅಳವಡಿಸಲು ಕ್ರಮವಹಿಸಬೇಕು.

ಪರಿಶಿಷ್ಟ ಜಾತಿ ಸಮುದಾಯದವರು ವಾಸಿಸುವ ಕಾಲೊನಿಯಲ್ಲಿ ಕುಡಿಯುವ ನೀರಿನ ಅಭಾವವಾಗದಂತೆ ಸಮರ್ಪಕವಾಗಿ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು ಎಂದರು.ಚರಂಡಿ ನೀರು ಸರಾಗವಾಗಿ ಹರಿಯಲು ಇರುವ ತೊಂದರೆಯನ್ನು ನಿವಾರಿಸಿಕೊಂಡು ಸಮಸ್ಯೆ ಪರಿಹರಿಸಬೇಕೆಂದು ಸೂಚಿಸಲಾಯಿತು.

## ಉಪಲೋಕಾಯುಕ್ತ ನ್ಯಾ.ಬಿ.ವೀರಪ್ಪ ಅಸಮಾಧಾನ

# 20 ವರ್ಷಗಳಿಂದ ಬಾಗಲಕೋಟೆ ರೈತರಿಗೆ ಕಿರುಕುಳ

**ಬಾಗಲಕೋಟೆ, ಜೂ.18** ಬಾಗಲ ಕೋಟೆ ಜಿಲ್ಲೆಯ ರೈತರೊಬ್ಬರ 4 ಎಕರೆ ಭೂಮಿಯನ್ನು ವಶಪಡಿಸಿಕೊಂಡು 20 ವರ್ಷಗಳಾದರೂ ಪರಿಹಾರ ನೀಡದೆ ಸತಾಯಿಸುತ್ತಿರುವ ಅಧಿಕಾರಿಗಳ ವಿರುದ್ಧ ಕರ್ನಾಟಕ ಉಪಲೋಕಾಯುಕ್ತರಾದ ನ್ಯಾಯ ಮೂರ್ತಿ ಬಿ.ವೀರಪ್ಪ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.




ಬಾಗಲಕೋಟೆ ನಗರದಲ್ಲಿ ಮುಳುಗಡೆಯಾದವರಿಗೆ ಹೊಸದಾಗಿ ಪುನರ್ವಸತಿ ಕೇಂದ್ರ ನಿರ್ಮಿಸಲು ಬಾಗಲಕೋಟೆ ನಗರಾಭಿವೃದ್ಧಿ ಪ್ರಾಧಿಕಾರವು ಬಸವರಾಜ್ ದೊಡ್ಡಮನಿ ಎಂಬ ರೈತರಿಂದ 4 ಎಕರೆ ಜಮೀನನ್ನು 20 ವರ್ಷಗಳ ಹಿಂದೆಯೇ ಸ್ವಾಧೀನಪಡಿಸಿಕೊಂಡಿತ್ತು.

ಆದರೆ, ಈವರೆಗೆ ರೈತನಿಗೆ ಬರಬೇಕಾದ ಭೂ ಪರಿಹಾರವನ್ನು ಹಂತ ಹಂತವಾಗಿ ನೀಡದೆ ಅಧಿಕಾರಿಗಳು ಸತಾಯಿಸುತ್ತಿದ್ದಾರೆ. ರೈತ ಹಲವು ಬಾರಿ ಕಚೇರಿಗೆ ಅಲೆದಾಡಿ, ಪ್ರತಿಭಟನೆ ನಡೆಸಿದರೂ ಯಾವುದೇ ಪ್ರಯೋಜನ 'ವಾಗಿಲ್ಲ. ಈ ಹಿನ್ನೆಲೆ ರೈತರ ದೊಡ್ಡಮನಿಯವರು ಅಧಿಕಾರಿಗೆ ಚಪ್ಪಲಿಯಿಂದ ಹೊಡೆದಿದ್ದರು. ಪ್ರಕರಣವನ್ನು ಉಪ ಲೋಕಾಯುಕ್ತರು ಗಂಭೀರವಾಗಿ ಪರಿಗಣಿಸಿ ದ್ದಾರೆ.

ರೈತನಿಗೆ ನ್ಯಾಯಯುತವಾಗಿ ಸಿಗಬೇಕಾದ ಪರಿಹಾರ ನೀಡದೆ ಇರುವುದು ಅಧಿಕಾರಿಗಳ ಸ್ಪಷ್ಟ ಕರ್ತವ್ಯ ಲೋಪ, ಭ್ರಷ್ಟಾಚಾರ ಮತ್ತು ದುರಾಡಳಿತಕ್ಕೆ ಸಾಕ್ಷಿಯಾಗಿದೆ.

**ಸಂವಿಧಾನದ ಉಲ್ಲಂಘನೆ:** ಸಂವಿಧಾನದ ವಿಧಿ 14, 21 ಮತ್ತು 300ಎ ಅಡಿಯಲ್ಲಿ ರೈತನಿಗೆ ಇರುವ ಹಕ್ಕುಗಳನ್ನು ಅಧಿಕಾರಿಗಳು ಉಲ್ಲಂಘಿಸಿದ್ದಾರೆ. ಬಡ ರೈತ ಜಮೀನು ಕಳೆದುಕೊಂಡು ಕಣ್ಣೀರು ಹಾಕುತ್ತಿದ್ದರೂ ಅಧಿಕಾರಿಗಳು ಸ್ಪಂದಿಸದಿರುವುದು ಘೋರ ಕೃತ್ಯವಾಗಿದೆ ಎಂದು ನ್ಯಾಯಾಲಯದ ವಿವಿಧ ತೀರ್ಪುಗಳನ್ನು ಉಲ್ಲೇಖಿಸಿ ಲೋಕಾಯುಕ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ 25 ವರ್ಷಗಳಲ್ಲಿ ಪುನರ್ವಸತಿಗಾಗಿ ಎಷ್ಟು ಎಕರೆ ಭೂಸ್ವಾಧೀನ ಮಾಡಲಾಗಿದೆ

ಈ ಆದೇಶದ ಪ್ರತಿಯನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ನಗರಾಭಿವೃದ್ಧಿ ಇಲಾಖೆ), ಜಿಲ್ಲಾಧಿಕಾರಿಗಳು ಮತ್ತು ಸಂಬಂಧಪಟ್ಟ ಸಚಿವರಿಗೂ ಮಾಹಿತಿ ಹಾಗೂ ಮೇಲ್ವಿಚಾರಣೆಗಾಗಿ ರವಾನಿಸಲಾಗಿದೆ.

ಜುಲೈ 27 ರಂದು ನಡೆಯಲಿರುವ ವಿಚಾರಣೆಯಲ್ಲಿ ಅಧಿಕಾರಿಗಳು ಸಮರ್ಪಕ ದಾಖಲೆಗಳೊಂದಿಗೆ ಉತ್ತರಿಸಬೇಕಿದೆ.

# ನೀರು ಸಂಗ್ರಹಿಸಲು ಪರ್ಯಾಯ ಯೋಜನೆಗಳ ಬಗ್ಗೆ ಆಂಧ್ರ, ತೆಲಂಗಾಣ ಜೊತೆ ಚರ್ಚಿಸಲು ಸಿದ್ಧತೆ

**ಕೊಪ್ಪಳ, ಜೂ.18:** 'ತುಂಗಭದ್ರಾ ಜಲಾಶಯದಲ್ಲಿ 31 ಟಿಎಂಸಿ ಅಡಿಯಷ್ಟು ಹೂಳು ತುಂಬಿಕೊಂಡಿದ್ದು ನೀರು ಸಂಗ್ರಹಿಸಲು ಪರ್ಯಾಯ ಯೋಜನೆಗಳ ಬಗ್ಗೆ ಆಂಧ್ರ ಹಾಗೂ ತೆಲಂಗಾಣ ರಾಜ್ಯಗಳ ಜೊತೆ ಚರ್ಚಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ' ಎಂದು ಜಲಸಂಪನ್ಮೂಲ ಖಾತೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ತುಂಗಭದ್ರಾ ಜಲಾಶಯಕ್ಕೆ ಹೊಸದಾಗಿ 33 ಕ್ರಸ್ಟ್‌ಗೇಟ್‌ಗಳನ್ನು ಅಳವಡಿಸಲಾಗಿದ್ದು ಜೂ. 25ರಂದು ಲೋಕಾರ್ಪಣೆ ಯಾಗಲಿವೆ. ಕೇಂದ್ರದ ಜಲಶಕ್ತಿ ಖಾತೆ ಸಚಿವ, ಕರ್ನಾಟಕ, ಆಂಧ್ರ ಹಾಗೂ ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು ಆ ವೇಳೆ ಜನರ ಹಲವು ವರ್ಷಗಳ ಬೇಡಿಕೆಯಾದ ನವಲಿ ಸಮಾನಾಂತರ ಜಲಾಶಯದ ಬಗ್ಗೆ ಚರ್ಚಿಸಲಾಗುವುದು' ಎಂದು ಭರವಸೆ ನೀಡಿದರು.

'ತುಂಗಭದ್ರಾ ಅಂತರರಾಜ್ಯಗಳ ವಿಷಯವಾದ ಕಾರಣ ಅನಗತ್ಯ ವಿವಾದಕ್ಕೆ ಅವಕಾಶಕೊಡದಂತೆ ಪರಸ್ಪರ ಮಾತುಕತೆಯ ಮೂಲಕ ಸಮಸ್ಯೆ ಪರಿಹರಿಸಿಕೊಳ್ಳಬೇಕು ಎನ್ನುವುದು ನಮ್ಮ ಮುಖ್ಯಮಂತ್ರಿಯ ಆಶಯವಾಗಿದೆ. ಆದ್ದರಿಂದ ಕೇಂದ್ರದ ಜಲಶಕ್ತಿ ಸಚಿವರ ಸಮ್ಮುಖದಲ್ಲಿ ಮಾತುಕತೆ ನಡೆಯಬೇಕಿದೆ. ನವಲಿ ಜಲಾಶಯ ನಿರ್ಮಾಣವಾದರೆ ನಮ್ಮ ರಾಜ್ಯಗಳಿಗೆ ಅನ್ಯಾಯವಾಗುತ್ತದೆ ಎನ್ನುವ ಮನೋಭಾವನೆ ಯಾವ ರಾಜ್ಯಗಳಿಗೂ ಬಾರದಂತೆ ಎಚ್ಚರಿಕೆ ವಹಿಸಲಾಗುತ್ತಿದೆ. ಅದನ್ನು ಆಂಧ್ರ ಹಾಗೂ ತೆಲಂಗಾಣಕ್ಕೂ ಮನವರಿಕೆ ಮಾಡಿಕೊಡಲಾಗುವುದು'. ಬಿಡದಿ ಟೌನ್‌ಶಿಪ್ ವಿಚಾರದ ಬಗ್ಗೆ ಪ್ರತಿಕ್ರಿಯಿಸಿದ ಸಚಿವರು 'ಇದು ಕೂಡ ಬಿಜೆಪಿಗೆ ಬೇಕಾದ ಯೋಜನೆಯೇ. ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿ ಯಾಗಿದ್ದಾಗ ಬಜೆಟ್‌ನಲ್ಲಿ ಇದರ ಬಗ್ಗೆ ಪ್ರಸ್ತಾಪಿಸಿದ್ದರು. ಈಗ ರಾಜಕೀಯ ಕಾರಣಕ್ಕಾಗಿ ಬಿಜೆಪಿ ವಿರೋಧ ವ್ಯಕ್ತಪಡಿಸುತ್ತಿದೆ' ಎಂದರು.

ಪ್ರಸ್ತುತ ರಾಜ್ಯದಲ್ಲಿ ಮಳೆಯ ಕೊರತೆ ಎದುರಾಗಿದ್ದು ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗು ವುದಿಲ್ಲ. ಇದರ ಬಗ್ಗೆ ಎಚ್ಚರಿಕೆ ವಹಿಸಲಾಗಿದೆ ಎಂದರು.

## ಶಾಲಾ ಅಭಿವೃದ್ಧಿಗೆ ಶಾಸಕ ನಾಗೇಂದ್ರ ಅವರಿಂದ ತಲಾ 10 ಲಕ್ಷ ರೂ. ಅನುದಾನ:

**ಬಳ್ಳಾರಿ,ಜೂ.18.** ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ನಾಗೇಂದ್ರ ಅವರು ಸರ್ಕಾರಿ ಶಾಲೆಗಳ ಸಮಗ್ರ ಅಭಿವೃದ್ಧಿಗೆ ಮಹತ್ತರ ಹೆಜ್ಜೆ ಇಟ್ಟಿದ್ದಾರೆ. ತಮ್ಮ ಶಾಸಕರ ನಿಧಿಯಿಂದ ಕ್ಷೇತ್ರದ ಎರಡು ಸರ್ಕಾರಿ ಶಾಲೆಗಳ ಸಂಪೂರ್ಣ ಅಭಿವೃದ್ಧಿಗಾಗಿ ತಲಾ 10 ಲಕ್ಷ ರೂಪಾಯಿಗಳ ಅನುದಾನವನ್ನು



ಬಿಡುಗಡೆ ಗೊಳಿಸಿದ್ದು, ಜೂನ್ 19 ರಂದು ಈ ಶಾಲೆಗಳನ್ನು ದತ್ತು ಪಡೆಯುವ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಬಳ್ಳಾರಿ ಪೂರ್ವ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ವ್ಯಾಪ್ತಿಗೆ ಒಳಪಡುವ ಎತ್ತಿನಬೂದಿಹಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪಶ್ಚಿಮ ವಲಯದ ವ್ಯಾಪ್ತಿಗೆ ಒಳಪಡುವ ಬಂಡಿಹಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು ಶಾಸಕರ ಈ ವಿಶೇಷ ಅನುದಾನಕ್ಕೆ ಪಾತ್ರವಾಗಿವೆ. ಈ ಎರಡೂ ಶಾಲೆಗಳನ್ನು ಶಾಸಕರು ಸಂಪೂರ್ಣವಾಗಿ ದತ್ತು ಪಡೆಯಲಿದ್ದು, ಈ ನಿಮಿತ್ತ ಜೂನ್ 19 ರಂದು ಎತ್ತಿನಬೂದಿಹಾಳು ಮತ್ತು ಬಂಡಿಹಟ್ಟಿ ಗ್ರಾಮಗಳಲ್ಲಿ ದತ್ತು ಸ್ವೀಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಆಯಾ ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

# ಕುಂಬಾರವಾಡ ಅಂಬೇಡ್ಕರ್ ಭವನಕ್ಕೆ ಜಾಗ ಮಂಜೂರಾತಿಗೆ ಮನವಿ



**ಬೀದರ್, ಜೂ. 18:** ನಗರದ ಕುಂಬಾರವಾಡದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಕ್ಕೆ ಜಾಗ ಮಂಜೂರು ಮಾಡುವಂತೆ ರಮಾತಾಯಿ ಮಹಿಳಾ ಸಂಘದ ಪದಾಧಿಕಾರಿಗಳು ಹಾಗೂ ಪರಿಶಿಷ್ಟ ಜಾತಿ ಸಮುದಾಯದ ಮುಖಂಡರು ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಅವರಿಗೆ ಮನವಿ ಸಲ್ಲಿಸಿದರು.

ಜಿಲ್ಲೆಯ ಭಾಲ್ಕಿಗೆ ಆಗಮಿಸಿದ್ದ ಸಚಿವರನ್ನು ಭೇಟಿ ಮಾಡಿದ ರಮಾತಾಯಿ ಮಹಿಳಾ ಸಂಘದ ಪದಾಧಿಕಾರಿಗಳಾದ ಲಕ್ಷ್ಮೀ, ರಮಾಬಾಯಿ, ಸೂಲೋಚನಾ, ಗಂಗಮ್ಮ, ಜ್ಯೋತಿ, ಲಕ್ಷ್ಮೀ ಕಳೆಕಾರ, ಶೋಭಾ, ಕಾಶಿಬಾಯಿ ಕಾಂಬ್ಳೆ, ಅಂಬವ್ವ, ಸುಮಿತ್ರಾ, ಅಂಬಿಕಾ, ನಾಗಮ್ಮ, ಶಕುಂತಲಾ, ರುಕ್ಮಿಣಿ, ಸರಸ್ವತಿ, ಪಂಚಶೀಲ, ಪ್ರಭಾವತಿ ಸೇರಿದಂತೆ ಹಲವು ಮಹಿಳೆಯರು ಹಾಗೂ ಮುಖಂಡರಾದ ಸುಭಾಷ್ ವರ್ಮಾ, ಮಲ್ಲಿಕಾರ್ಜುನ ಮೊಳಕೆರೆ, ಗೌತಮ ಭೋಸ್ಲೆ, ತುಕಾರಾಮ ಕಡೆಮನಿ, ಶಿವಲಿಂಗಪ್ಪ ಕಡೆಮನಿ, ಸಿದ್ದಪ್ಪ ಕಾಂಬ್ಳೆ, ಸಾಯಿನಾಥ ಕಳೆಕಾರ, ಸದಾನಂದ ಕಳೆಕಾರ, ಸಿದ್ಧಾರ್ಥ ಕಾಂಬ್ಳೆ, ಆನಂದ ಕಡೆಮನಿ, ನರಸಿಂಗ್ ನಾಗೂರೆ, ಭರತ್ ಕಾಂಬ್ಳೆ, ದಿಗಂಬರ ಹಾಗೂ ಸಂತೋಷ್ ಬೆನ್ನಕನಳ್ಳಿಕರ್ ಉಪಸ್ಥಿತರಿದ್ದರು.

ಮನವಿ ವೇಳೆ ಮುಖಂಡರು ಮಾತನಾಡಿ, ಕುಂಬಾರವಾಡದ ಸರ್ವೆ ನಂ. 51/1ರ 25 ಎಕರೆ ಸರ್ಕಾರಿ ಜಮೀನಿನಲ್ಲಿ 75 & 80 ಅಳತೆಯ ಖಾಲಿ ಜಾಗವಿದ್ದು, ಕಳೆದ 25 ವರ್ಷಗಳಿಂದ ಇದೇ ಸ್ಥಳದಲ್ಲಿ ಅಂಬೇಡ್ಕರ್ ಜಯಂತಿ, ಅಶೋಕ ದಶಮಿ, ಬುದ್ಧ ಪೂರ್ಣಿಮೆ ಹಾಗೂ ವಿವಿಧ ಸಾಮಾಜಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದೇವೆ ಎಂದು ತಿಳಿಸಿದರು.

ಕುಂಬಾರವಾಡದಲ್ಲಿ ವಿವಿಧ ಜಾತಿ ಮತ್ತು ಧರ್ಮದ ಸಮುದಾಯಗಳಿಗೆ ದೇವಸ್ಥಾನ, ಮಸೀದಿ ಹಾಗೂ ಚರ್ಚ್‌ಗಳಂತಹ ಕಟ್ಟಡಗ ಳಿದ್ದರೂ, ಪರಿಶಿಷ್ಟ ಜಾತಿ ಸಮುದಾಯಕ್ಕೆ ಸಮುದಾಯ ಭವನವಿಲ್ಲ. ಆದ್ದರಿಂದ ಈ ಜಾಗವನ್ನು ಡಾ. ಬಿ.ಆರ್. ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಕ್ಕೆ ಮಂಜೂರು ಮಾಡಿ, ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರದಿಂದ ಒಂದು ಕೋಟಿ ರೂ.ಗಳ ಅನುದಾನ ನೀಡಬೇಕು ಎಂದು ಅವರು ಒತ್ತಾಯಿಸಿದರು.

ಸ್ಥಳದ ಮಂಜೂರಾತಿಗಾಗಿ ಜಿಲ್ಲಾಧಿಕಾರಿ, ಮಹಾನಗರ ಪಾಲಿಕೆ ಆಯುಕ್ತರು ಹಾಗೂ ತಹಸಿಲ್ದಾರ್ ಅವಯಿರಿಗೆ ಈಗಾಗಲೇ ಮೂರು ಬಾರಿ ಮನವಿ ಸಲ್ಲಿಸಿದ್ದು, ಸ್ಥಳದಲ್ಲಿಯೇ ಧರಣಿ ಸತ್ಯಾಗ್ರಹವನ್ನೂ ನಡೆಸಲಾಗಿದೆ ಎಂದು ತಿಳಿಸಿದರು. ಬೇಡಿಕೆಗೆ ಸ್ಪಂದಿಸಿದ ಸಚಿವ ಈಶ್ವರ ಖಂಡ್ರೆ, ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ತತ್ವಗಳನ್ನು ಮೈಗೂಡಿಸಿಕೊಂಡು ಕೆಲಸ ಮಾಡುತ್ತಿರುವ ತಾವು ಸಂಬಂಧಪಟ್ಟ ಅಧಿಕಾಯಿರಿಗಳೊಂದಿಗೆ ಚರ್ಚಿಸಿ, ಅಂಬೇಡ್ಕರ್ ಸಮುದಾಯ ಭವನಕ್ಕೆ ಜಾಗ ಮಂಜೂರು ಮಾಡುವ ಕುರಿತು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

# ಆಸೆ ಕ್ಷೀಣಿಸಿದಷ್ಟೂ ನೆಮ್ಮದಿ, ಸಮಾಧಾನ ಹೆಚ್ಚು ಜಗದ್ಗುರು ಕೊಟ್ಟೂರು ಬಸವಲಿಂಗ ಸ್ವಾಮೀಜಿ ಅಭಿಮತ

**ಬಳ್ಳಾರಿ, ಜೂ. 18:**ಅಸೆ ಕ್ಷೀಣಿಸಿದಷ್ಟೂ ನೆಮ್ಮದಿ – ಸಮಾಧಾನ ಹೆಚ್ಚಾಗುತ್ತದೆ ಎಂದು ಜಗದ್ಗುರು ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಶ್ರೀ ಜಗದ್ಗುರು ಕೊಟ್ಟೂರು ಸ್ವಾಮಿ ಮಠದಲ್ಲಿ ಅಕ್ಕನ ಬಳಗದ ಸಹಯೋಗದಲ್ಲಿ ನಡೆದ ಶಿವಾನುಭವ ಸಂಪದ – 14ರಲ್ಲಿ ಆಶೀರ್ವಾದ ಮಾಡಿದ ಶ್ರೀಗಳು, ಆಸೆ ಅತಿ ಆಸೆ ಆಗಬಾರದು. ಆಸೆ ದುರಾಸೆ ಆಗಬಾರದು. ಅತಿ ಆಸೆ – ದುರಾಸೆ ಮನುಷ್ಯನನ್ನು ಹಾಗೂ ಮನುಷ್ಯತ್ವವನ್ನು ಹಾಳುಮಾಡುತ್ತವೆ ಎಂದರು.

ಭಾವನೆಗಳೇ ಇಲ್ಲದ ಬುದ್ಧಿಗೂ ಬೆಲೆ ಇಲ್ಲ. ಬುದ್ಧಿಗೆ ಇರುವ ಮಹತ್ವಕ್ಕಿಂತಲೂ ಭಾವನೆಗಳಿಗೆ ಹೆಚ್ಚಿನ ಮಹತ್ವವಿದೆ. ಬುದ್ಧಿಗಿಂತಲೂ ಭಾವನೆಗಳೇ ದೊಡ್ಡವು. ಕಾರಣ ಪ್ರತಿಯೊಬ್ಬರೂ ನಾವು, ನಮ್ಮವರು, ತಂದೆ – ತಾಯಿ, ಅಕ್ಕ




– ಅಣ್ಣ, ನಮ್ಮವರು ಎನ್ನುವ ಭಾವನೆಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಶಿಕ್ಷಕಿ ರಾಜೇಶ್ವರಿ ಅಂಗಡಿ ಅವರು, 'ಸಮಾಜದ ಅಭಿವೃದ್ಧಿಯಲ್ಲಿ ಶರಣರ ಪಾತ್ರ' ವಿಷಯದ ಕುರಿತು ಉಪನ್ಯಾಸ ನೀಡಿ, ಲಿಂಗಪೂಜೆಯಲ್ಲಿ ವಿಜ್ಞಾನವಿದೆ, ಆಧ್ಯಾತ್ಮವಿದೆ. ಲಿಂಗದ ಜೊತೆಗಿನ ಅವಿನಾಭಾವದ ಆತ್ಮೀಯತೆಯಲ್ಲಿ ಅನುಭಾವವಿದೆ. ಬೆಳಕಿದೆ. ಲಿಂಗಪೂಜೆಯನ್ನು ಎಲ್ಲರೂ ಮಾಡಬಹುದಾಗಿದೆ ಎಂದರು.

12ನೇ ಶತಮಾನದ ಶರಣರು ಸಮಾಜ, ಆಧ್ಯಾತ್ಮ, ವಿಜ್ಞಾನ ಮತ್ತು ಬದುಕಿನ ಜೊತೆ ಜೊತೆಯಲ್ಲ ಸಮಾಜದ ಅಭಿವೃದ್ಧಿಗೆ ಮುಕ್ತ ಅವಕಾಶಗಳನ್ನು ಸೃಷ್ಟಿಸಿದ್ದರು. ವ್ಯಕ್ತಿಯಲ್ಲಿಯ ಮನಸ್ಸು – ಹೃದಯ ಮತ್ತು ಚಿಂತನೆಗಳಲ್ಲಿಯ ಬದಲಾವಣೆಗಳನ್ನು ಸಮಾಜದಲ್ಲಿ ಆಗುತ್ತಿರುವ ಬದಲಾವಣೆ ಎಂದು ವಚನಕಾರರು ಗುರುತಿಸಿದರು ಎಂದರು.

ತೊಗರಿ ವೀರಮಲ್ಲಪ್ಪ ಮೆಮೋರಿಯಲ್ ಕಾಲೇಜ್ ಆಫ್ ಫಾರ್ಮಸಿಯ ಆಡಳಿತ ಮಂಡಳಿಯ ಅಧ್ಯಕ್ಷ ಎಲ್.ಟಿ. ಶೇಖರ್ ಅವರು, ಬಳ್ಳಾರಿಯ ಕೊಟ್ಟೂರುಸ್ವಾಮಿ ಮಠಕ್ಕೆ 500 ವರ್ಷಗಳ ಇತಿಹಾಸವಿದ್ದು, ಈ ಭಾಗದಲ್ಲಿ ಅತ್ಯಂತ ಪ್ರಭಾವಿ ಮಠವಾಗಿದೆ. ಭಕ್ತಿ, ಶ್ರದ್ಧೆ, ಆಧ್ಯಾತ್ಮದ ಜೊತೆಯಲ್ಲಿ ಜನಸಾಮಾನ್ಯರಲ್ಲಿ ದಯೆ ಹಾಗೂ ಧರ್ಮದ ಮೂಲಕ ಜಾಗೃತಿ ಮೂಡಿಸಲು ಶ್ರೀಮಠವು ನಡೆಸುತ್ತಿರುವ 'ಶಿವಾನುಭವ ಸಂಪದ'ವು ಸಮಾಜದಲ್ಲಿ ಆಮೂಲಾಗ್ರ ಬದಲಾವಣೆ ಮೂಡಿಸಲಿ ಎಂದು ಆಶಯ ವ್ಯಕ್ತಪಡಿಸಿದರು.

# ರೈತರ ವಿರೋಧವಿದ್ದರೆ ಬಿಡದಿ ಟೌನ್‌ಶಿಪ್‌ಗೆ ನಮ್ಮ ವಿರೋಧ: ಸಿ.ಟಿ.ರವಿ

**ಕಲಬುರಗಿ, ಜೂ. 18:** ರೈತರ ಒಪ್ಪಿಗೆಯಿಲ್ಲದೇ ಬಿಡದಿಯಲ್ಲಿ ಹೊಸ ಟೌನ್‌ಶಿಪ್ ಮಾಡುವುದಕ್ಕೆ ರಾಜ್ಯ ಸರ್ಕಾರಕ್ಕೆ ಅವಕಾಶವನ್ನು ಬಿಜೆಪಿ ಕೊಡುವುದಿಲ್ಲ ಎಂದು ಬಿಜೆಪಿ ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಸಿ.ಟಿ. ರವಿ ಹೇಳಿದರು.



ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರದಲ್ಲಿ ಕೃಷಿ ಭೂಮಿ ಉಳಿಸಿ ಅಭಿಯಾನದ ಅಂಗವಾಗಿ ರೈತಮೋರ್ಚಾ ನೇತೃತ್ವದಲ್ಲಿ ಜರುಗಿದ ಸಾವಯವ ಕೃಷಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್‌ಗೆ ನಮ್ಮ ವಿರೋಧವಿಲ್ಲ. ಆದಾಗ್ಯೂ, ರೈತರ ಒಪ್ಪಿಗೆ ಕಡ್ಡಾಯವಾಗಿ ಪಡೆಯಬೇಕು ಎಂದು ಒತ್ತಾಯಿಸಿದರು.

ಬಿಡದಿ ಟೌನ್‌ಶಿಪ್‌ನ್ನು ರೈತರೇ ವಿರೋಧಿಸುತ್ತಿದ್ದಾರೆ. ಹಾಗಾಗಿ ನಾವು ಬಿಜೆಪಿಯವರು ಆ ಕುರಿತು ಹೋರಾಟ ಮಾಡಿದರೆ ಅದು ರಾಜಕೀಯ ಪ್ರೇರಿತವಾಗುತ್ತದೆ ಎಂಬ ಕಾರಣದಿಂದ ಹೋರಾಟ ಮಾಡಲಿಲ್ಲ. ಇಂದೇ ಬಿಜೆಪಿಯ ನಿಯೋಗವು ರೈತರಿಗೆ ಭೇಟಿ ಮಾಡಲಿದೆ. ಅಲ್ಲದೇ ಜೂನ್ 22ರಂದು ಬಿಡದಿ ಟೌನ್‌ಶಿಪ್ ವಿರೋಧಿಸಿ ರೈತರು ಹೋರಾಟ ಹಮ್ಮಿಕೊಂಡಿದ್ದು, ಹೋರಾಟಕ್ಕೆ ಬಿಜೆಪಿ ಬೆಂಬಲವಿದೆ ಎಂದರು.

ಬಿಡದಿ ಟೌನ್‌ಶಿಪ್ ಮಾಡುವ ಕುರಿತು ಎಚ್.ಡಿ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿಗಳಿದ್ದಾಗಲೇ ಆದೇಶವಾಗಿತ್ತು ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿ.ಟಿ. ರವಿ, ಆ ಆದೇಶ ಜಾರಿಯಾಗಬೇಕಾದರೂ ಸಹ ರೈತರ ಒಪ್ಪಿಗೆ ಪಡೆಯಬೇಕು ಎಂಬ ನಿಲುವು ನಮ್ಮ ಪಕ್ಷದ್ದಾಗಿದೆ. ಹಾಗಾಗಿ ರಾಜ್ಯ ಸರ್ಕಾರವು ರೈತರ ಒಪ್ಪಿಗೆಯ ಮೇಲೆ ಬಿಡದಿ ಟೌನ್‌ಶಿಪ್ ನಿರ್ಮಾಣದ ಕುರಿತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇನ್ನು ತೊಗರಿಗೆ ಸೂಕ್ತ ಬೆಂಬಲ ಬೆಲೆಯನ್ನು ಕೇಂದ್ರ ಸರ್ಕಾರ ನೀಡುತ್ತಿಲ್ಲ ಎಂಬ ಆರೋಪ ತಳ್ಳಿ ಹಾಕಿದ ಅವರು, ಕೃಷಿ ಉತ್ಪನ್ನಗಳಿಗೆ ಕೇಂದ್ರ ಸರ್ಕಾರವು ಬೆಂಬಲ ಬೆಲೆಯನ್ನು ಘೋಷಿಸಿದೆ. ರೈತರಿಗೆ ಯಾವುದೇ ರೀತಿಯಲ್ಲಿ ಅನ್ಯಾಯವಾಗಲು ಕೇಂದ್ರ ಸರ್ಕಾರ ಬಿಡದು ಎಂದರು.

ವಿದೇಶದಿಂದ ತೊಗರಿ ಆಮದು ಮಾಡಿಕೊಳ್ಳುತ್ತಿರುವ ಕುರಿತು ನಮಗೆ ಯಾವುದೇ ಮಾಹಿತಿ ಇಲ್ಲ. ಆದಾಗ್ಯೂ, ರೈತರ ಹಿತಾಸಕ್ತಿಯಲ್ಲಿ ಕೇಂದ್ರ ಸರ್ಕಾರವು ಯಾವುದೇ ರಾಜಿ ಮಾಡಿಕೊಳ್ಳದು ಎಂದು ಸ್ಪಷ್ಟಪಡಿಸಿದರು.

ಕಾರ್ಯಾಗಾರದಲ್ಲಿ ಸಿ.ಟಿ. ರವಿ ಅವರು ನೈಸರ್ಗಿಕ ಕೃಷಿಯ ಅನಿವಾರ್ಯತೆಯ ಕುರಿತು ಮಾಹಿತಿ ಹಂಚಿಕೊಂಡರು. ರೈತ ಪರಾವಲಂಬಿಯಾಗದೆ ನಮ್ಮ ಪೂರ್ವಿಕರಂತೆ ನೈಸರ್ಗಿಕ ಕೃಷಿಯತ್ತ ಸಾಗಿದರೆ ಮಾತ್ರ ಪ್ರಕೃತಿಯೊಂದಿಗೆ ರೈತನ ಬದುಕು ಹಸನಾಗುತ್ತದೆ ಎಂದರು.



ವಿಜಯನಗರ ಜಿಲ್ಲೆಯ ಹಂಪಿಯ ರಥಬೀದಿಯಲ್ಲಿ ಗುರುವಾರ ನಡೆದ ಗೂಳಿಕಾಳಗ ಜನರನ್ನು ಆಕರ್ಷಿಸಿತು.

# 2.56 ಕೋಟಿ ವೆಚ್ಚದ ಕಾಮಗಾರಿಗಳಿಗೆ ಚಾಲನೆ

**ಬೀದರ್, ಜೂ. 18:** ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಮತ್ತೊಂದು ಮಹತ್ವದ ಹೆಜ್ಜೆಯಾಗಿ ಆಣದೂರ ಗ್ರಾಮದಿಂದ ಕಪಲಾಪುರ, ಅತಿವಾಳ ಮಾರ್ಗವಾಗಿ ಹೊನ್ನಿಕೇರಿ ಸಿದ್ಧೇಶ್ವರ ದೇವಸ್ಥಾನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಯ ಉಳಿದ ಭಾಗಕ್ಕೆ 1.50 ಕೋಟಿ ರೂ.ಗಳ ವೆಚ್ಚದಲ್ಲಿ ಡಾಂಬರೀಕರಣ ಕಾಮಗಾರಿಗೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಶಾಸಕರು ಮಾತನಾಡಿ, ಕಳೆದ ವರ್ಷ ಇದೇ ರಸ್ತೆಗೆ ರೂ.1 ಕೋಟಿ ಅನುದಾನದಲ್ಲಿ ಡಾಂಬರೀಕರಣ ಕಾಮಗಾರಿ ಪೂರ್ಣಗೊಳಿಸಲಾಗಿದ್ದು, ಇದೀಗ ಉಳಿದ ಭಾಗದ ಅಭಿವೃದ್ಧಿ ಕಾರ್ಯಕ್ಕೂ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು. ಕಾಮಗಾರಿಯನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸಂಬಂಧಿಸಿದ ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ ಎಂದರು.

ಇದೇ ವೇಳೆ ಕಪಲಾಪೂರ (ಎ) ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೂ ಚಾಲನೆ ನೀಡಲಾಯಿತು. 65 ಲಕ್ಷ ವೆಚ್ಚದಲ್ಲಿ ಗ್ರಾಮದ ಮುಖ್ಯ ರಸ್ತೆಯಿಂದ ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ನಿಲಯದವರೆಗೆ ರಸ್ತೆ ಡಾಂಬರೀಕರಣ ಕಾಮಗಾರಿ ಸಹವವವ ಚಾಲನೆ ನೀಡಲಾಗಿದೆ, 35 ಲಕ್ಷ ವೆಚ್ಚದಲ್ಲಿ ಕಪಲಾಪೂರ (ಎ) ಹಾಗೂ ಹೊನ್ನಿಕೇರಿ ತಾಂಡದ ಎಸ್.ಸಿ. ಓಣಿಗಳಲ್ಲಿ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಲಾಯಿತು.

ಜೊತೆಗೆ, ಗ್ರಾಮದಲ್ಲಿ 6 ಲಕ್ಷ ವೆಚ್ಚದಲ್ಲಿ ಹೈಮಾಸ್ಟ್ ದೀಪ ಅಳವಡಿಕೆ ಕಾಮಗಾರಿಗೂ ಚಾಲನೆ ನೀಡಲಾಯಿತು.

ಗ್ರಾಮೀಣ ಪ್ರದೇಶಗಳಲ್ಲಿ ಉತ್ತಮ ರಸ್ತೆ, ಮೂಲಸೌಕರ್ಯ ಹಾಗೂ ಅಗತ್ಯ ನಾಗರಿಕ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಸಾರ್ವಜನಿಕರ ಜೀವನ ಮಟ್ಟವನ್ನು ಮತ್ತಷ್ಟು ಉತ್ತಮಗೊಳಿಸುವುದು ತಮ್ಮ ಸಂಕಲ್ಪವಾಗಿದೆ ಎಂದು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು.

ಜನರ ಸುಗಮ ಸಂಚಾರ, ಗ್ರಾಮೀಣ ಸಂಪರ್ಕ ವ್ಯವಸ್ಥೆಯ ಬಲವರ್ಧನೆ ಹಾಗೂ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದ್ದು, ಎಲ್ಲ ಕಾಮಗಾರಿಗಳನ್ನು ಗುಣಮ ಟ್ಟದಿಂದ ಮತ್ತು ನಿಗದಿತ ಸಮಯದೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಅವರು ತಿಳಿಸಿದರು.

ಗ್ರಾಮದ ಮುಖಂಡ ಹಣಮಂತರಾವ ಮೈಲಾರೆ ಅವರು ಮಾತನಾಡಿ, ದಕ್ಷಿಣ ಕ್ಷೇತ್ರದಲ್ಲಿ ಮಾನ್ಯ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರ ನೇತೃತ್ವದಲ್ಲಿ ನಿರಂತರವಾಗಿ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ. ಗ್ರಾಮದ ರಸ್ತೆ, ಕುಡಿಯುವ ನೀರು, ಮೂಲಸೌಕರ್ಯ ಸೇರಿದಂತೆ ಜನರ ಬಹುಕಾಲದ ಬೇಡಿಕೆಗಳಿಗೆ ಸ್ಪಂದಿಸಿ ಸರ್ಕಾರದ ಅನುದಾನ ತಂದು ಅಭಿವೃದ್ಧಿಗೆ ವೇಗ ನೀಡಿರುವುದು ಶ್ಲಾಘನೀಯ ಎಂದು ಹೇಳಿದರು.

# ಕಲ್ಯಾಣ ಕರ್ನಾಟಕದ ಬಾಗಿಲಿಗೆ ಬರಲಿದೆ ಹೈಸ್ಪೀಡ್ ಬುಲೆಟ್ ರೈಲು

**ಕಲಬುರಗಿ, ಜೂ.18:** ಮುಂಬೈ–ಹೈದರಾಬಾದ್ ನಡುವೆ ಬುಲೆಟ್ ಟ್ರೇನ್ ಜಾರಿ ಬಳಿಕ ವಾಣಿಜ್ಯನಗರಿ ಮುಂಬೈ ಕಲಬುರಗಿ ಜನರಿಗೆ ಕೇವಲ 2 ಗಂಟೆ ದೂರ...! ಕಲಬುರಗಿ ಮೂಲಕ 671 ಕಿ.ಮೀ. ಹೈಸ್ಪೀಡ್ ರೈಲು ಮಾರ್ಗಕ್ಕೆ ಯೋಜನೆಗೆ ಕ್ರಿಯಾಯೋಜನೆ ಸಿದ್ದಗೊಂಡಿದೆ.



ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ ಬುಲೆಟ್ ಟ್ರೇನ್ ಯೋಜನೆ ಈಗ ಕಲ್ಯಾಣ ಕರ್ನಾಟಕದ ಹೊಸ್ತಿಲಿಗೆ ಬಂದು ನಿಂತಿದೆ. ದೇಶದ ಎರಡು ಪ್ರಮುಖ ಆರ್ಥಿಕ ಕೇಂದ್ರಗಳಾದ ಮುಂಬೈ ಮತ್ತು ಹೈದರಾಬಾದ್ ನಗರಗಳನ್ನು ಜೋಡಿಸುವ ಬಹುನಿರೀಕ್ಷಿತ ಹೈಸ್ಪೀಡ್ ರೈಲು ಯೋಜನೆಗೆ ಅಂತಿಮ ಕ್ರಿಯಾಯೋಜನೆ ಸಿದ್ಧಗೊಂಡಿದ್ದು, ಈ ಮಹತ್ವದ ರೈಲು ಕಲಬುರಗಿ ಮಾರ್ಗವಾಗಿ ಸಂಚರಿಸಲಿದೆ. ರಾಷ್ಟ್ರೀಯ ಹೈಸ್ಪೀಡ್ ರೈಲು ಕಾರ್ಪೋರೇಷನ್ ಲಿಮಿಟೆಡ್ ಈ ಬೃಹತ್ ಯೋಜನೆಯನ್ನು ಕೈಗೆತ್ತಿಕೊಂಡಿದ್ದು, ಯೋಜನೆಯ ಮೊದಲ ಹಂತದ ಸಮೀಕ್ಷೆ, ಪರಿಶೀಲನೆ ಹಾಗೂ ಭೂಮಿ ಗುರುತಿಸುವಿಕೆ ಪ್ರಕ್ರಿಯೆಗಳು ಈಗಾಗಲೇ ಯಶಸ್ವಿಯಾಗಿ ಪೂರ್ಣಗೊಂಡಿವೆ.

ಸುಮಾರು 2 ಲಕ್ಷ ಕೋಟಿ ರೂ ಅಂದಾಜು ವೆಚ್ಚದಲ್ಲಿ ನಿರ್ಮಾಣವಾಗಲಿರುವ ಈ ರೈಲು ಮಾರ್ಗ 671 ಕಿ.ಮೀ. ಉದ್ದ ಇರಲಿದೆ. ಈ ಹೊಸ ಮಾರ್ಗವು ಜಾರಿಗೆ ಬಂದರೆ, ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಮುಂಬೈ ಮತ್ತು ಹೈದರಾಬಾದ್ ನಗರಗಳು ಅತ್ಯಂತ ಸಮೀಪವಾಗಲಿವೆ.

ಸದ್ಯ ಈ 2 ಮಹಾನಗರಗಳಿಗೆ ಕಲಬುರಗಿಯಿಂದ ತಲುಪಲು ಸುದೀರ್ಘ ಸಮಯ ಬೇಕಾಗುತ್ತಿದ್ದು, ಬುಲೆಟ್ ಟ್ರೇನ್ ಆರಂಭವಾದರೆ ಕಲಬುರಗಿಯಿಂದ ಕೇವಲ ಎರಡು ತಾಸಿನಲ್ಲಿ ಮುಂಬೈ ನಗರವನ್ನು ತಲುಪಬಹುದಾಗಿದೆ. ಹಗೂ ಒಂದೂವರೆ ಗಂಟೆಯಲಿ ಹೈದರಾಬಾದ ತಲುಪಬಹುದು.

ಈ ಹೈಸ್ಪೀಡ್ ಕಾರಿಡಾರ್‌ಗಾಗಿ ಭೀಮಾ, ಮುಲ್ಲಾಮಾರಿ ಸೇರಿದಂತೆ ಪ್ರಮುಖ ನದಿಗಳ ಮೇಲೆ ಕಠಿಣ ತಂತ್ರಜ್ಞಾನದ 'ಸ್ಟೀಲ್ ಬ್ರಿಡ್'ಗಳು, 101 ಪ್ರಮುಖ ಸೇತುವೆಗಳು ಹಾಗೂ ಪಶ್ಚಿಮ ಘಟ್ಟಗಳ ಕೆಲವೆಡೆ ಗುಡ್ಡಗಳನ್ನು ಕೊರೆದು ಅತ್ಯಾಧುನಿಕ ಸುರಂಗ ಮಾರ್ಗಗಳನ್ನು ನಿರ್ಮಿಸಲು ಕ್ರಿಯಾ ಯೋಜನೆಯಲ್ಲಿ ನೀಲನಕ್ಷೆ ಸಿದ್ಧಪಡಿಸಲಾಗಿದೆ.

> **ಬಹಳ ದಿನಗಳಿಂದ ಚರ್ಚೆಯಲ್ಲಿದ್ದ ಮುಂಬೈ–ಹೈದರಾಬಾದ್ ಬುಲೆಟ್ ಟ್ರೇನ್ ಯೋಜನೆಗೆ ಕ್ರಿಯಾಯೋಜನೆ ಸಲ್ಲಿಕೆಯಾಗಿರುವುದು ಕಲ್ಯಾಣ ಕರ್ನಾಟಕದ ಜನರಲ್ಲಿ ಹೊಸ ಭರವಸೆ ಮೂಡಿಸಿದೆ. ಈ ಯೋಜನೆ ಮುಗಿದರೆ ಮುಂಬೈ, ಪುಣೆ, ಹೈದರಾಬಾದ್ ನಗರಗಳಿಗೆ ನಮ್ಮ ಭಾಗದಿಂದ ಸಂಪರ್ಕ ಸುಲಭವಾಗಿ ವ್ಯಾಪಾರ–ವಹಿವಾಟು ವೃದ್ಧಿಸಲಿದೆ. ಸುದೀರ್ಘ ಯೋಜನೆ ಯಾಗಿರುವುದರಿಂದ ಅತ್ಯುನ್ನತ ಗುಣಮಟ್ಟದೊಂದಿಗೆ ಕಾಮಗಾರಿ ಪೂರ್ಣಗೊಳ್ಳಲಿ.**
>
> **–ಶರಣಬಸಪ್ಪ ಪಪ್ಪಾ, ಅಧ್ಯಕ್ಷ, ಕೆಕೆಸಿಸಿಐ.**

**2027–28ರಲ್ಲಿ ಚಾಲನೆ:** ಈ ಬೃಹತ್ ಬುಲೆಟ್ ಟ್ರೇನ್ ಯೋಜನೆಯ ಸಿವಿಲ್ ಕಾಮಗಾರಿಗಳು 2027–28ರ ಅವಧಿಯಲ್ಲಿ ಅಧಿಕೃತವಾಗಿ ಆರಂಭವಾಗುವ ಸಾಧ್ಯತೆಗಳಿವೆ. ಅತ್ಯಂತ ಸಂಕೀರ್ಣ ಹಾಗೂ ಸುದೀರ್ಘ ತಂತ್ರಜ್ಞಾನ ಆಧಾರಿತ ಯೋಜನೆಯಾಗಿರುವುದರಿಂದ ಇದು ಪೂರ್ಣಗೊಳ್ಳಲು ಕನಿಷ್ಠ ಒಂದು ದಶಕದ ಸಮಯ ತೆಗೆದುಕೊಳ್ಳಬಹುದು ಎಂದು ಅಂದಾಜಿಸಲಾಗಿದೆ. ಕರ್ನಾಟಕ ಭಾಗದಲ್ಲಿ ಕಲಬುರಗಿ ತಾಲೂಕಿನ 'ತಾಜಸುಲ್ತಾನಪುರ' ಗ್ರಾಮದ ಬಳಿ ಬುಲೆಟ್ ಟ್ರೇನ್‌ನ ಹೈಟೆಕ್ ರೈಲ್ವೆ ನಿಲ್ದಾಣ ತಲೆಯೆತ್ತಲಿದ್ದು, ಬುಲೆಟ್ ರೈಲಿನೊಂದಿಗೆ ಈ ಭಾಗದ ಆರ್ಥಿಕ ಹಾಗೂ ಔದ್ಯೋಗಿಕ ವಲಯಕ್ಕೆ ಹೊಸ ಚೈತನ್ಯ ನೀಡಲಿದೆ.

**ಯೋಜನೆ ಹೈಲೈಟ್:** ಒಟ್ಟು ಮಾರ್ಗದ ಉದ್ದ 671 ಕಿಲೋಮೀಟರ್, ಅಂದಾಜು ವೆಚ್ಚ 2 ಲಕ್ಷ ಕೋಟಿ ರೂ, 101 ಸಾಮಾನ್ಯ ಸೇತುವೆಗಳು, ನದಿಗಳ ಮೇಲೆ ಬೃಹತ್ ಸ್ಟೀಲ್ ಬ್ರಿಡ್ಜ್‌ಗಳು ಮತ್ತು ಅತ್ಯಾಧುನಿಕ ಸುರಂಗ ಮಾರ್ಗಗಳು, ವಾಣಿಜ್ಯ ನಗರಿ ಮುಂಬೈ, ಐಟಿ ಹಬ್ ಹೈದರಾಬಾದ್, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ನಗರಿ ಪುಣೆ, ಧಾರ್ಮಿಕಕ್ಷೇತ್ರ ಪಂಢರಾಪುರಕ್ಕೆ ಈ ವೇಗದ ಬುಲೆಟ್ ರೈಲಿನ ಸಂಪರ್ಕ ದೊರೆಯಲಿದೆ.

**ಎಲ್ಲಿಂದ ಎಲ್ಲಿಗೆ? :** ಮಹಾರಾಷ್ಟ್ರ: ವಿಕ್ರೋಲಿ, ಥಾಣೆ, ನವಿ ಮುಂಬೈ, ಪುಣೆ, ಪಿಂಪ್ರಿ–ಚಿಂಚವಾಡ, ಲೋನಾವಾಲ, ಸೊಲ್ಲಾಪುರ, ಪಂಢರಾಪುರ, ಬಾರಾಮತಿ. ಕರ್ನಾಟಕ: ಕಲಬುರಗಿ (ತಾಜಸುಲ್ತಾನಪುರ), ತೆಲಂಗಾಣ: ಕೊಕಪೇಟ (ಹೈದರಾಬಾದ್), ವಿಕಾರಾಬಾದ್.

## 45 ಬಾರಿ ರಕ್ತದಾನ ಮಾಡಿ ಜಾಗೃತಿ ಮೂಡಿಸಿದ ಪತ್ರಕರ್ತ

# ಗ್ರಾಮೀಣ ಭಾಗದಲ್ಲಿ ದಾನದ ಮಹತ್ವ ಸಾರಿದ ಗಿರಿಯಪ್ಪ

**ರಾಯಚೂರು, ಜೂ. 18:** ರಕ್ತದಾನ ಮಹಾದಾನ ಮಾಡುವುದರಿಂದ ಒಂದು ಜೀವ ಉಳಿಯಲು ಸಾಧ್ಯ. ರಕ್ತದಾನದಿಂದ ಯಾವುದೇ ತೊಂದರೆ ಇಲ್ಲ. ಆರೋಗ್ಯ ಚೇತರಿಕೆಗೆ ಸಾಧ್ಯ. ದೇಹದಲ್ಲಿ ಹೊಸ ರಕ್ತ ಬರುತ್ತದೆ. ಯುವ ಜನತೆ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಲು ಮುಂದಾಗುವಂತೆ ಪ್ರೇರಣೆಯಾಗಿ ಇಲ್ಲಿನ ದೇವದುರ್ಗದ ಪತ್ರಕರ್ತರೊಬ್ಬರು 45 ಬಾರಿ ರಕ್ತದಾನ ಮಾಡುವ ಮೂಲಕ ಸಮಾಜಕ್ಕೆ ಪ್ರೇರಣೆಯಾಗಿದ್ದಾರೆ.



ಸಮಾಜದಲ್ಲಿನ ಆಗು ಹೋಗುಗಳ ಬಗ್ಗೆ ಸದಾ ಸುದ್ದಿ ಹುಡುಕಾಟದಲ್ಲಿರುವವರ ಪತ್ರಕರ್ತರ ಪೈಕಿ ಈ ಗ್ರಾಮೀಣ ಭಾಗದ ಪತ್ರಕರ್ತ ಗಿರಿಯಪ್ಪ ಪೂಜಾರಿ ಬರೊಬ್ಬರಿ 45 ಬಾರಿ ರಕ್ತದಾನ ಮಾಡಿ ಅನೇಕರ ಜೀವ ಉಳಿಸಲು ಆಸರೆಯಾಗಿದ್ದಾರೆ. ಸಮಾಜದಲ್ಲಿ ಪತ್ರಕರ್ತರೆಂದರೆ ಜವಾಬ್ದಾರಿ, ಅವಸರದಲ್ಲಿರುವವರು, ಜನ ಸಾಮಾನ್ಯರ ಸಮಸ್ಯೆಗಳನ್ನು ಆಳುವ ಸರ್ಕಾರಕ್ಕೆ ತಲುಪಿಸುವ ಕೆಲಸದಲ್ಲಿರುವವರು ಎಂಬ ಭಾವನೆ ಇದ್ದೆ ಇದೆ. ಗಿರಿಯಪ್ಪ ಪೂಜಾರಿ ಅನೇಕ ಸಮಾಜಮುಖಿ ಸೇವೆ, ಸಿಐಟಿಯು ಕಾರ್ಮಿಕ ಸಂಘಟನೆ ತಾಲೂಕು ಸಂಚಾಲಕರಾಗಿ, ಪ್ರಗತಿಪರವಾದ ಸಾಹಿತ್ಯದ ಪುಸ್ತಕ ಮಾರಾಟ, ಓದುವ ಹವ್ಯಾಸ ರೂಢಿಸಿಕೊಂಡಿದ್ದಾರೆ. ಅತ್ಯಂತ ಕ್ರಿಯಾಶೀಲರಾಗಿ ತಮ್ಮ ಬದುಕಿನ ಬಂಡಿ ಸಾಗಿಸುತ್ತಿದ್ದಾರೆ.

ರಕ್ತದಾನ ಮಹಾದಾನ, ನಿಮ್ಮ ರಕ್ತಕ್ಕೆ ಜೀವ ಉಳಿಸುವ ಶಕ್ತಿ ಇದೆ ಎಂದು ಭಾಷಣ ಕೇಳಿ ಸುದ್ದಿ ಬರೆದರೆ ಕೆಲಸ ಮುಗಿಯಿತು ಎನ್ನುವ ಅನೇಕರೆ ಮಧ್ಯೆ ಇಂತಹ ಅಪರೂಪದ ಕಾಳಜಿ ಉಳ್ಳ ಪತ್ರಕರ್ತನಾಗಿರುವುದು ವಿಶೇಷವಾಗಿದೆ. ಕಳೆದ 15–20 ವರ್ಷಗಳಿಂದ ನಿರಂತರವಾಗಿ ರಕ್ತದಾನ ಮಾಡಿದ್ದಾರೆ ಇದರಲ್ಲಿ ಪ್ರಮುಖವಾಗಿ ಅಪಘಾತವಾದ ರೋಗಿಗಳಿಗೆ, ಗರ್ಭಿಣಿಯರಿಗೆ ನೆರವಾಗಿದ್ದಾರೆ.

ಪ್ರತಿವರ್ಷ ಕನಿಷ್ಠ ಎರಡು ಬಾರಿ ರಕ್ತ ದಾನ ಮಾಡುವ ಇವರು, ತಾವು ರಕ್ತದಾನ ಮಾಡುತ್ತಿರುವುದರಿಂದಲೇ ಯಾವುದೆ ಖಾಯಿಲೆ ತಮ್ಮ ಬಳಿ ಸುಳಿದಿಲ್ಲ. ದೇಹದಲ್ಲಿ ಹೊಸ ರಕ್ತ ಸಂಚಾರವಾಗುತ್ತಿದೆ. ರಕ್ತ ನೀಡುವುದರಿಂದ ಸಿಗುವ ಆನಂದ, ಜನರ ಹಾರೈಕೆಯಿಂದ ತಾನು ಆರೋಗ್ಯವಾಗಿರುವುದಾಗಿ ಹರ್ಷ ವ್ಯಕ್ತಪಡಿಸಿದ್ದಾರೆ. ನಮ್ಮ ನೌಕರಿ, ಕೆಲಸಗಳ ಮಧ್ಯೆಯೂ ಇಂತಹ ಸಣ್ಣ ಪುಟ್ಟ ಸೇವೆ ಮಾಡಿದಾಗ ಸಿಗುವ ತೃಪ್ತಿ ಎಷ್ಟೆ ಹಣ ಬಂದರೂ ಸಿಗದು ಎಂದು ಸಾರ್ಥಕ ಭಾವ ಮೆರೆದಿದ್ದಾರೆ.

# ರಹೀಂ ಖಾನ್‌ಗೆ ಮತ್ತೆ ಸಚಿವ ಸ್ಥಾನ ನೀಡಿ ಬೀದರ್ ಮಹಾನಗರಪಾಲಿಕೆ ಸದಸ್ಯರ ಆಗ್ರಹ

**ಬೀದರ್, ಜೂ. 18:** ರಾಜ್ಯ ಸಚಿವ ಸಂಪುಟದ ಎರಡನೇ ಹಂತದ ವಿಸ್ತರಣೆಯಲ್ಲಿ ಶಾಸಕ ರಹೀಂಖಾನ್ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಬೀದರ್ ಮಹಾನಗರ ಪಾಲಿಕೆ ಅಧ್ಯಕ್ಷ, ಸದಸ್ಯರು ಹಾಗೂ ಕಾಂಗ್ರೆಸ್ ಮುಖಂಡರು ಒತ್ತಾಯಿಸಿದರು.

ರಹೀಂಖಾನ್ ಅವರು ಪೌರಾಡಳಿತ ಸಚಿವರಾಗಿ ಜಿಲ್ಲೆ ಹಾಗೂ ರಾಜ್ಯದಲ್ಲಿ ಬಹಳಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ ಎಂದು ಮಹಾನಗರ ಪಾಲಿಕೆ ಅಧ್ಯಕ್ಷ ಮುಹಮ್ಮದ್ ಗೌಸ್, ಸದಸ್ಯರಾದ ಹಣಮಂತ ಮಲ್ಕಾಪುರ, ಅಬ್ದುಲ್ ನವೀದ್ ಶೇರಿಕಾರ್, ಸೌದ್ ಉರ್ ರೆಹಮಾನ್ ಶೇರಿಕಾರ್, ಮುಹಮ್ಮದ್ ಖಾಲೇದ್, ಮುಹಮ್ಮದ್ ವಸೀಂ ಬಾಬಾ, ಕಾಂಗ್ರೆಸ್ ಮುಖಂಡರಾದ ಧನರಾಜ ಹಂಗರಗಿ, ಮೋಹನ್ ಕಾಳೇಕರ್ ಹಾಗೂ ಸಮೀರ್ ನಗರದಲ್ಲಿ ನಡೆಸಿದ ಸಭೆಯಲ್ಲಿ ಹೇಳಿದರು.

ಬೀದರ್‌ನಲ್ಲಿ ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ಮಾಡಿದ್ದಾರೆ. ಕ್ಯಾನ್ಸರ್ ಚಿಕಿತ್ಸಾ ಕೇಂದ್ರ, ತುರ್ತು ನಿಗಾ ಕೇಂದ್ರ ಸ್ಥಾಪನೆ, ಜನವಾಡದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ, ಸರ್ಕಾರಿ ಎಂಜಿನಿಯರಿಂಗ್ ಕಾಲೇಜು, ಮಹಿಳಾ ಪದವಿ ಕಾಲೇಜು, ಬಾಲಕಿಯರ ಪದವಿಪೂರ್ವ ಕಾಲೇಜು, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಸತಿ ಶಾಲೆ, ವಸತಿ ನಿಲಯಗಳು ರಹೀಂಖಾನ್ ಅವರ ಕೊಡುಗೆಗಳಾಗಿವೆ ಎಂದು ತಿಳಿಸಿದರು.

ಬೀದರ್ ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ ಏರಿಸಿದ್ದಾರೆ. ಹುಮ್ನಾ ಬಾದ್, ಭಾಲ್ಕಿ, ಔರಾದ್ ಸ್ಥಳೀಯ ಸಂಸ್ಥೆಗಳನ್ನು ಉನ್ನತೀಕರಿಸಿದ್ದಾರೆ. ಮಹಾನಗರ ಪಾಲಿಕೆಗೆ ರೂ. 185 ಕೋಟಿ ವಿಶೇಷ ಅನುದಾನ ಮಂಜೂರು ಮಾಡಿಸಿದ್ದಾರೆ. ಯುಐಡಿಎಫ್ ಯೋಜನೆಯಡಿ ನಗರದಲ್ಲಿ ರಸ್ತೆ, ಚರಂಡಿ ಕಾಮಗಾರಿಗಳು ಭರದಿಂದ ಸಾಗಿವೆ. ಜಿಲ್ಲಾಡಳಿತ ಕಚೇರಿಗಳ ಸಂಕೀರ್ಣ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. ರಹೀಂಖಾನ್ ಅವರ ಸಾಧನೆಗಳು ಜಿಲ್ಲೆಯ ಆದಯುನಿಕ ಬೆಳವಣಿಗೆಗೆ ಮುನ್ನುಡಿ ಬರೆದಿವೆ. ಜಿಲ್ಲೆ ಹಾಗೂ ರಾಜ್ಯದ ಪ್ರಗತಿಗೆ ಅವರಿಗೆ ನೂತನ ಸರ್ಕಾರದಲ್ಲಿ ಸಂಪುಟದ ದರ್ಜೆ ಸಚಿವ ಸ್ಥಾನ ಕೊಡಬೇಕು ಎನ್ನುವುದು ಜನರ ಆಶಯವಾಗಿದೆ ಎಂದು ತಿಳಿಸಿದರು.

# ಬೆಳಗಾವಿ-ಹುನಗುಂದ-ರಾಯಚೂರು ಚತುಷ್ಪಥ ರಸ್ತೆ ಕಾಮಗಾರಿ ಪರಿಶೀಲನೆ



ಬೆಳಗಾವಿ ಸಂಸದ ಜಗದೀಶ ಶೆಟ್ಟರ್ ಅವರು ರಾಷ್ಟ್ರೀಯ ಹೆದ್ದಾರಿ ಪ್ರಧಿಕಾರ ನಿರ್ಮಿಸುತ್ತಿರುವ ಬೆಳಗಾವಿ–ಹುನಗುಂದ–ರಾಯಚೂರು ಚತುಷ್ಪಥ ರಸ್ತೆ ಕಾಮಗರಿಗಳನ್ನು ವೀಕ್ಷಿಸಿದರು.

**ಬೆಳಗಾವಿ, ಜೂ. 18:** ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವತಿಯಿಂದ ನಿರ್ಮಿಸಲಾಗುತ್ತಿರುವ ಬೆಳಗಾವಿ (ಶೇಗಣಮಟ್ಟಿ)–ಹುನಗುಂದ–ರಾಯಚೂರು ಚತುಷ್ಪಥ ರಸ್ತೆ ಯೋಜನೆಯ ಕಾಮಗಾರಿಯ ಪ್ರಗತಿ ಪರಿಶೀಲಿಸಲು ಸಂಸದ ಜಗದೀಶ್ ಶೆಟ್ಟರ್ ಅವರು ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ವೀಕ್ಷಣೆ ನಡೆಸಿದರು.

ಬೆಳಗಾವಿ ಜಿಲ್ಲೆಯ ಶೇಗಣಮಟ್ಟಿ ಗ್ರಾಮದ ಸಮೀಪದಿಂದ ಆರಂಭ ವಾಗುವ ಪ್ಯಾಕೇಜ್–1 ಅಡಿಯಲ್ಲಿ ಸುಮಾರು 42 ಕಿಲೋಮೀಟರ್ ಉದ್ದದ ರಸ್ತೆ ನಿರ್ಮಾಣ ಕಾಮಗಾರಿ ನಡೆಯುತ್ತಿದ್ದು, ಅದರ ವಿವಿಧ ಹಂತಗಳ ಪ್ರಗತಿಯನ್ನು ಸಂಸದರು ಪರಿಶೀಲಿಸಿದರು. ಈ ವೇಳೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಭಿಯಂತರ ಕಿಶೋರ ಹಾಗೂ ಇತರ ಅಧಿಕಾರಿಗಳು ಯೋಜನೆಯ ತಾಂತ್ರಿಕ ವಿವರಗಳು, ಕಾಮಗಾರಿಯ ಪ್ರಗತಿ ಮತ್ತು ಮುಂದಿನ ಕಾರ್ಯಯೋಜನೆ ಕುರಿತು ಮಾಹಿತಿ ನೀಡಿದರು. ಕಾಮಗಾರಿ ಗುಣಮಟ್ಟ ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊ ಳಿಸುವ ಕುರಿತು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಸಂಸದರು, ಈ ರಸ್ತೆ ನಿರ್ಮಾಣದಿಂದ ಉತ್ತರ ಕರ್ನಾಟಕ ಭಾಗದ ಸಂಪರ್ಕ ವ್ಯವಸ್ಥೆ ಮತ್ತಷ್ಟು ಸುಧಾರಣೆಯಾಗಲಿದ್ದು, ವ್ಯಾಪಾರ, ಕೈಗಾರಿಕೆ ಹಾಗೂ ಸಾರಿಗೆ ಕ್ಷೇತ್ರಗಳಿಗೆ ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟರು.

# ಕಪಿಲತೀರ್ಥಂನಲ್ಲಿ ಭಕ್ತರಿಗೆ ಉತ್ತಮ ಸೌಲಭ್ಯ– ಟಿಟಿಡಿ ಜೆಇಓ ಡಾ. ಎ. ಶರತ್



ತಿರುಪತಿ, ಜೂ.18. ಕಪಿಲ ತೀರ್ಥಂನಲ್ಲಿರುವ ಶ್ರೀ ಕಪಿಲೇಶ್ವರ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡುವ ಭಕ್ತರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಟಿಟಿಡಿ ಜೆಇಒ ಡಾ. ಎ. ಶರತ್ ಗುರುವಾರ ಸಂಜೆ ದೇವಸ್ಥಾನಕ್ಕೆ ಭೇಟಿ ನೀಡಿ, ಭಕ್ತರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸಲು ಸ್ಥಳ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಳೆಗಾಲ ಶೀಘ್ರದಲ್ಲೇ ಪ್ರಾರಂಭವಾಗಲಿರುವುದರಿಂದ ದೇವಸ್ಥಾನಕ್ಕೆ ಭೇಟಿ ನೀಡುವ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ವ್ಯವಸ್ಥೆಗಳನ್ನು ಮಾಡುವಂತೆ ಎಂಜಿನಿಯರಿಂಗ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅದೇ ರೀತಿ, ಭಕ್ತರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು, ಸರತಿ ಸಾಲುಗಳನ್ನು ಬಲಪಡಿಸುವುದು, ಒಳಚರಂಡಿ ವ್ಯವಸ್ಥೆಯನ್ನು ದುರಸ್ತಿ ಮಾಡುವುದು ಮತ್ತು ಸ್ವಚ್ಛತೆಯನ್ನು ಸುಧಾರಿಸುವುದು ಮುಂತಾದ ವಿಷಯಗಳ ಬಗ್ಗೆ ಸಮಗ್ರ ವರದಿಯನ್ನು ಸಿದ್ಧಪಡಿಸಬೇಕು ಮತ್ತು ತಕ್ಷಣ ಕ್ರಮ ಕೈಗೊಳ್ಳಬೇಕು.

## ತೆಲಂಗಾಣ, ಆಂಧ್ರ ಮುಖ್ಯಮಂತ್ರಿಗಳಿಗೂ ಆಹ್ವಾನ.

# ತುಂಗಭದ್ರಾ ಜಲಾಶಯದ ಹೊಸ ಕ್ರಸ್ಟ್‌ಗೇಟ್‌ಗಳ ಲೋಕಾರ್ಪಣೆ ಸಿದ್ಧತೆ

ರಾಯಚೂರು, ಜೂ. 18: ಮೂರು ರಾಜ್ಯಗಳ ನಡುವೆ ನೀರಿನ ಹಂಚಿಕೆ ಹಾಗೂ ಕಾಲುವೆ ಮೂಲಕ ನೀರು ಹರಿದು ಹೋಗುವ ತುಂಗಭದ್ರಾ ಜಲಾಶಯದ ಹೊಸ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾರ್ಯ ಬಹುತೇಕ ಪೂರ್ಣಗೊಂಡಿದ್ದು, ಇನ್ನೇನು ಉದ್ಘಾನೆಗೆ ಸಿದ್ಧತೆಗಳು ನಡೆಯುತ್ತಿವೆ. ರಾಯಚೂರು, ಕೊಪ್ಪಳ, ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳ ಒಟ್ಟು 18 ಲಕ್ಷ ಎಕರೆ ನೀರಾವರಿಯ ಅಚ್ಚುಪಕಟ್ಟು ಪ್ರದೇಶವನ್ನು ಹೊಂದಿರುವ ತುಂಗಭದ್ರಾ ಜಲಾಶಯವು ಆಂಧ್ರ ಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ರೈತರ ಜೀವನಾಡಿಯೂ ಆಗಿದೆ.



ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್‌ಗೇಟ್‌ಗಳ ಲೋಕಾರ್ಪಣೆ ಕಾರ್ಯಕ್ರಮ ಜೂನ್ 25ರಂದು ನಿಗದಿಯಾಗಿದ್ದು, ಜಿಲ್ಲಾಡಳಿತ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಸರಿಯಾಗಿ ಮುಂಗಾರು ಶುರುವಾದ ಹೊತ್ತಿಗೆ ಗೇಟ್‌ಗಳು ಸಿದ್ಧಗೊಂಡಿ ರುವುದು ರೈತ ಸಮುದಾಯಕ್ಕೆ ಖುಷಿ ಮೂಡಿಸಿದೆ.

ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆಂಧ್ರಪ್ರದೇಶದ ಸಿ.ಎಂ ಎನ್. ಚಂದ್ರಬಾಬು ನಾಯ್ಡು ಹಾಗೂ ತೆಲಂಗಾಣದ ಮುಖ್ಯಮಂತ್ರಿ ರೇವಂತ್ ರೆಡ್ಡಿ, ರಾಜ್ಯದ ಜಲಸಂಪನ್ಮೂಲ ಖಾತೆ ಸಚಿವರು ಪಾಲ್ಗೊಳ್ಳುವರು.

1953ರಲ್ಲಿ ಈ ಜಲಾಶಯ ನಿರ್ಮಾಣ ಕಾರ್ಯ ಪೂರ್ಣ ಗೊಂಡಿತ್ತು. ಆಗ ಅಳವಡಿಸಲಾಗಿದ್ದ ಗೇಟ್‌ಗಳ ಸಾಮರ್ಥ್ಯ ಗರಿಷ್ಠ ಐದು ದಶಕಗಳು ಎಂದು ತಜ್ಞರು ಹಿಂದೆಯೇ ಎಚ್ಚರಿಕೆ ನೀಡಿದ್ದರೂ ನಿರೀಕ್ಷೆಗಿಂತಲೂ ಹೆಚ್ಚು ಬಾಳಿಕೆ ಬಂದಿದ್ದರಿಂದ ಹಿಂದಿನ ಗೇಟ್‌ಗಳನ್ನೇ ಮುಂದುವರಿಸಲಾಗಿತ್ತು. ಆದರೆ, 2024ರ ಆಗಸ್ಟ್ 10ರ ರಾತ್ರಿ ಅಣೆಕಟ್ಟೆಯ ಸುಮಾರು 60 ಅಡಿ ಅಗಲ ಮತ್ತು 20 ಅಡಿ ಎತ್ತರದ ಗೇಟ್ ಕಳಚಿ ಹೋಗಿದ್ದರಿಂದ ಸಾಕಷ್ಟು ಪ್ರಮಾಣದ ನೀರು ವ್ಯರ್ಥವಾಗಿ ನದಿಗೆ ಹರಿದಿತ್ತು. ಈ ಘಟನೆ ಸಾಕಷ್ಟು ರಾಜಕೀಯ ವಾಕ್ಸಮರಕ್ಕೂ ಕಾರಣವಾಗಿತ್ತು. ಒತ್ತಾಯದ ಬಳಿಕ ಕಳೆದ ಡಿಸೆಂಬರ್‌ನಲ್ಲಿ ಕ್ರಸ್ಟ್‌ಗೇಟ್‌ಗಳ ಅಳವಡಿಕೆಯ ಅನುಭವ ಹೊಂದಿರುವ ಗುಜರಾತ್ ರಾಜ್ಯದ ಅಹಮದಾಬಾದ್‌ನ ಹಾರ್ಡ್‌ವೇರ್ ಟೂಲ್ಸ್ ಮತ್ತು ಮೆಷೆನ್ ಪ್ರಾಜೆಕ್ಟ್ ಲಿಮಿಡೆಟ್ ಕಂಪನಿಗೆ ಗುತ್ತಿಗೆ ನೀಡಲಾಗಿತ್ತು. ಇದಕ್ಕಾಗಿ ಗದಗ ಸಮೀಪದ ಅಡವಿ ಸೋಮಾಪುರದ ಯಾರ್ಡ್, ವಿಜಯನಗರ ಜಿಲ್ಲೆ ವ್ಯಾಪ್ತಿಯ ತುಂಗಭದ್ರಾ ಮಂಡಳಿ ಯಾರ್ಡ್, ಟಿಬಿ ಬೋರ್ಡ್ ಯಾರ್ಡ್ ಹೀಗೆ ವಿವಿಧೆಡೆ ಕ್ರಸ್ಟ್‌ಗೇಟ್‌ಗಳನ್ನು ತಯಾರಿಸಲಾಗಿತ್ತು.

ಗುತ್ತಿಗೆ ಪಡೆದ ಕಂಪನಿ ಈಗಾಗಲೇ ಪಶ್ಚಿಮ ಬಂಗಾಳದ ಪರಾಕ್ ಬ್ಯಾರೇಜ್ ಜಲಾಶಯ, ಕೆಆರ್‌ಎಸ್ ಜಲಾಶಯ, ನಾರಾಯಣಪುರ ಡ್ಯಾಮ್‌ಗಳ ಗೇಟ್ ಅಳವಡಿಸಿದ ಅನುಭವ ಹೊಂದಿದೆ. ತುಂಗಭದ್ರಾ ಜಲಾಶಯಕ್ಕೆ ರೂ.51.81 ಕೋಟಿ ಖರ್ಚು ಮಾಡಿ ನೂತನ ಗೇಟ್‌ಗಳನ್ನು ಅಳವಡಿಸಲಾಗಿದೆ.

ಡಿಸೆಂಬರ್‌ನಲ್ಲಿ ಗೇಟ್ ಅಳವಡಿಕೆ ಆರಂಭವಾದಾಗ ಎರಡನೇ ಬೆಳೆಗೆ ನೀರು ನೀಡುವುದಿಲ್ಲ ಎಂದು ಕಾಂಗ್ರೆಸ್ ಸರ್ಕಾರ ಸ್ಪಷ್ಟವಾಗಿ ಹೇಳಿದ್ದು ರೈತರ ವಿರೋಧಕ್ಕೆ ಕಾರಣವಾಗಿತ್ತು. ಬಳಿಕ ಆಗಿನ ಸಚಿವರು ಹಾಗೂ ಶಾಸಕರು ಒಂದು ಬೆಳೆಯ ನೀರಿಗೆ ತ್ಯಾಗ ಮಾಡಿದರೆ ಗೇಟ್‌ಗಳನ್ನು ಬದಲಿಸಲು ಅನುಕೂಲವಾಗುತ್ತದೆ. ಭವಿಷ್ಯದಲ್ಲಿ ಯಥೇಚ್ಛವಾಗಿ ನೀರು ಸಿಗುತ್ತದೆ ಎಂದು ಭರವಸೆ ತುಂಬಿದ್ದರು. ಆದರೆ ಜಲಾಶಯ ವ್ಯಾಪ್ತಿಯ ರಾಜ್ಯದ ಕೊಪ್ಪಳ, ರಾಯಚೂರು, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ರೈತರಿಂದ ಪ್ರತಿಭಟನೆಗಳು ನಡೆದಿದ್ದವು. ಮುಂಗಾರಿನ ವೇಳೆಗೆ ಗೇಟ್ ಅಳವಡಿಕೆಯಾಗುವ ಬಗ್ಗೆಯೂ ಅನುಮಾನ ವ್ಯಕ್ತವಾಗಿದ್ದವು. ಆದರೆ ಗುತ್ತಿಗೆ ಪಡೆದ ಕಂಪನಿ ಸಕಾಲದಲ್ಲಿ ಕೆಲಸ ಮುಗಿಸಿದ್ದರಿಂದ ಆತಂಕದಲ್ಲಿದ್ದರ ರೈತರಲ್ಲಿ ಮುಂದಹಾಸ ಮೂಡಿದಂತಾಗಿದೆ.

